ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 131 ಸಂಚಿಕೆ- 131 | PAGE-8 ಪುಟ-8 | ಬುಧುವಾರ 02.07.2025 | RS.2/- ಬೆಲೆ 2/-

# ಮಾಧ್ಯಮಗಳು ಸತ್ಯ ಮರೆಮಾಚುವ ಕೆಲಸ ಮಾಡಬಾರದು:ಸಿಎಂ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜು.01:ಮಾಧ್ಯಮಗಳು ವಸ್ತುಸ್ಥಿತಿಯನ್ನು ಜನರ ಮುಂದೆ ಇಡಬೇಕೇ ವಿನಃ, ಸತ್ಯವನ್ನು ಮರೆಮಾಚುವ ಕೆಲಸ ಮಾಡಬಾರದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುಲೋಚನಾ ಸಭಾಂಗಣದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾ ದಿನಾಚರಣೆ 2025, ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ವಿತರಣೆ ಹಾಗೂ ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆ ಉದ್ಘಾಟಿಸಿ ಮಾತನಾಡಿದರು.

ಮಾಧ್ಯಮಗಳು ದೀನ,ದಮನಿತರ ದನಿಯಾಗಿ ಕೆಲಸ ಮಾಡಬೇಕು. ಸಂವಿಧಾನಶಿಲ್ಪಿ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ನ್ಯಾಯ, ಸಮಾನತೆ ಎತ್ತಿಹಿಡಿದಿದ್ದರು. ಮಾಧ್ಯಮಗಳು ಸಹಿತ ಮೌಲ್ಯಗಳನ್ನು ಉಳಿಸಿ ಜನಪರ ದನಿಯಾಗಬೇಕು ಎಂದರು.

ನಮಗೆ ಈ ಕ್ಷಣ ಅಗತ್ಯವಿರುವುದು ಜಾತಿ ರಹಿತ, ಮಾನವೀಯ ಮೌಲ್ಯಗಳುಳ್ಳ ಸಮಾಜ. ಆದರೂ ಕೆಲವರು ದ್ವೇಷ, ಅಸಹನೆಯಿಂದ ಸಮಾಜದ ಸ್ವಾಸ್ಥ್ಯವನ್ನು ನಾಶಪಡಿಸುವ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ನಾವು ಯಾವುದೇ ಆಸ್ಪದ ನೀಡಬಾರದು. ಇತ್ತೀಚೆಗೆ ಸುಳ್ಳು ಸುದ್ದಿಗಳು ಮಾಧ್ಯಮಗಳಲ್ಲಿ ರಾರಾಜಿಸುತ್ತಿವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನಾಲ್ಕನೇ ಅಂಗ ಎನಿಸಿರುವ ಪತ್ರಿಕಾರಂಗ-ಕ್ಕೆ ಬಹಳಷ್ಟು ಜವಾಬ್ದಾರಿಗಳಿವೆ. ಕಾಸಿಗಾಗಿ ಸುದ್ದಿ, ಸುಳ್ಳು ಸುದ್ದಿಗೆ ಮಾಧ್ಯಮಗಳು ಕಡಿವಾಣ ಹಾಕುವುದು ಮುಖ್ಯ. ಪತ್ರಿಕಾ ಸ್ವಾತಂತ್ರ್ಯವನ್ನು ಉತ್ತಮವಾಗಿ ಬಳಸಿಕೊಂಡ ಒಟ್ಟು 180 ದೇಶಗಳ ಪೈಕಿ ಭಾರತ 151 ನೇ ಸ್ಥಾನದಲ್ಲಿದೆ. ಇದು ಉತ್ತಮ ಬೆಳವಣಿಗೆಯಲ್ಲ. ಮಾಧ್ಯಮದವರಾಗಿ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ, ತಮ್ಮ ಕೆಲಸವನ್ನು ಆತ್ಮಾವಲೋಕನ ಮಾಡಬೇಕು. ಮೌಢ್ಯವನ್ನು ತೊಡೆದು ಹಾಕಿ ವೈಚಾರಿಕತೆ ಬೆಳೆಸಿಕೊಳ್ಳಬೇಕು. ಸುಳ್ಳು ಸುದ್ದಿ ನಿಯಂತ್ರಣಕ್ಕೆ ಸರ್ಕಾರ ಸದ್ಯದಲ್ಲೇ ಕಾಯ್ದೆ ತರಲಿದೆ ಎಂದು ತಿಳಿಸಿದರು.

ಮ್ಯಾಗ್ಸಸೆ ಪ್ರಶಸ್ತಿ ವಿಜೇತ, ಹಿರಿಯ ಪತ್ರಕರ್ತರಾದ ಪಿ. ಸಾಯಿನಾಥ್ ಮಾತನಾಡಿ, 40 ವರ್ಷಗಳ ಹಿಂದೆ ಚಾಲ್ತಿಯಿದ್ದ ಪತ್ರಿಕೋದ್ಯಮ ಈಗಿಲ್ಲ. ಈಗ ಕಾರ್ಪೊ?ರೇಟ್ ವಲಯದೊಳಗೆ ಪತ್ರಿಕಾರಂಗ ತೆರೆದುಕೊಳ್ಳುತ್ತಿದೆ. ಮಾರ್ಚ್ 31, 2021ಕ್ಕೆ ದೇಶದ ಮಾಧ್ಯಮಗಳು ಒಟ್ಟು 2.51 ಟ್ರಿಲಿಯನ್ ಬಂಡವಾಳ ಹೊಂದಿದೆ. ಕೆಲವೇ ವ್ಯಕ್ತಿಗಳಲ್ಲಿ ದೇಶದ 70 ಮೀಡಿಯಾಗಳು ವಶವಾಗಿದೆ. 4 ನೇ ದೊಡ್ಡ ಆರ್ಥಿಕತೆ ಹೊಂದಿರುವ ನಮ್ಮ ರಾಷ್ಟ್ರದಲ್ಲಿನ 211 ಬಿಲಿಯನೇ???ಗಳಿಂದ ಶೇ.25ರಷ್ಟು ಜಿಡಿಪಿ ಉತ್ಪತ್ತಿಯಾಗುತ್ತಿದೆ. ಮಾಧ್ಯಮಗಳೂ ಆರ್ಥಿಕವಾಗಿ, ಸಬಲಗೊಂಡರೂ ಸುದ್ದಿಯ ಪ್ರಸಾರ ಹಾಗೂ ಗುಣಮಟ್ಟ ಕಡಿಮೆಯಾಗುತ್ತಿದೆ. ಈ ಕಾರ್ಪೊ?ರೇಟ್ ಜಗತ್ತು ಬಹುತೇಕ ಮಾಧ್ಯಮಗಳನ್ನು ನಿಯಂತ್ರಣದಲ್ಲಿಟ್ಟುಕೊಂಡಿದ್ದು, ಇದರಿಂದ ಸತ್ಯ, ಸಮಂಜಸ ಸುದ್ದಿ ಪ್ರಸಾರಕ್ಕೆ ಧಕ್ಕೆ ಉಂಟಾಗುತ್ತಿದೆ. ಕೋವಿಡ್-19 ಸಂದರ್ಭದಲ್ಲಿ ಸುಮಾರು 4000 ಪತ್ರಕರ್ತರು ತಮ್ಮ ಕೆಲಸವನ್ನು ಕಳೆದುಕೊಂಡರು. ಮಾಧ್ಯಮಗಳು ಸಹ ತನ್ನ ವ್ಯಾಪಾರಿ ಮನೋಭಾವದಿಂದ ನೈಜ ಪತ್ರಿಕೋದ್ಯಮವನ್ನು ಮರೆತಂತಿದೆ. ಇದು ಪತ್ರಕರ್ತ ಹಾಗೂ ಮಾಧ್ಯಮ ಈ ಇಬ್ಬರ ಭವಿಷ್ಯಕ್ಕೂ ಮಾರಕವೆಂದು ತಿಳಿಸಿದರು.

ಹಿರಿಯ ಸಾಹಿತಿಗಳು ಹಾಗೂ ಸಂಸ್ಕೃತಿ ಚಿಂತಕರಾದ ರಹಮತ್ ತರೀಕೆರೆ ಮಾತನಾಡಿ ಸುದ್ದಿಯನ್ನು ನೋಡುವ ದೃಷ್ಟಿಕೋನ, ವ್ಯಾಖ್ಯಾನದಲ್ಲಿ ಹಲವು ವ್ಯತ್ಯಾಸಗಳಿರುತ್ತದೆ. ನಿಜ ಸುದ್ದಿಯನ್ನು ವ್ಯಾಖ್ಯಾನಿಸಿದಾಗ ಅದರಲ್ಲಿ ಹತ್ತು ಹಲವು ಪದರಗಳು ತೆರೆದುಕೊಳ್ಳುತ್ತದೆ. ಕಳೆದ 20 ವರ್ಷಗಳಿಗೆ ಹೋಲಿಸಿದರೆ ಮಾಧ್ಯಮಗಳು ಮಲಿನಗೊಂಡಿದೆ. ನೋಡುಗರನ್ನು ಹೆಚ್ಚಿಸುವ, ವ್ಯಾಪಾರೀಕರಣದಲ್ಲಿ ಕೆಲಸವನ್ನು ಕೆಲವೊಂದು ಮಾಧ್ಯಮ ಮಾಡುತ್ತಿದೆ. ಇದು ಸಮಾಜಕ್ಕೆ ಮಾರಕ. ಭಾಷೆಯನ್ನು ದ್ವೇಷಕ್ಕೆ ಬಳಸುವ ಕೆಲಸ ಮಾಡಬಾರದು. ಮಾಧ್ಯಮಗಳು ಅಶ್ಲೀಲ ಭಾಷೆ ಬಳಸಿ ಸಮಾಜವನ್ನು ವಿರೂಪಗೊಳಿಸಬಾರದು. ಮಾಧ್ಯಮ ಸ್ವಾತಂತ್ರ್ಯವನ್ನು ಸಹ ಸದ್ಬಳಕೆ ಮಾಡಬೇಕೇ ವಿನಃ ಅದನ್ನು ಸ್ವಾರ್ಥಕ್ಕೆ ಬಳಸಿಕೊಳ್ಳಬಾರದು. ಇತ್ತೀಚೆಗೆ ನಾಟಕ, ಸಿನಿಮಾ ಸೇರಿದಂತೆ ಇತರ ಮಾಧ್ಯಮಗಳಲ್ಲಿ ಸಹ ಭಾಷೆಯ ಸ್ವರೂಪ ಪತನ ಹೊಂದುತ್ತಿದ್ದು, ನಾವು ಎಚ್ಚೆತ್ತುಕೊಳ್ಳದಿದ್ದರೆ, ಇದರಿಂದ ದುಷ್ಪರಿಣಾಮ ಅನುಭವಿಸಬೇಕಾಗುತ್ತದೆ ಎಂದರು.


ಕನ್ನಡ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಷಾ ಖಾನಂ ಮಾತನಾಡಿ, ಇಂದು ಪತ್ರಿಕಾ ದಿನಾಚರಣೆಯ ಹುಟ್ಟುಹಬ್ಬ. ಕನ್ನಡ ಪತ್ರಿಕೋದ್ಯಮದ ಇತಿಹಾಸಕ್ಕೆ 182 ವರ್ಷಗಳು ಸಂದಿವೆ. ಕನ್ನಡದ ಮೊದಲ ಪತ್ರಿಕೆ ಮಂಗಳೂರು ಸಮಾಚಾರ್ 1843ರ ಜುಲೈ 1 ರಿಂದ ಮಂಗಳೂರಿನಲ್ಲಿ ಬಾಸೆಲ್ ಮಿಷನ್ ಅವರ ಮುದ್ರಣಾಲಯದಿಂದ ಪ್ರಕಟವಾಯಿತು. ರೆವರೆಂಡ್ ಹರ್ಮನ್ ಮೋಗ್ಲಿಂಗ್ ಅವರು ಸಂಪಾದಕರಾಗಿದ್ದರು. ಜರ್ಮನ್ ಮತ ಪ್ರಚಾರಕರಾದ ಮೋಗ್ಲಿಂಗ್ ಅವರು ಕನ್ನಡ ಕಲಿತು ಸ್ಥಳೀಯ ಸಾಹಿತ್ಯ ಮತ್ತು ಶಿಕ್ಷಣದಲ್ಲಿ ಆಸಕ್ತಿ ಹೊಂದಿ ನಾಲ್ಕು ಪುಟಗಳನ್ನೊಳಗೊಂಡ ಮಂಗಳೂರು ಸಮಾಚಾರ್ ಪತ್ರಿಕೆಯನ್ನು ಪ್ರಕಟಿಸಿದರು. ವರ್ತಮಾನಗಳು, ವಾಚಕರ ವಾಣಿಗಳು, ಅಂಕಣಗಳನ್ನು, ಸಾಹಿತ್ಯಗಳನ್ನು ಕುರಿತು ಪತ್ರಿಕೆಯಲ್ಲಿ ಪ್ರಕಟವಾಗುತ್ತಿತ್ತು ಎಂದು ಪತ್ರಿಕೋದ್ಯಮದ ಹಿನ್ನಲೆಯನ್ನು ತಿಳಿಸಿದರು.

ಮುಂಬೈ, ಕಾಸರಗೋಡು, ಚತ್ತೀ???ಘಡ್, ದುಬೈ, ಅಮೆರಿಕಾದಲ್ಲಿ ಕನ್ನಡಿಗರು ಇರುವ ಜಾಗದಲ್ಲಿ ಕನ್ನಡ ಭಾಷೆ ಬೆಳೆದಿದೆ. ಸುಳ್ಳು ಸುದ್ದಿ ಪ್ರಸಾರ ಕುರಿತಂತೆ ಮಾಧ್ಯಮ ಅಕಾಡೆಮಿ ವತಿಯಿಂದ ಸೆಮಿನಾರ್ ಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಮಾತನಾಡಿ, ಮೂರು ದಶಕಗಳಿಂದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ವಿತರಿಸುವ ಕುರಿತು ಬೇಡಿಕೆ ಇಡಲಾಗಿತ್ತು, ಇದನ್ನು ಮುಖ್ಯಮಂತ್ರಿಗಳು ಕಾರ್ಯರೂಪಕ್ಕೆ ತಂದಿದ್ದಾರೆ. ಅದೇ ರೀತಿ ಪತ್ರಕರ್ತರ ಆಸ್ಪತ್ರೆ ವೆಚ್ಚ ಭರಿಸಲು ಯೋಜನೆ ನೀಡಬೇಕು ಎಂದು ಬೇಡಿ

(2ನೇ ಪುಟ ನೋಡಿ)

## ವಾಲ್ಮೀಕಿ ಹಗರಣ: ಎಸ್‌ಐಟಿ ರದ್ದು, ಸಿಬಿಐ ತನಿಖೆಗೆ ಆದೇಶ




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.1: ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರ್ಬಳಕೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಿ ಹೈಕೋರ್ಟ್ ಮಹತ್ವದ ಆದೇಶ ಪ್ರಕಟಿಸಿದೆ.

ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕೋರ್ಟ್ ವಿಶೇಷ ತನಿಖಾ ತಂಡದ ತನಿಖೆಯನ್ನು ರದ್ದುಗೊಳಿಸಿದೆ. ಅಷ್ಟೇ ಅಲ್ಲದೇ ಎಸ್‌ಐಟಿ ಸಂಗ್ರಹಿಸಿದ ಎಲ್ಲಾ ದಾಖಲೆಗಳನ್ನು ಸಿಬಿಐಗೆ ವರ್ಗಾಯಿಸುವಂತೆ ಆದೇಶಿಸಿದೆ.

ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ 2024ರ ಸೆಪ್ಟೆಂಬರ್ 30ರಂದು ಮುಕ್ತಾಯಗೊಳಿಸಿ ತೀರ್ಪು ಕಾಯ್ದಿರಿಸಿತ್ತು. ಹೈಕೋರ್ಟ್ ಆದೇಶದಿಂದ ರಾಜ್ಯ ಸರ್ಕಾರಕ್ಕೆ

(2ನೇ ಪುಟ ನೋಡಿ)

## ನಾನು ಲಕ್ಕಿ, ಅದಕ್ಕೆ ಸಿಎಂ ಆಗಿದ್ದೇನೆ: ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.1: 'ಹೌದು, ನಾನು ಲಕ್ಕಿ, ಅದಕ್ಕೆ ಸಿಎಂ ಆಗಿದ್ದೇನೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದಾರೆ.

ಸಿದ್ದರಾಮಯ್ಯ ಲಕ್ಕಿ, ಲಾಟರಿ ಹೊಡೆದುಬಿಟ್ಟ, ಅವನ ಗ್ರಹಚಾರ ಚೆನ್ನಾಗಿತ್ತು, ಅದಕ್ಕೆ ಸಿಎಂ ಆಗಿ ಬಿಟ್ಟ ಎಂದು ಹಿರಿಯ ಕಾಂಗ್ರೆಸ್ ಶಾಸಕ ಬಿ.ಆರ್ ಪಾಟೀಲ್ ಅವರು ಹೇಳಿರುವ ವಿಡಿಯೋವೊಂದು ವೈರಲ್ ಆಗಿದ್ದು, ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.


ಆಳಂದ ಕಾಂಗ್ರೆಸ್ ಶಾಸಕ ಬಿ ಆರ್ ಪಾಟೀಲ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, "ಹೌದು, ನಾನು ಅದೃಷ್ಟಶಾಲಿ. ಅದಕ್ಕಾಗಿಯೇ ನಾನು ಮುಖ್ಯಮಂತ್ರಿಯಾದೆ. ನಾನು ಅವರು ಒಟ್ಟಿಗೆ ಶಾಸಕರಾಗಿದ್ದು ಅದಕ್ಕೆ ಹೇಳಿರಬಹುದು. ಅದಕ್ಕೆ ನಾನು ಏನು ಮಾಡಲಿ. ಈ ಬಗ್ಗೆ ಬಿ.ಆರ್?.ಪಾಟೀಲ್ ಕರೆಸಿ ಮಾತಾಡುತ್ತೇನೆ" ಎಂದು ಸುದ್ದಿಗಾರರಿಗೆ ತಿಳಿಸಿದರು.

"ಜೆಡಿ(ಎಸ್) ತೊರೆದು ಕಾಂಗ್ರೆಸ್ ಸೇರಿದ ಎಂಟು ಶಾಸಕರಲ್ಲಿ ನಾನೂ ಒಬ್ಬ. ಕೆಲವರು ಶಾಸಕರಾಗಿದ್ದರೆ, ಇನ್ನು ಕೆಲವರು ಸಚಿವರಾಗಿದ್ದಾರೆ. ನಮ್ಮಲ್ಲಿ ಸಿದ್ದರಾಮಯ್ಯ ಅದೃಷ್ಟಶಾಲಿ, ಅವರು ಮುಖ್ಯಮಂತ್ರಿಯಾದರು" ಎಂದು ಪಾಟೀಲ್ ಹೇಳಿದ್ದಾರೆ.

ಬಿಆರ್ ಪಾಟೀಲ್ ಅವರು ಯಾರದ್ದೋ ಜೊತೆ ಫೋನ್ ನಲ್ಲಿ ಮಾತಾಡುವಾಗ ಮೊಬೈಲ್ ನಲ್ಲಿ

(2ನೇ ಪುಟ ನೋಡಿ)

## ವೈದ್ಯರನ್ನು ಮಾನವೀಯತೆಯಿಂದ ಕಾಣಲು ಕರೆ




ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ:ಜು.1:ವೈದ್ಯೋನಾರಾಯಣ ಹರಿ ಎಂದು ಹೇಳಲಾಗುತ್ತದೆ. ವೈದ್ಯರು ದೇವರಿದ್ದಂತೆ ಅವರು ರೋಗದಿಂದ ನರಳುತ್ತಿರುವವರಿಗೆ ಚಿಕಿತ್ಸೆ ನೀಡಿ ಬದುಕಿಸುವ ಕೆಲಸ ಮಾಡುತ್ತಾರೆ. ಆದ್ದರಿಂದ ಅವರನ್ನು ದೇವರಿಗೆ ಹೋಲಿಸಲಾಗಿದೆ. ಆದರೆ ವೈದ್ಯರು ಮಾನವರೇ ವಿವಿಧ ಕಾರಣಗಳಿಂದ ಚಿಕಿತ್ಸೆ ಸಫಲವಾಗಲಿಲ್ಲವೆಂದಾಗ ವೈದ್ಯರ ಮೇಲೆ ಹಲ್ಲೆ, ಆಸ್ಪತ್ರೆ ಧ್ವಂಸದಂತಹ ಘಟನೆಗಳು ಇತ್ತೀಚೆಗೆ ಹೆಚ್ಚಾಗುತ್ತಿರುವುದು ವೈದ್ಯರಿಗೆ ಸುರಕ್ಷತೆಯಿಲ್ಲದಂತಾಗಿದೆ. ಅವರು ಭಯದಲ್ಲಿ ಬದುಕುವಂತಾಗಿದೆ. ಕಾರಣ ವೈದ್ಯರನ್ನು ಮಾನವೀಯತೆಯಿಂದ ಕಾಣುವುದು ಅಗತ್ಯ ಎಂದು ಹುಮನಾಬಾದ ಭಾರತೀಯ ವೈದ್ಯಕೀಯ ಸಂಘ(ಐಎಂಎ) ಅಧ್ಯಕ್ಷ ನಾಗೇಶ ಸಾಲಿಮಠ ಕರೆ ನೀಡಿದರು.

ಅವರು ಇಂದು ಐಎಂಎ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ವೈದ್ಯಕೀಯ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ವೈದ್ಯಕೀಯ ಕ್ಷೇತ್ರ ಇಂದು ವಿಶಾಲವಾಗಿ ಬೆಳೆದಿದೆ, ಆಧುನಿಕ ತಂತ್ರಜ್ಞಾನದ ಬಳಕೆ ಹೆಚ್ಚಿದೆ ಆದರೂ ಕೆಲವೊಮ್ಮೆ ಅಹಿತಕರ ಘಟನೆಗಳು ನಡೆಯುತ್ತವೆ. ಅದ-ಕ್ಕೆ ನೇರ ವೈದ್ಯರು ಹೊಣೆಯಲ್ಲ ಏಕೆಂದರೆ ಆಸ್ಪತ್ರೆಗೆ ರೋಗಿಯನ್ನು ಚಿಕಿತ್ಸೆಗೆ ತಂದಾಗ ರೋಗಿ ಚಿಕಿತ್ಸೆಗೆ ಸ್ಪಂದಿಸುವ ಹಂತ ದಾಟಿರಬಹುದು, ಅದನ್ನು ಅರ್ಥ ಮಾಡಿಕೊಳ್ಳದ ರೋಗಿಯ ಸಂಬಂಧಿಕರು ತಮ್ಮವರನ್ನು ಕಳೆದುಕೊಂಡಾಗ ದುಃಖದಲ್ಲಿ ವೈದ್ಯರೇ ರೋಗಿಯ ಸಾವಿಗೆ ಕಾರಣರೆ-ಂದು ಭಾವಿಸಿ ಅವರ ಮೇಲೆ ಹಲ್ಲೆ ಮಾಡುವುದು, ಆಸ್ಪತ್ರೆಯ ಪಿಠೋಪಕರಣ ಧ್ವಂಸಗೊಳಿಸುವುದು, ಸಿಬ್ಬಂದಿಗಳ ಮೇಲೆ ಹಲ್ಲೆ ಮಾಡುವ ಮೂಲಕ ವೈದ್ಯಕೀಯ ಸಿಬ್ಬಂದಿ ಹಾಗೂ ವೈದ್ಯರಿಗೆ ರಕ್ಷಣೆಯಿಲ್ಲದಂತಾಗಿದೆ.

ವೈದ್ಯರು ಈ ಸಮಾಜದಿಂದ ಬಂದವರು ಅವರು ನಮ್ಮಂತೆ ಎಂದು ತಿಳಿದು ಎಲ್ಲರೂ ನಡೆದು-ಕೊಂಡರೆ ಇಂತಹ ಘಟನೆಗಳು ನಡೆಯುವುದಿಲ್ಲ. ಕಾರಣ ವೈದ್ಯರು ಮಾನವರು, ಅವರು ದೇವರಲ್ಲ ಅವರು ತಮ್ಮ ಕೈಯಿಂದಾದಷ್ಟು ಜನರ ರೋಗ ನಿವಾರಣೆಯಲ್ಲಿ ತೊಡಗಿಸಿಕೊಂಡಿರುವರು ಎಂಬುದನ್ನು ಮನಗಂಡರೆ ಇಂತಹ ಘಟನೆಗಳು ಮರುಕಳಿಸುವುದಿಲ್ಲ. ಈ ನಿಟ್ಟಿನಲ್ಲಿ ರೋಗಿಗಳ ಸಂಬಂಧಿಕರು ಹಾಗೂ ವೈದ್ಯರ ಮಧ್ಯೆ ಸಮನ್ವಯತೆಯಿರುವುದು ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಡಾ.ನಾಗನಾಥ ಹುಲಸೂರೆ, ಡಾ.ಮಹಾದೇವ ಸ್ವಾಮಿ, ಡಾ.ಶಶಿಕಾಂತ ಹಾರಕೂಡೆ, ಡಾ.ಚಿದ್ರಿ, ಡಾ.ರೋಹಿತ ರಘೋಜಿ ಹಾಗೂ ಇತರರಿದ್ದರು.

## ಆಲಮಟ್ಟಿ, ನಾರಾಯಣಪುರ ಡ್ಯಾಂನಲ್ಲಿ 80.58 ಟಿಎಂಸಿ ನೀರು ಸಂಗ್ರಹ

## ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ಜು. 8 ರಿಂದ ನೀರು



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜು.1-ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಲ್ಲಿ 80.58 ಟಿಎಂಸಿ ನೀರು ಸಂಗ್ರಹವಾಗಿದ್ದು, ಜುಲೈ 8 ರಿಂದ ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ಹೆಚ್ಚು ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಕೃಷ್ಣಾ ಮೇಲ್ದಂಡೆ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರಾದ ಆರ್.ಬಿ.ತಿಮ್ಮಾಪೂರ ತಿಳಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ಮಂಗಳವಾರ ಜರುಗಿದ ಕೃಷ್ಣಾ ಮೇಲ್ದಂಡೆ ಯೋಜನೆ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಲಮಟ್ಟಿ ಮತ್ತು ನಾರಾಯಣಪುರ ಡ್ಯಾಂಗಳಲ್ಲಿ 80.58 ನೀರು ಸಂಗ್ರಹವಾಗಿದ್ದು, ಕಳೆದ ಸಾಲಿಗಿಂತ 54.77 ಟಿಎಂಸಿ ಹೆಚ್ಚುವರಿ ನೀರು ಸಂಗ್ರಹವಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶವು ಮುಂಗಾರು ಹಂಗಾಮಿನ ಮಳೆ ಆಧರಿತವಾಗಿದ್ದು, ಮಳೆಯನ್ನು ಆಧರಿಸಿ ಅವಶ್ಯಕತೆಗೆ ತಕ್ಕಂತೆ ನೀರು ಹರಿಸಲು ಸಚಿವರು ಸೂಚಿಸಿದರು.

ಸಭೆಯಲ್ಲಿ ಜುಲೈ 8 ರಿಂದ ಮುಂದಿನ 120 ದಿನಗಳಿಗೆ ಮುಂಗಾರು

(2ನೇ ಪುಟ ನೋಡಿ)

## ಜನರ ಸಮಸ್ಯೆಗಳನ್ನು ಬಗೆಹರಿಸುವ ಕಾರ್ಯಕ್ರಮವೇ ಜನಸ್ಪಂದನ :ಸಚಿವ ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.01: ಇದ್ದ ಸ್ಥಳದಲ್ಲಿಯೇ ಜನರ ಸಮಸ್ಯೆಗಳನ್ನು ಬಗೆಹರಿಸುವ ಕರ್ನಾಟಕ ಸರ್ಕಾರದ ಜನಪ್ರಿಯ ಕಾರ್ಯಕ್ರಮವೇ ಜನಸ್ಪಂದನ ಕಾರ್ಯಕ್ರಮವಾಗಿದೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ತಿಳಿಸಿದರು.

ಅವರು ಮಂಗಳವಾರ ಜನವಾಡ ನಾಡ ಕಚೇರಿ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ತಾಲೂಕಾ ಮಟ್ಟದ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜನವಾಡ ಭಾಗದಲ್ಲಿ ಏನೇ ಸಮಸ್ಯೆಯಾಗಿರಲಿ ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿಗಳು ಇಲ್ಲೆ ಇದ್ದು ನೇರವಾಗಿ ಭೇಟಿ ಮಾಡಿ ಸಮಸ್ಯೆ ಬಗೆಹರಿಸಲಿದ್ದಾರೆ. ಜನವಾಡದಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಆಸ್ಪತ್ರೆ ನಿರ್ಮಾಣ ಆಗಲಿದೆ ಹಾಗೂ ಈ ವಿಭಾಗದಲ್ಲಿ ಅನೇಕ ರಸ್ತೆಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿವೆ ಎಂದರು.

(2ನೇ ಪುಟ ನೋಡಿ)

## ಶಾಸಕ ಇಕ್ಬಾಲ್ ಹುಸೇನ್‌ಗೆ ಶೋಕಾಸ್ ನೋಟಿಸ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.1: ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಪರವಾಗಿ 100 ಶಾಸಕರು ಸಿಎಂ ಬದಲಾವಣೆ ಬಯಸಿದ್ದಾರೆ ಎಂದು ಹೇಳಿದ್ದ ರಾಮನಗರ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ಮಂಗಳವಾರ ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ.

ಮುಖ್ಯಮಂತ್ರಿ ಬದಲಾವಣೆ ಕುರಿತು ಹೇಳಿಕೆ ನೀಡಿದ ಇಕ್ಬಾಲ್ ಹುಸೇನ್‌ಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಕಾರಣ ಕೇಳಿ ನೋಟಿಸ್ ನೀಡಿದ್ದು, ಒಂದು ವಾರದ ಒಳಗಾಗಿ ತಮ್ಮ ಹೇಳಿಕೆಗಳ ಬಗ್ಗೆ ಸಮಜಾಯಿಷಿ ನೀಡುವಂತೆ ಸೂಚಿಸಿದ್ದಾರೆ.

ಇಂದು ಮುಖ್ಯಮಂತ್ರಿ ಬದಲಾವಣೆ ವಿಷಯದಲ್ಲಿ ಪಕ್ಷದಲ್ಲಿ ಗೊಂದಲ ಹಾಗೂ ಮುಜುಗರ ಉಂಟು ಮಾಡುವಂತಹ ಹೇಳಿಕೆಗಳನ್ನು ಮಾಧ್ಯಮಗಳಿಗೆ ನೀಡಿದ್ದೀರಿ. ತಮ್ಮ ಈ ಬಹಿರಂಗ ಹೇಳಿಕೆಗಳು ಪಕ್ಷಕ್ಕೆ ಮುಜುಗರ ಉಂಟು ಮಾಡುವುದಲ್ಲದೆ, ಪಕ್ಷದ ಶಿಸ್ತು ಉಲ್ಲಂಘನೆ ಆಗಿರುತ್ತದೆ. ತಮ್ಮ ಈ ಅಶಿಸ್ತಿನ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಈ ಕಾರಣ ಕೇಳಿ ನೋಟಿಸ್ ನೀಡಲಾಗಿದೆ ಎಂದು ಡಿಕೆ ಶಿವಕುಮಾರ್ ಅವರು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದೊಳಗೆ "ಅಸಮಾಧಾನ" ಮತ್ತು ನಾಯಕತ್ವ ಬದಲಾವಣೆಯ ಬಗ್ಗೆ ಊಹಾಪೋಹಗಳ ನಡುವೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಒನ್ ಟು ಒನ್ ಸಭೆ ನಡೆಸುತ್ತಿರುವ ಸಮಯದಲ್ಲೇ ಇಕ್ಬಾಲ್ ಹುಸೇನ್

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಮರೆಮಾಚುವ ಕೆಲಸ ಮಾಡಬಾರದು:ಸಿಎಂ

ಕೆಗೆ ಸ್ಪಂದಿಸಿ "ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ" ಯನ್ನು ಉದ್ಘಾಟಿಸಿ ನುಡಿದಂತೆ ನಡೆದಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಯೋಜನೆಯನ್ನು ಲೋಕಾರ್ಪಣೆಗೊಳಿಸಿ, ಫಲಾನುಭವಿಗಳಿಗೆ ಬಸ್ ಪಾಸ್ ವಿತರಿಸಿದರು. ಇದರಿಂದ 5500 ಕ್ಕೂ ಹೆಚ್ಚು ಗ್ರಾಮೀಣ ಪತ್ರಕರ್ತರು ಪ್ರಯೋಜನೆ ಪಡೆಯಲಿದ್ದು, 16 ಕೋಟಿ ವೆಚ್ಚವಾಗಲಿದೆ. ಮುಖ್ಯಮಂತ್ರಿ ಮಾಧ್ಯಮ ಸಂಜೀವಿನಿಯಡಿ ಮಾನ್ಯತೆ ಪಡೆದ ಪತ್ರಕರ್ತರಿಗೆ ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ 5 ಲಕ್ಷದವರೆಗೆ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಈ ಯೋಜನೆಯಡಿ ರಾಜ್ಯದ 25000 ಪತ್ರಕರ್ತರು ಸೇರ್ಪಡೆಯಾಗಿದ್ದು, ಪ್ರತಿ ವರ್ಷ ಇದಕ್ಕೆ 3.60 ಕೋಟಿ ವೆಚ್ಚವಾಗುತ್ತಿದ್ದು, ಈಗಾಗಲೇ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ 6.79 ಕೋಟಿ ಠೇವಣಿ ಇರಿಸಲಾಗಿದೆ. ಅಲ್ಲದೆ ಫಲಾನುಭವಿಗಳಿಗೆ ಮಾಧ್ಯಮ ಅಕಾಡೆಮಿಯಿಂದ ಎಸ್ ಸಿ ಪಿ/ ಟಿಎಸ್ ಪಿ ಯೋಜನೆಯಡಿ ಮೋಜೋ ಕಿಟ್ ಸಹ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ಬಿ.ಬಿ. ಕಾವೇರಿ, ವಾರ್ತಾ ಇಲಾಖೆ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕಂಠೀರವ ಸ್ಟುಡಿಯೋ ಅಧ್ಯಕ್ಷರಾದ ಮೊಹಬೂಬ್ ಪಾಷಾ, ಕರ್ನಾಟಕ ಪತ್ರಕರ್ತೆಯರ ಸಂಘ ಅಧ್ಯಕ್ಷರಾದ ಶ್ರೀಮತಿ ಪದ್ಮಾ ಶಿವಮೊಗ್ಗ, ಕರ್ನಾಟಕ ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಸಹನಾ .ಎಂ ಸೇರಿದಂತೆ ಹಿರಿಯ ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಜನಸ್ಪಂದನ :ಸಚಿವ ರಹೀಂ ಖಾನ್

ಎ ಮತ್ತು ಬಿ ಖಾತಾಗಳ ಸೇವೆಗಳು ಪಂಚಾಯಿತಿ ಮಟ್ಟದಲ್ಲಿ ಕೂಡ ಶೀಘ್ರದಲ್ಲೇ ಆರಂಭವಾಗಲಿದೆ. ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ ಫಲಾನುಭವಿಗಳಿಗೆ ನೇರವಾಗಿ ಸೌಲಭ್ಯ ಒದಗಿಸುವ ಪಂಚ ಗ್ಯಾರಂಟಿಗಳು ಜನರ ಜೀವನ ಮಟ್ಟ ಸುಧಾರಿಸುತ್ತಿವೆ ಎಂದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ, ಜನಸ್ಪಂದನ ಕಾರ್ಯಕ್ರಮವು ಜನರಿಗೆ ಅತ್ಯಂತ ಉಪಯುಕ್ತವಾದ ಕಾರ್ಯಕ್ರಮವಾಗಿದೆ ಇದರಿಂದ ಜನರು ನೇರವಾಗಿ ಸ್ಥಳದಲ್ಲಿಯೇ ಪರಿಹಾರ ಪಡೆದುಕೊಳ್ಳಬಹುದು ಎಂದರು.

ಈ ಜನಸ್ಪಂದನ ಕಾರ್ಯಕ್ರಮದಲ್ಲಿ ಒಟ್ಟು 253 ಅರ್ಜಿಗಳು ಪಡೆದುಕೊಂಡಿದ್ದು ಇದರಲ್ಲಿ ರಸ್ತೆ, ಮನೆ, ನೀರು, ಸಾರಿಗೆ, ವಿದ್ಯುತ್, ಜಮೀನು, ಒಳಚರಂಡಿ–ಸ್ವಚ್ಛತೆ, ಪಿಂಚಣಿ, ರೇಷನ್ ಕಾರ್ಡ್, ಗಂಗಾ ಕಲ್ಯಾಣ ಯೋಜನೆಯಡಿ ಬೋರವೆಲ್, ದೈಹಿಕ ಅಂಗವಿಕಲತೆ ಪ್ರಮಾಣ ಪತ್ರ ಸಮಸ್ಯೆ ಮತ್ತು ಜನವಾಡ ಮುಖ್ಯ ರಸ್ತೆಯಲ್ಲಿರುವ ಮಧ್ಯ ಅಂಗಡಿ ಸ್ಥಳಾಂತರಿಸುವ ಕುರಿತು ಅರ್ಜಿಗಳಿದ್ದು, ಹಲವು ಅರ್ಜಿಗಳನ್ನು ಸ್ಥಳದಲ್ಲಿಯೇ ಮತ್ತು ಇನ್ನೂಳಿದ ಅರ್ಜಿಯನ್ನು 7 ದಿನದ ಒಳಗಾಗಿ ಇತ್ಯಾರ್ಥಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿರೀಶ್ ಬದೋಲೆ ಮಾತನಾಡಿ, ತಮ್ಮ ವ್ಯಾಪ್ತಿಯಲ್ಲಿ ಬರುವ ಸಮಸ್ಯೆಗಳು ಈಗಾಗಲೇ ಕೆಲವು ಇತ್ಯಾರ್ಥಗೊಳಿಸಲಾಗಿದ್ದು ಇನ್ನೂಳಿದವು ಶೀಘ್ರವಾಗಿ ಪರಿಹರಿಸಿ ಈ ಕಾರ್ಯಕ್ರಮವನ್ನು ಅರ್ಥಪೂರ್ಣವಾಗುವಂತೆ ಮಾಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಧವಾ ಆದೇಶ ಪತ್ರ, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ ಫಲಾನುಭವಿಗಳಿಗೆ ಮನೆಗಳ ಹಕ್ಕು ಪತ್ರ , ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡಲು ಜಾಬ್ ಕಾರ್ಡ್ ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಅಪರ ಜಿಲ್ಲಾಧಿಕಾರಿ ಡಾ. ಈಶ್ವರ ಉಳ್ಳಾಗಡ್ಡಿ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬೀದರ ತಹಸಿಲ್ದಾರ್ ಡಿ. ಮೆಹತ್, ತಾಲೂಕಾ ಪಂಚಾಯತ್ ನಿರ್ವಹಣಾಧಿಕಾರಿ ಮಾಣಿಕರಾವ ಪಾಟೀಲ , ನಾಡ ತಹಸಿಲ್ದಾರ್ ಅಶೋಕ್ ರಾಜಗಿರಾ, ಜಿಲ್ಲಾಧಿಕಾರಿ ಕಚೇರಿ ಶಿರಸ್ತೇದಾರ್ ಕಿರಣ್ ಕುಮಾರ್, ಜನವಾಡ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವೈಜಯಂತಿಬಾಯಿ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಜನವಾಡ ಹೊಬಳಿಯ ವಿವಿಧ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪ್ರದೇಶಗಳಿಗೆ ಜು. 8 ರಿಂದ ನೀರು

ಹಂಗಾಮಿಗೆ ನೀರು ಪೂರೈಸಲು ತೀರ್ಮಾನಿಸಲಾಯಿತು. ಒಳಹರಿವು ಆಧರಿಸಿ ಕಾಲುವೆಗಳಿಗೆ ಸತತವಾಗಿ ನೀರು ಬಿಡಲು ಸಚಿವ ತಿಮ್ಮಾಪೂರ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನಾ ವ್ಯಾಪ್ತಿ ಜಿಲ್ಲೆಗಳ ಸಚಿವರು, ಶಾಸಕರು, ಬೀಳಗಿ ಶಾಸಕ ಜೆ.ಟಿ.ಪಾಟೀಲ ಸೇರಿದಂತೆ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಕ್ಕೆ ಸಂಬಂಧಿಸಿದ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್ಐಟಿ ರದ್ದು, ಸಿಬಿಐ ತನಿಖೆಗೆ ಆದೇಶ

ಭಾರೀ ಹಿನ್ನಡೆಯಾಗಿದೆ.ಬೆಂಗಳೂರು ಪೂರ್ವ ವಲಯದ ಯೂನಿಯನ್ ಬ್ಯಾಂಕ್ ಡಿಜಿಎಂ ಜೆ. ಮಹೇಶ್ ಎಂಬುವವರು ಸರ್ಕಾರಿ ಅಧಿಕಾರಿಗಳು, ಜನಪ್ರತಿನಿಧಿಗಳು, ಖಾಸಗಿ ವ್ಯಕ್ತಿಗಳು ಶಾಮೀಲಾಗಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದರು. ಹಿರಿಯ ಅಧಿಕಾರಿಗಳ ಪತ್ರದ ಅನ್ವಯ ಬ್ಯಾಂಕಿನ ಮೂವರು ಸೇರಿ ಐವರ ವಿರುದ್ಧ ಸಿಬಿಐ ಎ???ಆರ್ ದಾಖಲು ಮಾಡಿ ಈಗಾಗಲೇ ತನಿಖೆ ಆರಂಭಿಸಿದೆ.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಇತ್ತೀಚೆಗೆ ಶಿವಮೊಗ್ಗದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೂ ಮುನ್ನ ಬರೆದಿದ್ದ ಡೆತ್‌ನೋಟ್‌ನಲ್ಲಿ ಮೂವರು ಹೆಸರು ಹಾಗೂ ಬಹುಕೋಟಿ ಹಗರಣ ನಡೆದಿರುವ ಬಗ್ಗೆ ಉಲ್ಲೇಖಿಸಿದ್ದರು. ಈ ಬೆನ್ನಲ್ಲೇ ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ. ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

ಈ ಪ್ರಕರಣಕ್ಕೆ ಸಂಬಂದಿಸಿದಂತೆ ಜಾರಿ ನಿರ್ದೇಶನಾಲಯ ಸಹ ತನಿಖೆ ನಡೆಸುತ್ತಿದೆ. ಮಾಜಿ ಸಚಿವ ಹಾಗೂ ಕಾಂಗ್ರೆಸ್ ಶಾಸಕ ನಾಗೇಂದ್ರ ನಿಗಮದ ಅಧ್ಯಕ್ಷರಾದ, ಶಾಸಕ ಬಸನಗೌಡ ದದ್ದಲ್ ಅವರು ಈ ಹಣವನ್ನು ಲೋಕಸಭಾ ಚುನಾವಣೆಗೆ ಬಳಕೆ ಮಾಡಿರುವ ಬಗ್ಗೆ ಆರೋಪ ಬಂದಿದೆ. ಈ ಹಗರಣದ ಬಗ್ಗೆ ತನಿಖೆ ನಡೆಸಿದ್ದ ಎಸ್‌ಐಟಿ ನಾಗೇಂದ್ರ ಮತ್ತು ದದ್ದಲ್ ಅವರಿಗೆ ಕ್ಲಿನ್ ಚಿಟ್ ನೀಡಿತ್ತು.

# ಸಿಎಂ ಆಗಿದ್ದೇನೆ: ಸಿದ್ದರಾಮಯ್ಯ

ವಿಡಿಯೋ ಮಾಡಲಾಗಿದೆ. ಮಂಡ್ಯ ಜಿಲ್ಲೆ ಕೆ.ಆರ್.ಪೇಟೆಗೆ ಬಂದಿದ್ದಾಗ ಮಾತಾಡಿದ್ದಾರೆ ಎನ್ನಲಾದ ವಿಡಿಯೋ ಇದಾಗಿದ್ದು, ಸಿದ್ದರಾಮಯ್ಯ ಲಕ್ಕಿ ಲಾಟರಿ ಹೊಡೆದುಬಿಟ್ಟ. ಸಿದ್ದರಾಮಯ್ಯಗೆ ಸೋನಿಯಾ ಗಾಂಧಿ ಜೊತೆ ಭೇಟಿ ಮಾಡಿಸಿದ್ದೇ ನಾನು. ಸಿದ್ದರಾಮಯ್ಯ ಗ್ರಹಚಾರ ಚೆನ್ನಾಗಿತ್ತು ಆತ ಮುಖ್ಯಮಂತ್ರಿ ಆದ. ನನ್ನ ಗ್ರಹಚಾರ ಚೆನ್ನಾಗಿಲ್ಲ ಎಂದು ಬಿ.ಆರ್.ಪಾಟೀಲ್ ಬೇಸರ ಹೊರಹಾಕಿರುವುದು ಆಡಿಯೋದಲ್ಲಿದೆ.

ಸುರ್ಜೆವಾಲ ಭೇಟಿ ಮಾಡಿ ಎಲ್ಲಾ ವಿಚಾರಗಳನ್ನು ಹೇಳಿದ್ದೇನೆ. ನನ್ನ ಮಾತನ್ನು ಸುರ್ಜೇವಾಲ ಗಂಭೀರವಾಗಿ ಆಲಿಸಿದ್ದಾರೆ. ಹೈಕಮಾಂಡ್ ಏನು ನಿರ್ಧಾರ ಕೈಗೊಳ್ಳುತ್ತೋ ನೋಡೋಣ ಎಂದು ಆಪ್ತರೊಬ್ಬರ ಜೊತೆ ಫೋನ್‌ನಲ್ಲಿ ಬಿಆರ್ ಪಾಟೀಲ್ ಮಾತನಾಡಿರುವುದು ವೈರಲ್ ಆಗಿದ್ದು, ಈ ಮೂಲಕ ಬಿಆರ್ ಪಾಟೀಲ್, ಸಿದ್ದರಾಮಯ್ಯ ವಿರುದ್ಧ ಸುರ್ಜೆವಾಲ ಅವರಿಗೆ ದೂರು ನೀಡಿದ್ರಾ ಎನ್ನುವ ಪ್ರಶ್ನೆಗಳು ಉದ್ಭವಿಸಿವೆ.

# ಹುಸೇನ್‌ಗೆ ಶೋಕಾಸ್ ನೋಟಿಸ್

ಅವರು ಸಿಎಂ ಬದಲಾವಣೆ ಬಗ್ಗೆ ಹೇಳಿಕೆ ನೀಡಿದ್ದರು.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದು ಉಳಿದ ಅವಧಿಗೆ ಡಿಕೆ ಶಿವಕುಮಾರ್ ಗೆ ಅವಕಾಶ ನೀಡಬೇಕು. ಇದು ನನ್ನೊಬ್ಬನ ಇಚ್ಚೆ ಅಲ್ಲ. ಸುಮಾರು 100 ಶಾಸಕರು ಸಿಎಂ ಬದಲಾವಣೆ ಪರವಾಗಿದ್ದು, ಈ ಕ್ಷಣಕ್ಕಾಗಿ ಅನೇಕ ಶಾಸಕರು ಕಾಯುತ್ತಿದ್ದಾರೆ ಎಂದು ಇಕ್ಬಾಲ್ ಹುಸೇನ್ ಹೇಳಿದ್ದರು.

ಈಗ ಮುಖ್ಯಮಂತ್ರಿ ಬದಲಾವಣೆಯಾಗದಿದ್ರೆ ಮುಂದೆ ಕಷ್ಟವಾಗಲಿದೆ. 2028ರಲ್ಲಿ ಪಕ್ಷ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂದು ಇಕ್ಬಾಲ್ ಹುಸೇನ್ ಎಚ್ಚರಿಕೆ ನೀಡಿದ್ದರು.

## ನೀತಿ ನಿರೂಪಣೆಯಲ್ಲಿ ಅಂಕಿ ಸಂಖ್ಯೆಗಳ ಪಾತ್ರ ಬಹುಮುಖ್ಯ: ದುಬೆ

ಬೀದರ.ಜು.01:ಸರ್ಕಾರದ ನೀತಿ ನಿರೂಪಣೆಯಲ್ಲಿ ಅಂಕಿ ಸಂಖ್ಯೆಗಳ ಪಾತ್ರ ಬಹುಮುಖ್ಯವಾಗಿದ್ದು, ತೆರೆಮೆರೆಯಲ್ಲಿ ಕರ್ತವ್ಯ ನಿರ್ವಹಿಸುವಸಾಂಖ್ಯಿಕಇಲಾಖೆಯ ಪಾತ್ರ ಬಹುಮುಖ್ಯವಾಗಿದೆ ಎಂದುಜಿಲ್ಲಾಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಕಿಶೋರ್ ಕುಮಾರ್ ದುಬೆ ತಿಳಿಸಿದರು.ಅವರುಮಂಗಳವಾರ ಡಾ.ಪ್ರೊ.ಪಿ.ಸಿ.ಮಹಾಲ ನೋಬಿಸ್ ಸಾಂಖ್ಯಿಕ ತಜ್ಞರ ಇವರ ಜನ್ಮ ದಿನಾಚರಣೆ ಕಾರ್ಯಕ್ರಮ ನಿಮಿತ್ಯ ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿಗಳ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯಸಾಂಖ್ಯಿಕದಿನಾಚರಣೆ ಕಾರ್ಯಕ್ರಮದಲ್ಲಿಭಾಗವಹಿಸಿ ಮಾತನಾಡಿದರು.

ಬೀದರ ವಿಶ್ವವಿದ್ಯಾಲಯದ ಕುಲಸಚಿವೆಸುರೇಖಾಮಾತನಾಡಿ, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಯಶಸ್ಸುಸಾಂಖ್ಯಿಕ ಇಲಾಖೆಯ ಅಂಕಿ ಅಂಶಗಳ ಮೇಲೆ ಅವಲಂಬಿತವಾಗಿದ್ದು, ಅದನ್ನುಜಾಗರೂಕತೆಯಿಂದ ನಿರ್ವಹಿಸಬೇಕೆಂದರು.

ಇದೇ ಸಂರ್ಭದಲ್ಲಿ ನಿವೃತ್ತ ಉಪನಿರ್ದೇಶಕ (ಸಾಂಖ್ಯಿಕ) ಬಸವರಾಜ್‌ಕುಂಬಾರ್‌ಅವರು ಈ ವರ್ಷದ "ರಾಷ್ಟ್ರೀಯ ಸಾಂಖ್ಯಿಕ ದಿನಾಚರಣೆ"ಯ ಥೀಮ್ "ರಾಷ್ಟ್ರೀಯ ಮಾದರಿ ಸಮೀಕ್ಷೆಗೆ 75 ವರ್ಷ" ವಿಷಯದ ಕುರಿತು ಹಾಗೂ ತಮ್ಮ ಸೇವಾವಧಿಯಲ್ಲಿನ ಪ್ರಾಯೋಗಿಕ ಅನುಭವ ಹಂಚಿಕೊಂಡರು.

# ಶಾಸಕ ಪ್ರಭು ಚವ್ಹಾಣರಿಂದ ವಿದ್ಯಾರ್ಥಿಗಳಿಗೆ ಸನ್ಮಾನ 4ರಂದು

ಮಲ್ಲಮ್ಮ ನುಡಿ ವಾರ್ತೆ ಔರಾದ:ಜು.1:ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನುಪಡೆದುಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾಜಿ ಸಚಿವರು ಹಾಗೂಔರಾದ(ಬಿ) ಶಾಸಕರಾದಪ್ರಭುಬಿ.ಚವ್ಹಾಣಅವರು ಜುಲೈ4ರಂದುಔರಾದಪಟ್ಟಣದ ಸಾಯಿ ಕಲ್ಯಾಣ ಮಂಟಪದಲಿ ಸನ್ಮಾನಿಸುವರು.ಪ್ರಭುಂಟರ್‌ಪ್ರೈಸೆಸ್ ವತಿಯಿಂದಕಾರ್ಯಕ್ರಮ ಆಯೋಜಿಸಿದ್ದು, ಅದು ಬೆಳಗ್ಗೆ 10 ಗಂಟೆಗೆ ನಡೆಯುವಕಾರ್ಯಕ್ರಮದಲ್ಲಿಔರಾದ ಮತ್ತುಕಮಲನಗರತಾಲ್ಲೂಕುಗಳ ವಿದ್ಯಾರ್ಥಿಗಳಿಗೆಸನ್ಮಾನಿಸಲಾಗುತ್ತದೆ. ಎಸ್ಸೆಸ್ಸೆಲ್ಸಿಮತ್ತುಪಿಯುಸಿಯಲ್ಲಿಅತಿ ಹೆಚ್ಚು ಅಂಕ ಗಳಿಸಿದಮೊದಲಮೂವರಿಗೆನಗದುಬಹುಮಾನ ನೀಡಲಾಗುತ್ತಿದ್ದು ,ಮೊದಲಬಹುಮಾನ 21 ಸಾವಿರ,ಎರಡನೇಬಹುಮಾನ11ಸಾವಿರ ಮತ್ತುಮೂರನೇಬಹುಮಾನ7ಸಾವಿರ ಇರಲಿದೆ.ಹಾಗೆಯೇಶೇ.80ಕ್ಕಿಂತ ಹೆಚ್ಚುಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆಉಡುಗೊರೆಯೊಂದಿಗೆ ಸನ್ಮಾನಹಾಗೂ ಅವರ ತಂದೆ–ತಾಯಿ ಮತ್ತು ಶಾಲೆಯ ಮುಖ್ಯಗುರುಗಳಿಗೆ ಶಾಲು, ಹೂ–ಹಾರಗಳೊಂದಿಗೆ ಗೌರವಿಸಲಾಗುತ್ತದೆ.ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನಿರಂತರ ಪ್ರಯತ್ನಿಸುತ್ತಿದ್ದು,ವಿದ್ಯಾರ್ಥಿಗಳ ಆತ್ಮಸ್ಥೈರ್ಯವೃದ್ಧಿಸಬೇಕು.ಶಿಕ್ಷಕರ ಕಾರ್ಯಕ್ಷಮತೆಹೆಚ್ಚಿಸಿಫಲಿತಾಂಶ ಸುಧಾರಿಸುವ ಉದ್ದೇಶದಿಂದ 2009ರಿಂದ ವಿದ್ಯಾರ್ಥಿಗಳು ಮತ್ತುಶಿಕ್ಷಕರನ್ನುಗೌರವಿಸುತ್ತಾ ಬರುತ್ತಿದ್ದೇನೆ.ಶಾಲಾಕಾಲೇಜುಗಳಿಗೆ ಅಗತ್ಯ ಸೌಕರ್ಯಗಳನ್ನು ಒದಗಿಸಿ ಶೈಕ್ಷಣಿಕ ಪ್ರಗತಿಗೆ ಪೂರಕವಾತಾವರಣವನ್ನು ನಿರ್ಮಿಸಿದ್ದೇನೆ. ಈ ಎಲ್ಲ ಪ್ರಯತ್ನಗಳಿಂದಾಗಿಔರಾದಹಾಗೂ ಕಮಲನಗರ ತಾಲ್ಲೂಕುಗಳು ಶೈಕ್ಷಣಿಕವಾಗಿ ಸಾಕಷ್ಟು ಸುಧಾರಿಸಿವೆ ಎಂದಿದ್ದಾರೆ.

ನನ್ನಜನ್ಮದಿನದ ನಿಮಿತ್ತಪ್ರಭು ಎಂಟರ್‌ಪ್ರೈಸೆಸ್ ವತಿಯಿಂದ ಕಾರ್ಯಕ್ರಮ ಏರ್ಪಡಿಸಿದ್ದು, ಜನ್ಮದಿನ ಕೇವಲ ನೆಪಮಾತ್ರಕ್ಕೆ ಇರುತ್ತದೆ. ಶಿಕ್ಷಣ ಕ್ಷೇತ್ರದ ಏಳಿಗೆ, ವಿದ್ಯಾರ್ಥಿಗಳ ಸಂತೋಷವೇ ನನ್ನ ಸಂತೋಷವಾಗಿದೆ. ಔರಾದ ವಿಧಾನಸಭಾ ಕ್ಷೇತ್ರ ಸರ್ವತೋಮುಖವಾಗಿ ಅಭಿವೃದ್ಧಿಯಾಗಬೇಕು ಎಂಬುದು ನನ್ನ ಗುರಿಯಾಗಿದ್ದು, ಅಭಿವೃದ್ಧಿಗೆ ಕೇಂದ್ರಬಿಂದುವಾಗಿರುವ ಶಿಕ್ಷಣ ಕ್ಷೇತ್ರದ ಏಳಿಗೆ ನನ್ನ ಮೊದಲ ಆದ್ಯತೆಯಾಗಿದೆ. ಈ ದಿಶೆಯಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದ್ದು,ಎಲ್ಲರೂ ಸರಿಯಾಗಿ ಕೆಲಸ ಮಾಡಬೇಕು. ಎಲ್ಲ ಶಾಲೆಗಳು ಶೇ.100ರಷ್ಟು ಫಲಿತಾಂಶ ದಾಖಲಿಸಲು ಪ್ರಯತ್ನಿಸಬೇಕು ಎಂದು ತಿಳಿಸಿದ್ದಾರೆ.ವಿದ್ಯಾರ್ಥಿಗಳ ಮನೋಬಲವೃದ್ಧಿಸಿಫಲಿತಾಂಶ ಸುಧಾರಿಸಬೇಕೆಂಬ ಉದ್ದೇಶದಿಂದ ವಿದ್ಯಾರ್ಥಿಗಳು, ಅವರ ಪೋಷಕರು ಮತ್ತು ಶಾಲೆಯ ಮುಖ್ಯಗುರುಗಳಿಗೆ ಸನ್ಮಾನ ಏರ್ಪಡಿಸಲಾಗಿದೆ. ಎಲ್ಲರೂ ಪಕ್ಷಾತೀತವಾಗಿಕಾರ್ಯಕ್ರಮದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸಬೇಕು ಎಂದು ಶಾಸಕರು ಸಾರ್ವಜನಿಕರಲ್ಲಿ ಕೋರಿದ್ದಾರೆ.

# ಜು.3 ರಂದು ತೆಲಂಗಾಣ ಹೊರನಾಡು ಸಾಂಸ್ಕೃತಿಕ ಉತ್ಸವ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 01: ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು, ಓಂಸಾಯಿ ರೂರಲ್ ಡೆವಲಪಮೆಂಟ್ ಸೊಸೈಟಿ ಗಣೇಶಪೂರ ಇವರ ಸಂಯುಕ್ತಾಶ್ರಯದಲ್ಲಿಜಹಿರಾಬಾದ ತಾಲೂಕಿನ ಸಂಗಾರೆಡ್ಡಿಜಿಲ್ಲೆಯ ಮಾಮಿಡಿಗಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ತೆಲಂಗಾಣ ಹೊರನಾಡು ಗಡಿ ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮ ಜರುಗಲಿದೆ. ಕಲಾವಿದರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕಾರ್ಯಕ್ರಮದ ಸಂಯೋಜಕರು ಹಾಗೂ ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ. ರಾಜಕುಮಾರ ಹೆಬ್ಬಾಳೆ ತಿಳಿಸಿದ್ದಾರೆ,

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಉತ್ಸವವನ್ನು ಬೀದರ ವಿವಿ ಯ ಕುಲಸಚಿವರಾದ ಪ್ರೊ. ಪರಮೇಶ್ವರ ನಾಯಕ್ ಉದ್ಘಾಟನೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯಸ್ವಾಮಿ, ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಸೇರಿದಂತೆ ಹಲವರು ಉಪಸ್ಥಿತರಿರಲಿದ್ದಾರೆ. ಸಂಗೀತಗಾರರಾದ ಗುರುದೇವ ಅವರಿಗೆ ಗೌರವ ಸನ್ಮಾನ ನೆರವೇರಲಿದೆ. ಡಾ. ರಾಜಕುಮಾರ ಹೆಬ್ಬಾಳೆ ಪ್ರಾಸ್ತಾವಿಕ ಮಾತನಾಡಲಿದ್ದು, ಶಿವಶರಣಪ್ಪ ಗಣೇಶಪುರ ಸ್ವಾಗತಿಸಲಿದ್ದಾರೆ. ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಹಲವು ಕವಿಗಳು ಭಾಗವಹಿಸಲಿದ್ದು, ಅಧ್ಯಕ್ಷತೆಯನ್ನು ಕಜಾಪ ತಾಲೂಕಾಧ್ಯಕ್ಷ ಎಸ್‌ಬಿ ಕುಚಬಾಳ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಾ. ಸಾವಿತ್ರಿಬಾಯಿಹೆಬ್ಬಾಳೆ ಸೇರಿದಂತೆ ಗಣ್ಯರು ಆಗಮಿಸಲಿದ್ದಾರೆ. ಹಲವು ಕಲಾವಿದರಿಂದ ವಿವಿಧ ಜಾನಪದ ಸಂಗೀತ, ನೃತ್ಯ ಕಾರ್ಯಕ್ರಮಗಳು ಜರುಗಲಿವೆ. ತಪ್ಪದೇ ಪಾಲ್ಗೊಳ್ಳಬೇಕೆಂದು ಹೆಬ್ಬಾಳೆ ತಿಳಿಸಿದ್ದಾರೆ.

# ಸೇವಾ ನಿವೃತ ಶಿಕ್ಷಕ ವಿಜಯಕುಮಾರ ಬೆಲೊರೆವರಿಗೆ ಬೀಳ್ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಜು.1:ತಾಲೂಕಿನ ತೊರಣಾ ಗ್ರಾಮದ ಸರಕಾರಿ ಪ್ರೌಢಶಾಲೆಯ ಶಿಕ್ಷಕ ವಿಜಯಕುಮಾರ ಬೆಲೊರೆ ಅವರಿಗೆ ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸೇರಿ ಸನ್ಮಾನಿಸಿ ಬೀಳ್ಕೊಡುಲಾಯಿತು. ಔರಾದ ತಾಲೂಕು ಪ್ರೌಢಶಾಲೆಯ ಶಿಕ್ಷಕ ಸಂಘದ ಅಧ್ಯಕ್ಷ ವಿಶ್ವನಾಥ ಬಿರಾದಾರ ಅವರು ಮಾತನಾಡಿ, ವಿಜಯಕುಕಮಾರ ಬೆಲೂರೆ ಅವರು ವಿವಿಧ ಸರ್ಕಾರಿ ಪ್ರಾಥಮಿಕ ಶಾಲೆ ಸೇರಿದಂತೆ ಪ್ರೌಢಶಾಲೆಯಲ್ಲಿ ಒಟ್ಟು31ವರ್ಷ ಪ್ರಮಾಣಿವಾಗಿ ಮತ್ತು ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ಕಾರ್ಯ ಶಾಲೆ ಶಿಕ್ಷಕರು ಮತ್ತು ಮಕ್ಕಳು ಪಾಲಿಸಬೇಕು ಎಂದು ಕರೆ ನೀಡಿದರು. ಔರಾದ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಪಂಡರಿ ಆಡೆ ಅವರು ಮಾತನಾಡಿ, ಶಿಕ್ಷಕವೃತಿ ಇತರೆವೃತಿಗಳಿಂತೆಶ್ರೇಷ್ಠವಾದದ್ದು, ಹೀಗಾಗಿಹೊಣೆಗಾರಿಕೆ ಅರಿತು ಶಿಕ್ಷಕಹುದ್ದೆಗೆಘನತೆಹೆಚ್ಚಿಸಬೇಕು. ವಿದ್ಯಾರ್ಥಿಗಳಸಾಮರ್ಥಗುರುತಿಸಿ ಅವರಅಂತಶಕ್ತಿಅರಳಿಸುವಕಾರ್ಯ ಶಿಕ್ಷಕರದ್ದಾಗಿದೆ.ಆ ಹಿನ್ನೆಲೆಯಲ್ಲಿ ಶಾಲೆ ಪ್ರತಿಯೊಬ್ಬ ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಸಪರ್ಕವಾಗಿ ನಿಭಾಹಿಸಿದರೆ ವಿದ್ಯಾರ್ಥಿಗಳುಭಾವಿಜೀವನದಲ್ಲಿ ವೈಜ್ಞಾನಿಕ ಮತ್ತು ಉನ್ನತ ಹುದ್ದೆಗಳನ್ನುಅಲಂಕರಿಸಬಹುದು ಎಂದು ಶಿಕ್ಷಕರಿಗೆ ಕಿವಿ ಮಾತು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಮುಖ್ಯಗುರುಬಾಬುರಾವ ಬಿರಾದಾರ ವಹಿಸಿದರು. ಎಸ್‌ಡಿಎಂಸಿ ಸದಸ್ಯ ಸಂತೋಷ ದಿಂಡೆ,ಮಾಜಿ ಗ್ರಾಮ ಪಂಚಾಯತಧ್ಯಕ್ಷ ಬಾಲಾಜಿ ಡೋಂಗರೆ, ತುಳಸಿರಾಮಜಕಾತೆ, ವಿದ್ಯಾಸಗರಪಾಂಚಾವರೆ,ವಿಜುಕುಮರನೂದನೂರೆ, ಹಿರಿಯಶಿಕ್ಷಕ ಚಂದ್ರಕಾಂತ ರಾಠೋಡ, ಸಂತೋಷದುಬ್ಬೆ, ವಿಶ್ವನಾಥ ಲಡವಾಡೆ,ಸಿದ್ದರಾಮ,ದಿಲೀಪ ಶಿಂದೆ,ಕಾವೇರಿ,ವಿಜಯಲಕ್ಷ್ಮಿ ??, ರನಜೀತ, ಚಂದ್ರಕಾಂತ ರಾಣಡೆಸೇರಿದಂತೆತಾಲೂಕಿನವಿವಿಧ ಸರಕಾರಿ ಹಿರಿಯಪ್ರಾಥಮಿಕಶಾಲೆ ಮುಖ್ಯಗುರುಗಳು,ಪ್ರೌಢಶಾಲೆಯ ಎಡಿಎಂಸಿಸದಸ್ಯರು ಮತ್ತುಶಾಲೆ ಶಿಕ್ಷಕರು ಇದ್ದರು.ಹಿರಿಯ ಶಿಕ್ಷಕ ಮದನ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

# ಪತ್ರಿಕಾ ದಿನಾಚರಣೆಗೆ ಕೆ.ಯು.ಡಬ್ಲ್ಯು.ಜೆ ರಾಜ್ಯಾಧ್ಯಕ್ಷರಿಗೆ, ಮಾಧ್ಯಮ ಅಕಾಡೆಮಿ ಅಧ್ಯಕ್ಷರಿಗೆ ಅವ್ಹಾನ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 01 : ಈ ವರ್ಷ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರಿಗೆ ಅವ್ಹಾನ ನೀಡಲಾಯಿತು.

ಬೆಂಗಳೂರಿನ ವಾರ್ತಾ ಸೌಧದಲ್ಲಿ ಮಂಗಳವಾರ ಜರುಗಿದ ರಾಜ್ಯಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಮುಗಿದ ಬಳಿಕ ಹಿರಿಯ ಪತ್ರಕರ್ತರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಬಾಬುವಾಲಿ ಅವರ ನೇತೃತ್ವದಲ್ಲಿ ಬೀದರ್ ನಿಂದ ಆಗಮಿಸಿದ ಪತ್ರಕರ್ತರ ನಿಯೋಗವು ಬೀದರ್ ಜಿಲ್ಲೆಯಲ್ಲಿ ನಡೆಯುವ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಪತ್ರಿಕಾ ದಿನಾಚರಣೆ ದಿನದಂದು ತಗಡೂರ ಅವರ ಹುಟ್ಟು ಹಬ್ಬ ಇರುವ ಕಾರಣ ಹೂಗುಚ್ಚ ನೀಡುವ ಮೂಲಕ ಜನ್ಮದಿನದ ಶುಭ ಕೋರಿದರು. ಬೀದರ್ ಪತ್ರಿಕಾ ಬಳಗದಿಂದ ಸನ್ಮಾನಿತರಾದ ತಗಡೂರ ಅವರು, ಸಕಾರಾತ್ಮಕವಾಗಿ ಸ್ಪಂದಿಸಿ ಅವಶ್ಯವಾಗಿ ಬರುವುದಾಗಿ ನಿಯೋಗಕ್ಕೆ ಭರವಸೆ ನೀಡಿದರು.

ಕಳೆದ ವರ್ಷದಂತೆ ಈ ವರ್ಷ ಸಹ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಸಣ್ಣ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಂಘ, ಕ.ಕಾ.ದಿ.ಸಂಪಾದಕರ ಸಂಘ ಸೇರಿದಂತೆ ಇತರೆ ಸಂಘಗಳ ಸಹಯೋಗದಲ್ಲಿ ಕಾರ್ಯಕ್ರಮ ಮಾಡಲಾಗುವುದು. ಈ ತಿಂಗಳ 23 ಅಥವಾ 24 ರಂದು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಬೀದರ್ ಗೆ ತೆರಳಿದ ಬಳಿಕ ಇದಕ್ಕಾಗಿ ಎಲ್ಲರನ್ನು ಒಟ್ಟುಗೂಡಿಸಿ ಪೂರ್ವಸಿದ್ಧತಾ ಸಭೆ ಹಮ್ಮಿಕೊಳ್ಳಲಾಗುವುದೆಂದು ಕ.ಕಾ.ಪ ಸಂಘದ ಮಾಜಿ ಅಧ್ಯಕ್ಷರಾದ ಬಾಬು ವಾಲಿ ಈ ಸಂದರ್ಭದಲ್ಲಿ ತಿಳಿಸಿದರು.

ನಂತರ ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯಿಷಾ ಖಾನಂ ಅವರನ್ನು ಭೇಟಿ ಮಾಡಿ ಅವರನ್ನು ಸಹ ಬೀದರ್ ಜಿಲ್ಲೆಯಲ್ಲಿ ಈ ವರ್ಷ ನಡೆಯುವ ಪತ್ರಿಕಾ ದಿನಾಚರಣೆಯಲ್ಲಿ ಗೌರವ ಅತಿಥಿಗಳಾಗಿ ಭಾಗವಹಿಸುವಂತೆ ಮನವಿ ಮಾಡಲಾಯಿತು. ಅವರು ಸಹ ಬೀದರ್ ಜಿಲ್ಲಾ ಪತ್ರಕರ್ತರ ನಿಯೋಗದ ಮನವಿಗೆ ಸ್ಪದಿಸಿ ಕಾರ್ಯಕ್ರಮಕ್ಕೆ ಬರಲು ಒಪ್ಪಿಕೊಂಡರು.





ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷರು ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಭವಾನಿಸಿಂಗ್ ಠಾಕೂರ್, ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯ ಅಪ್ಪರಾವ ಸೌದಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ ಕಾಮಶೆಟ್ಟಿ, ಜಿಲ್ಲಾ ಕಾರ್ಯದರ್ಶಿ ಪೃಥ್ವಿರಾಜ್ ಎಸ್ ಹಾಗೂ ಇತರರಿದ್ದರು.

# ಸಾಮಾಜಿಕ ಸ್ವಾಸ್ಥ್ಯ ಕಾಪಾಡುವ ಮನಸ್ಥಿತಿ ಅಗತ್ಯ: ಸಿಪಿಐ ಅಲಿಸಾಬ್



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಜು 1– ಮನುಷ್ಯ ಸಂಬಂಧಗಳನ್ನು ಗಟ್ಟಿಗೊಳಿಸುವ, ಮಾನವೀಯತೆಗೆ ಮಹತ್ವನೀಡುವ ಶಿಕ್ಷಣ ಇಂದು ಹೆಚ್ಚು ಅಗತ್ಯವಿದೆ. ಸಾಮಾಜಿಕ ಸ್ವಾಸ್ಥ್ಯ ಕಾಪಾಡುವ ಮನಸ್ಥಿತಿ ನಿರ್ಮಿಸುವ ವಿದ್ಯೆಯ ಅಗತ್ಯವಿದೆ ಎಂದು ಸಿಪಿಐ ಅಲಿಸಾಬ್ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ವಾಣಿಜ್ಯ ವಿಭಾಗದಿಂದ ಆಯೋಜಿಸಿದ್ದ 'ಅರಿವು–ಆಚಾರ: ಸಾಮಾಜಿಕ ಹೊಣೆಗಾರಿಕೆ ' ಕುರಿತ ಉಪನ್ಯಾಸ ಹಾಗೂ ಪದವಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿ ಶ್ರಮ, ನಿರಂತರ ಅಧ್ಯಯನ ಯಶಸ್ಸಿನ ಮಾರ್ಗವಾಗಿದೆ ಎಂದರು.

ವಿದ್ಯಾವಂತರಾಗುವುದು ಒಂದು ಹಂತವಾದರೆ, ಸಾಮಾಜಿಕ ಹೊಣೆಗಾರಿಕೆ ನಿಭಾಯಿಸುವ, ಮಾನವೀಯ ಮೌಲ್ಯಗಳನ್ನು ಉಳಿಸಿಕೊಂಡು ಜೀವನ ನಡೆಸುವುದು ಇನ್ನೊಂದು ಹಂತವಾಗಿದೆ. ವ್ಯಕ್ತಿಯ ಸಾಮಾಜಿಕ ಜೀವನ ಸವಾಲಿನಿಂದ ಕೂಡಿದೆ. ನಮ್ಮ ಒಟ್ಟು ಬದುಕು ಪ್ರಜ್ಞಾಪೂರ್ವಕವಾಗಿ, ಎಚ್ಚರಿಕೆಯಿಂದ ಸಾಗಿಸಬೇಕು. ಎಂದರು.

ಬಿಡಿಪಿಸಿ ನಿರ್ದೇಶಕಿ ಪ್ರೊ. ವಿಜಯಲಕ್ಷ್ಮಿ ಗಡ್ಡೆ ಮಾತನಾಡಿ, ಎಷ್ಟೇ ಮುಂದುವರಿದ ಸಮಾಜದಲ್ಲಿಯೂ ಮಹಿಳೆ ಹಲವು ಸವಾಲುಗಳು ಎದುರಿಸುತ್ತಿದ್ದಾಳೆ. ಶಿಕ್ಷಣ, ಜ್ಞಾನ, ಕೌಶಲ್ಯಗಳು ಪಡೆದುಕೊಳ್ಳುವ ಮೂಲಕ ಮಹಿಳೆ ಸ್ವಾವಲಂಬಿ ಬದುಕು ನಡೆಸಬಹುದು. ಶರಣರ ಚಿಂತನೆ ಜೀವನದಲ್ಲಿ ಅಳವಡಿಸಿಕೊಂಡರೆ ಬದು–ಕಿಗೊಂದು ಘನತೆ ಬರುತ್ತದೆ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಗಂಭೀರವಾದ ಅಧ್ಯಯನದಿಂದ ಮನುಷ್ಯ ಲೋಕದಲ್ಲಿನ ಆರ್ಥಿಕ, ರಾಜಕೀಯ, ಸಾಂಸ್ಕೃತಿಕ ಸಂಬಂಧಗಳ ಎಳೆಗಳನ್ನು ಕಂಡುಕೊಳ್ಳಬಹುದು. ಓದುವ ಪ್ರವೃತ್ತಿ ಹೆಚ್ಚಾದಂತೆ ಅರಿವು ವಿಸ್ತಾರ ಗೊಳ್ಳುತ್ತದೆ. ಈ ಕಾಲದಲ್ಲಿ ಬಹುಶಿಸ್ತೀಯ ಅಧ್ಯಯನಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು.

ಕಾಲೇಜು ಕ್ಯಾಂಪಸ್ಸಿನಲ್ಲಿ ಹೊಸ ವಿಚಾರಗಳ, ಹೊಸ ಅನ್ವೇಷಣೆಗಳ, ಹೊಸ ಆವಿಷ್ಕಾರಗಳ ಮಾತುಕತೆ, ಚರ್ಚೆಗಳು ನಡೆದರೆ ಅಂಥ ಕಾಲೇಜು ಜೀವಂತಿಕೆ ಉಳಿಸಿಕೊಂಡಿದೆ ಎಂದರ್ಥ. ಕಾಲೇಜು

ಕ್ಯಾಂಪಸ್ಸಿನಲ್ಲಿ ವಿಜ್ಞಾನಿಗಳ, ಸಾಹಿತಿಗಳ, ಆರ್ಥಿಕ ತಜ್ಞರ ಜೊತೆ ವಿದ್ಯಾರ್ಥಿಗಳು ಸದಾ ಸಂವಾದಿಸುತ್ತಿದ್ದರೆ ಅಲ್ಲೊಂದು ಬೌದ್ಧಿಕ ವೈಚಾರಿಕ ಪರಂಪರೆ ಹುಟ್ಟಿಕೊಳ್ಳುತ್ತವೆ ಎಂದರು.

ಚಾರ್ಟೆಡ್ ಅಕೌಂಟೆಂಟ್ ರೋಮಾದೇವಿ ನೇಹಾಲ್ ಸಿಂಗ್ ಮಾತನಾಡಿದರು.

ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು.

ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಸಹಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಅನಿಲಕುಮಾರ ರಗಟೆ, ಚಾ–ರ್ಟೆಡ್ ಅಕೌಂಟೆಂಟ್

ನೇಹಾಲ್ ಸಿಂಗ್,

ಬಸವೇಶ್ವರ ಪಿಯು ಕಾಲೇಜು ಪ್ರಾಚಾರ್ಯರಾದ ಡಾ ರುದ್ರಮಣಿ ಮಠಪತಿ, ಅಶೋಕರೆಡ್ಡಿ, ಗಂಗಾಧರ ಸಾಲಿಮಠ, ಶ್ರೀನಿವಾಸ ಉಮಾಪುರೆ, ಚೆನ್ನಬಸಪ್ಪ ಗೌರ, ಸಚಿನ್ ಬಿಡವೆ, ವಿವೇಕಾನಂದ ಶಿಂಧೆ, ಪ್ರವೀಣ ಬಿರಾದಾರ, ಪ್ರಶಾಂತ ಬುಡಗೆ, ಕೃಷ್ಣಪ್ಪ ಸದಲಾಪುರ, ಪವನ ಪಾಟೀಲ, ಪ್ರಭಾಕರ ನವಗಿರೆ, ಸುಜಾವುದ್ದಿನ್, ಎಂಡಿ ಜಬಿ, ಗುರುದೇವಿ ಕಿಚಡೆ, ನಾಗವೇಣಿ ವಟಗೆ, ಸಂಗೀತಾ ಮಹಾಗಾವೆ, ಮಯೂರಿ ಪಾಟೀಲ ಮೊದಲಾದವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ಪ್ರದಾನ ಮಾಡಲಾಯಿತು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಡಾ. ಬಸವರಾಜ ಖಂಡಾಳೆ ನಿರೂಪಿಸಿದರು. ಡಾ. ಶಾಂತಲಾ ಪಾಟೀಲ ಸ್ವಾಗತಿಸಿದರು. ರೋಷನ್ ಬಿ ವಂದಿಸಿದರು.

# ಲೌಕಿಕ ಸೆಳೆತಗಳಿಗೆ ಬಂಧಿತನಾಗದಿರು – ಹಾರಕೂಡ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 1 ಲೌಕಿಕ ಸೆಳೆತಗಳಿಗೆ ಬಂಧಿತನಾಗದೆ ಬದುಕುವುದನ್ನು ತಿಳಿದವನ ಜೀವನ ತಿಳಿಯಾಗುತ್ತಾ ಹೋಗುತ್ತದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ ಪ್ರೌಢ ವಿಭಾಗದ 2016–17ನೇ ಸಾಲಿನ 10ನೇ ಬ್ಯಾಚ್ ವಿದ್ಯಾರ್ಥಿ ಬಳಗದಿಂದ ಆಯೋಜಿಸಿದ ಗುರುವಂದನೆ ಹಾಗೂ 846ನೇ ತುಲಾಭಾರ ಸಮಾರಂಭದ ಪಾವನ ಸಾನಿಧ್ಯ ವಹಿಸಿದ ಶ್ರೀಗಳು, ಕವಿವಾಣಿಯಂತೆ ಪ್ರತಿಯೊಬ್ಬರೂ ಹುಟ್ಟುವಾಗ ವಿಶ್ವಮಾನವರಾಗಿಯೇ ಜನ್ಮಿಸಿ ನಂತರ ಪ್ರತಿ ಹಂತದಲ್ಲೂ ಬಂಧಿತರಾಗುತ್ತಾ ಹೋಗುತ್ತಾರೆ.

ಮದುವೆಯಾದ ಹೆಂಡತಿ, ಕಟ್ಟಿದ ಮನೆ, ಗಳಿಸಿದ ಅಂತಸ್ತು ಅಧಿಕಾರ, ಸಂಪಾದಿಸಿದ ಐಶ್ವರ್ಯ, ಬಂಧು ಮಿತ್ರರು ಹೀಗೆ ಒಂದಾದ ಮೇಲೊಂದು ಬಂಧನಗಳು ಗೋಪುರವನ್ನೇ ನಿರ್ಮಿಸಿ ಬಿಡುತ್ತವೆ.

ಇಂತಹ ಲೌಕಿಕ ಬಂಧಮುಕ್ತಿಗೆ ಗುರುಚರಣ ಸಾನಿಧ್ಯ ಅವಶ್ಯವಾಗಿದ್ದು, ಗುರು ಕರುಣಿಸಿದ ಅರುವಿನಲ್ಲಿ ಸ್ವಪ್ರಜ್ಞೆಯ ಬೆಳಕಿನಲ್ಲಿ ನಡೆದಾಗ ಬಂಧ ಮುಕ್ತಿಯ ರಹದಾರಿ ಗೋಚರವಾಗುತ್ತದೆ.

ನಾವು ನೀಡುವ ಶಿಕ್ಷಣದಲ್ಲಿ ಇಂತಹ ಉನ್ನತ ಮೌಲ್ಯ ಬೆರೆತಿರಬೇಕು ಎಂದು ನುಡಿದರು.

10ನೇ ಬ್ಯಾಚ್ ವಿದ್ಯಾರ್ಥಿ ಬಳಗಕ್ಕೂ ಹಾಗೂ ಸರ್ವರಿಗೂ ಹಾರಕೂಡಧೀಶ ಸದಾ ಮಂಗಳವನ್ನು ಕರುಣಿಸಲಿ ಎಂದು ಶುಭ ಹಾರೈಸಿದರು.

ಚನ್ನಪ್ಪ ಪಾಟೀಲ, ನಾಗರಾಜ ಮಾನಕರ, ಚಂದ್ರಿಕಾ ಬೆಳಮಗೆ, ಸುನೀಲ ಬೆಳಮಗೆ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ

ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಶಿವದಾಸ ಸ್ವಾಮಿ, ಕವಿತಾ ಸ್ವಾಮಿ, ಮಹಾದೇವ ಪೂಜಾರಿ, ವಿಜಯಕುಮಾರ ಸಂಗೋಳಗೆ, ಪಂಡಿತ ಪೂಜಾರಿ, ಪಂಡಿತರಾವ ದೇಗಾಂವ ಹಾಗೂ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ ಶಿಕ್ಷಕ, ಶಿಕ್ಷಕಿಯರು ಉಪಸ್ಥಿತರಿದ್ದರು.

ಸುಭದ್ರಾ ಹಿರೇಮಠ ಹಾರಕೂಡ ಸ್ವಾಗತಿಸಿದರು.

ಶಿವಾನಿ ಶಿವದಾಸ ಸ್ವಾಮಿ ಸಂಗೀತ ಸೇವೆ.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ.

ಚಂದ್ರಿಕಾ ಬೆಳಮಗೆ ಹಾರಕೂಡ ನಿರೂಪಿಸಿದರು.

# ಪ್ರಮಾಣಪತ್ರ ಪಡೆದುಕೊಳ್ಳಿ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 1 ಆರ್ಥಿಕವಾಗಿ ದುರ್ಬಲರಾಗಿರುವ ಮತ್ತು ಬಡವರಾಗಿರುವ ಬ್ರಾಹ್ಮಣ ಸಮುದಾಯದ ಜನರು ರಾಜ್ಯ ಸರಕಾರದ ಕಂದಾಯ ಇಲಾಖೆಯಿಂದ 'ಆರ್ಥಿಕವಾಗಿ ದುರ್ಬಲವರ್ಗ'ದ (ಇಡಬ್ಲ್ಯೂಎಸ್) ಪ್ರಮಾಣಪತ್ರ ಪಡೆದುಕೊಳ್ಳಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ, ಕರ್ನಾಟಕ ರಾಜ್ಯಧ್ಯಕ್ಷರು ಎಸ್ ರಘುನಾಥ್, ಬೀದರ್ ಜಿಲ್ಲಾಧ್ಯಕ್ಷರು ವೆಂಕಟೇಶ್ ಕುಲಕರ್ಣಿ ಹುಮ್ನಾಬಾದ್ ತಾಲೂಕ ಅಧ್ಯಕ್ಷರು ಭೀಮ್ ರಾವ್ ಕುಲಕರ್ಣಿ, ಉಪಾಧ್ಯಕ್ಷರು ಮಿಲಿಂದ್ ಕುಲಕರ್ಣಿ ಮನವಿ ಮಾಡಿದ್ದಾರೆ.

'ಇಡಬ್ಲುಎಸ್ ಎಂದರೆ ಆರ್ಥಿಕವಾಗಿ ದುರ್ಬಲ ವರ್ಗದವರಿಗೆ (ಎಕನಾಮಿಕಲಿ ವೀಕರ್ಸ್ ಸೆಕ್ಷನ್) ಮೀಸಲಾತಿ ನೀಡುವ ಯೋಜನೆಯಾಗಿದೆ. ಇದು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಮೀಸಲಾತಿ ವ್ಯವಸ್ಥೆಯಾಗಿದೆ. ಈ ಯೋಜನೆಯಡಿ, ಆರ್ಥಿಕವಾಗಿ ದುರ್ಬಲವಾಗಿರುವ ಸಾಮಾನ್ಯ ವರ್ಗದವರಿಗೆ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗಗಳಲ್ಲಿ ಶೇ.10ರಷ್ಟು ಮೀಸಲಾತಿ ನೀಡಲಾಗುತ್ತದೆ. ಕಗಅ ಉತ್ತೀರ್ಣ ಫಲಿತಾಂಶ ಪಾಸಾದವರಿಗೆ ಮತ್ತು ಇಂಜಿನಿಯರಿಂಗ್ ಪದವಿ ಹೊಂದಿರುವವರಿಗೆ ಡಾ. ಪದವಿ ಹೊಂದಿರುವವರಿಗೆ ಸಿಗಲಾಗಿದೆ, ಅಲ್ಲದೇ ಕೇಂದ್ರ ಮತ್ತು ರಾಜ್ಯ ಸರಕಾರದ ವಿವಿಧ ಯೋಜನೆಗಳ ಲಾಭ ಪಡೆದುಕೊಳ್ಳಲು ಇಡಬ್ಲ್ಯೂಎಸ್ ಪ್ರಮಾಣಪತ್ರ ಕಡ್ಡಾಯವಾಗಿರುತ್ತದೆ. ಹೀಗಾಗಿ ಬ್ರಾಹ್ಮಣ ಸಮುದಾಯದ ಜನರು ಕೂಡಲೇ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ,

# ಜಿಲ್ಲಾ ಉಸ್ತುವಾರಿ ಸಚಿವರ ಪರಿಷ್ಕೃತ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.01–ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಜುಲೈ 3 ಗುರುವಾರ ಬೆಂಗಳೂರಿನಿಂದ ಕಲಬುರಗಿಗೆ ಆಗಮಿಸಿ, ಕಲಬುರಗಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾವಹಿಸಿ ವಾಸ್ತವ್ಯ ಮಾಡುವರು.

ಜುಲೈ 4 ರಂದು ಶುಕ್ರವಾರ ಹಾಗೂ ಜುಲೈ 5ರಂದು ಶನಿವಾರ ಕಲಬುರಗಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

# ಪ್ರಜಾ ಸೌಧ/ ಆಡಳಿತ ಸೌಧ ನಿರ್ಮಾಣಕ್ಕೆ ಭೂಮಿ ಪೂಜೆ

# ಚಿಟಗುಪ್ಪ ಪಟ್ಟಣದ ಅಭಿವೃದ್ಧಿಗೆ ಸದಾ ಸಿದ್ಧ : ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ರಾಜ್ಯದಲ್ಲಿ ಜಗದೀಶ ಶೆಟ್ಟರ್ ಅವರು ಮುಖ್ಯಮಂತ್ರಿ ಆಗಿದಾಗ ಹೊಸ ತಾಲೂಕಗಳ ಘೋಷಣೆ ಮಾಡಿದ ಫಲ ಚಿಟಗುಪ್ಪ ತಾಲೂಕ ಕೇಂದ್ರವಾಗಿದೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಹತ್ತಿರ ಕಂದಾಯ ಇಲಾಖೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆ ಅಡಿಯಲ್ಲಿ 8.6 ಲಕ್ಷ ಅಂದಾಜು ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತ ತಿಳಿಸಿದರು. ತಾಲೂಕ ಘೋಷಣೆಯಾದ ಮೇಲೆ ತಾಲೂಕ ಪಂಚಾಯತ್ ಕಚೇರಿ, ಪ್ರಾದೇಶಿಕ ವಲಯ ಅರಣ್ಯ ಕಚೇರಿಗಳು ಆರಂಭಗೊಂಡಿವೆ ಇನ್ನು ಹಲವಾರು ಇಲಾಖೆಗಳು ಇಲ್ಲಿ ಮಂಜೂರಾಗಬೇಕೆಂದು ಆಗ್ರಹಿಸಿದ್ದಾರೆ. ಪ್ರಜಾ ಸೌಧ/ ಆಡಳಿತ ಸೌಧ ಗುಣಮಟ್ಟದಿಂದ ಕಾಮಗಾರಿ ಮಾಡಬೇಕು ಎಂದು ಗುತ್ತಿಗೆದಾರನಿಗೆ ಖಡಕ್ ಎಚ್ಚರಿಕೆ ನೀಡಿದರು. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಡೋಟೋರಿಯಮ್ ನಿರ್ಮಾಣಕ್ಕೆ ಮಾಜಿ ಸಚಿವ ರಾಜಶೇಖರ ಪಾಟೀಲ್ 1.5 ಲಕ್ಷ ರೂಪಾಯಿ ಅನುದಾನ ನೀಡಿದ್ದಾರೆ.



ಕಾಮಗಾರಿ ಪೂರ್ಣಗೊಳಿಸಲು 2.ಕೋಟಿ ರೂಪಾಯಿ ಅನುದಾನ ನೀಡಿದ್ದೇನೆ ಎಂದು ತಿಳಿಸಿದರು. ಅಭಿವೃದ್ಧಿ ವಿಷಯದಲ್ಲಿ ಯಾವುದೇ ಪಕ್ಷ ಪಾತವಿಲ್ಲದೆ ಎಲ್ಲರೂ ಒಗ್ಗೂಡಿ ಕ್ಷೇತ್ರದ ಅಭಿವೃದ್ಧಿ ಶ್ರಮಿಸೋಣ ಎಂದರು. ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ, ಚಿಟಗುಪ್ಪ ಪಟ್ಟಣ ಹೊಸ ತಾಲೂಕ ರಚನೆ ಮಾಡಿದ್ದು ಅಂದಿನ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರನ್ನು ನಾವು ಮರೆಯುವಂತಿಲ್ಲ. ಚಿಟಗುಪ್ಪ ತಾಲೂಕಿಗೆ ನನ್ನ ಮತ ಕ್ಷೇತ್ರದ 9 ಗ್ರಾಮ ಪಂಚಾಯತಗಳು ಒಳಗೊಂಡಿವೆ. ಈ ಪ್ರಜಾ ಸೌಧ ಮಂಜೂರಾತಿಗಾಗಿ ಶಾಸಕ ಸಿದ್ದು ಪಾಟೀಲ್ ಮತ್ತು ನಾನು ಕೂಡ ಸರ್ಕಾರದ ಮೇಲೆ ಒತ್ತಡ

> ಚಿಟಗುಪ್ಪ ಪಟ್ಟಣಕ್ಕೆ ಕ್ರೀಡಾಂಗಣ, ಅಲ್ಪಸಂಖ್ಯಾತರ ಶಾಲೆ ಮತ್ತು ವಸತಿ ನಿಲಯ ಮಂಜೂರು ಮಾಡಬೇಕೆಂದು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದೆ, ಇಲಾಖೆಯವರು ಸ್ಥಳ ಪರಿಶೀಲನೆಗೆ ಆದೇಶ ಹೊರಡಿಸಿದ್ದಾರೆ. ಕಂದಾಯ ಇಲಾಖೆಯವರು ಸ್ಥಳ ಗುರುತಿಸಿಕೊಡಬೇಕೆಂದು ತಿಳಿಸಿದರು.

ತಂದ ಮೇಲೆ ಪ್ರಜಾ ಸೌಧ ಮಂಜೂರಾಗಿದೆ ಎಂದರು. ಪ್ರಜಾ ಸೌಧ ಜೊತೆಯಲಿಯೇ ತಾಲೂಕ ಪಂಚಾಯತ್ ಕಚೇರಿ ಕೂಡ ಅನುದಾನ ನಾನು ಸಿದ್ದು ಪಾಟೀಲ್ ಅನುದಾನ ಕೊಡುವುದಾಗಿ ಘೋಷಣೆ ಮಾಡಿದರು. ಯುವಜನತೆ ಆನ್ಲೈನ್ ಬೆಟ್ಟಿಂಗ್ ಸೇರಿದಂತೆ ವಿವಿಧ ಚಟಗಳಿಗೆ ಬಲಿಯಾಗುತ್ತಿದ್ದಾರೆ. ಯುವಕರು ಈ ಚಟಗಳಿಗೆ ಬಲಿಯಾಗದೆ ದೂರವಿರಲು ತಿಳಿಸಿದರು. ವಾಹನ ಚಲಾಯಿಸುವಾಗ ಮೊಬೈಲ್ ಬಳಸಬೇಡಿ ಸಂಚಾರಿ ನಿಯಮಗಳು ತಪ್ಪಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು, ಅಕ್ರಮ ಚಟುವಟಿಕೆಗಳು ನಡೆಸುವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಮಾತನಾಡಿ, ರಾಜ್ಯದಲ್ಲಿ 43 ಹೊಸ ತಾಲೂಕಗಳು ಘೋಷಣೆಯಾದಾಗ ಜಿಲ್ಲೆಯಲ್ಲಿ ಚಿಟಗುಪ್ಪ, ಹುಲಸೂರ್, ಕಮಲನಗರ್ ತಾಲೂಕಗಳು ಘೋಷಣೆ ಆಗಿವೆ. ಕಂದಾಯ ಇಲಾಖೆ ಕೆಕೆಆರ್ ಡಿಬಿ ಅನುದಾನದೊಂದಿಗೆ ಪಟ್ಟಣದ ಪ್ರಜಾ ಸೌಧ ನಿರ್ಮಾಣಕ್ಕೆ ಮುಖ್ಯಮಂತ್ರಿಗಳು ರೂಪಿಸಿದ ಆಡಳಿತದ ಅನುಕೂಲಕ್ಕಾಗಿ ಸರ್ಕಾರದ ಅನುದಾನದಲ್ಲಿ ಪ್ರಜಾ ಸೌಧಗಳು ನಿರ್ಮಾಣಕ್ಕೆ ಆದ್ಯತೆ ನೀಡಿದ್ದಾರೆ ಎಂದರು. ಈ ಪ್ರಜಾ ಸೌಧದ ಕಾಮಗಾರಿಯನ್ನು 11 ತಿಂಗಳ ಅವಧಿಯಲ್ಲಿ ಗುಣಮಟ್ಟದಿಂದ ಕಾಮಗಾರಿ ನಡೆಸಬೇಕು ಎಂದು ಹೇಳಿದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕ್ಕರ್, ಉಪಾಧ್ಯಕ್ಷ ನಸೀರ್ ಖಾನ ಸಾಬ್, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ, ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಸಿಪಿಐ ಶ್ರೀನಿವಾಸ ಅಲ್ಲಾಪುರ್, ಹೌಸಿಂಗ್ ಬೋರ್ಡ್ ಕಾರ್ಯನಿರ್ವಾಹಕ ಅಧಿಕಾರಿ ಶಶಿಕಾಂತ, ಗುತ್ತಿಗೆದಾರ ಅಸದಖಾನ, ಪಿಎಸ್ಐಗಳಾದ ಬಾಷುಮಿಯಾ ಕೊಂಚೂರ್, ಮಹೇಂದ್ರಕುಮಾರ್, ನಿಂಗಪ್ಪ ಮನ್ನುರ ಸೇರಿದಂತೆ ಪುರಸಭೆ ಸದಸ್ಯರು, ಪಟ್ಟಣದ ಪ್ರಮುಖರು ಉಪಸ್ಥಿತರಿದ್ದರು.

# ಸಿಂಧನಕೇರಾ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ ರವಿಕಾಂತ ಮಿತ್ರಾ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:–ತಾಲೂಕಿನ ಸಿಂಧನಕೇರಾ ಗ್ರಾಮ ಪಂಚಾಯತ್ ಅಧ್ಯಕ್ಷ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಮಂಗಳವಾರ ಅಧ್ಯಕ್ಷರ ಚುನಾವಣೆ ಜರುಗಿ–ತ್ತು. ಅಧ್ಯಕ್ಷ ಸ್ಥಾನಕ್ಕೆ ರವಿಕಾಂತ ಮಿತ್ರಾ ಒಬ್ಬರೇ ನಾಮಪತ್ರ ಸಲ್ಲಿಸಿದರು. ಚುನಾವಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ನಾಯಕ್ ರವಿಕಾಂತ ಮಾರುತಿ ಇವರನ್ನು ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಘೋಷಣೆ ಮಾಡಿದರು. ಈ ಹಿಂದೆ ರವಿಕಾಂತ ಮಿತ್ರಾ ಅವರು 2 ವರ್ಷ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಇವರು ಸ್ನಾತ–ಕೋತ್ತರ ಪದವೀಧರರಾಗಿದ್ದಾರೆ. ಸಿಂಧನಕೇರಾ ಗ್ರಾಮ ಪಂಚಾಯತ್ 19 ಜನ ಸದಸ್ಯರು ಹೊಂದಿದ್ದಾರೆ. ಈ ಚುನಾವಣೆಯಲ್ಲಿ 14 ಜನ ಸದಸ್ಯರು ಉಪಸ್ಥಿತರಿದ್ದರು. ಇವರು ಅವಿರೋಧವಾಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿ ಆಯ್ಕೆಗೊಂಡಿದಕ್ಕೆ ಅವರ ಅಭಿಮಾನಿಗಳು ಸನ್ಮಾನಿಸಿ ಮೆರವಣಿಗೆ ಮಾಡಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುಗಂಧ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವರ್ಷಾಂತ್ಯಕ್ಕೆ ರಾಜಕಾಲುವೆ ಕಾಮಗಾರಿ ಪೂರ್ಣ: BBMP

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಜೆಪಿ ನಗರದ ಸಿಂಧೂರ ಕಲ್ಯಾಣ ಮಂಟಪದ ಸುತ್ತಲೂ ಕೈಗೊಂಡಿರುವ ರಾಜಕಾಲುವೆ ಕಾಮಗಾರಿಯನ್ನು ಈ ವರ್ಷದ ಅಂತ್ಯದ ವೇಳೆಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ಮಹೇಶ್ವರ್ ರಾವ್ ಅವರು ಸೋಮವಾರ ಸೂಚನೆ ನೀಡಿದರು.

ಬಿಬಿಎಂಪಿ ದಕ್ಷಿಣ ವಲಯದ ವಿವಿಧ ಸ್ಥಳಗಳ ಪರಿಶೀಲನೆಯ ಸಂದರ್ಭದಲ್ಲಿ, ಸಿಂಧೂರ ಕಲ್ಯಾಣ ಮಂಟಪದಿಂದ ಕೆ–210ಕ್ಕೆ ಸಂಪರ್ಕ ಕಲ್ಪಿಸಲು 1.3 ಕಿ.ಮೀ ಉದ್ದದ ಮಳೆ ನೀರು ಹರಿಯುವ ರಾಜಕಾಲುವೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಪ್ರವಾಹ ಆಗುವುದನ್ನು ತಪ್ಪಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಯಾವುದೇ ಅಹಿತಕರ ಘಟನೆಗಳನ್ನು ತಡೆಗಟ್ಟಲು ನಿರ್ಮಾಣ ಸ್ಥಳಗಳ ಬಳಿ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ನಿರ್ಮಾಣ ವಲಯದ ಉದ್ದಕ್ಕೂ ಪಾದಚಾರಿ ಮಾರ್ಗಗಳ ಸರಿಯಾದ ನಿರ್ವಹಣೆ ಮಾಡಬೇಕು. ಹೊರ ವರ್ತುಲ ರಸ್ತೆಯ ಚರಂಡಿಗಳಲ್ಲಿ ಹೂಳೆತ್ತಿ ಸ್ವಚ್ಛತೆ ಕಾಪಾಡಬೇಕು. ಚರಂಡಿಗಳಿಂದ ತೆಗೆದ ಹೂಳನ್ನು ಸ್ಥಳದಲ್ಲಿಯೇ ಬಿಡದೆ ಕೂಡಲೇ ವಿಲೇವಾರಿ ಮಾಡಬೇಕು ಎಂದು ಹೇಳಿದರು.

ಜಯನಗರದ 3ನೇ ಬ್ಲಾಕ್‌ನಲ್ಲಿ 5 ಟನ್ ಸಾಮರ್ಥ್ಯದ ಘನತ್ಯಾಜ್ಯ ಜೈವಿಕ ಅನಿಲ ಘಟಕವಿದೆ. ಇಂತಹ ಘಟಕಗಳನ್ನು ನಗರದ ಇತರೆ ಭಾಗಗಳಲ್ಲಿ ಸ್ಥಾಪಿಸಬೇಕು.

ಕೆ.ಆರ್. ಮಾರುಕಟ್ಟೆಯಲ್ಲಿ ಸ್ಥಾಪಿಸಿದರೆ, ತ್ಯಾಜ್ಯ ನಿರ್ವಹಣಾ ಸಮಸ್ಯೆ ಬಗೆಹರಿಸಬಹುದು ಎಂದು ತಿಳಿಸಿದರು.

ಬಳಿಕ ಅತ್ತಿಗುಪ್ಪೆ ವಾರ್ಡ್‌ನಲ್ಲಿರುವ ಘನತ್ಯಾಜ್ಯ ಸಂಗ್ರಹಣಾ ಕೇಂದ್ರ–ಕ್ಕೆ ಭೇಟಿ ನೀಡಿದ ಅವರು, ರಸ್ತೆಬದಿಗಳು ಮತ್ತು ಖಾಲಿ ಜಾಗಗಳು ಕಸದ ಸುರಿಯುವ ತಾಣಗಳಾಗಿ ಬದಲಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದಕ್ಕಾಗಿ ಮಾರ್ಷಲ್ ಗಳು ಹಾಗೂ ಮೇಲ್ವಿಚಾರಕರ ನೇಮಿಸುವಂತೆಯೂ ಸೂಚನೆ ನೀಡಿದರು.

# ಪಿ.ಎಮ್‌ಶ್ರೀ ಜವಾಹರ ನವೋದಯ: 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು; ಜಿಲ್ಲೆಯ ಲಿಂಗಸುಗೂರು ತಾಲೂಕಿನ ಕನ್ನಾಪೂರ ಹಟ್ಟಿಯ ಪಿ.ಎಮ್‌ಶ್ರೀ ಜವಾಹರ ನವೋದಯ ವಿದ್ಯಾಲಯದಿಂದ 2026–27ನೇ ಸಾಲಿನ 6ನೇ ತರಗತಿ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ. ವಿದ್ಯಾಲಯದದಲ್ಲಿ ಎನ್‌ಇಪಿ 2020ರ ಆದರಿತ ಶಿಕ್ಷಣ ವ್ಯವಸ್ಥೆ, ಬಾಲಕ, ಬಾಲಕಿಯರಿಗೆ ಪ್ರತ್ಯೇಕ ಉಚಿತ ಊಟ ಮತ್ತು ವಸತಿ ವ್ಯವಸ್ಥೆ, ಅನುಭವಿ ಮತ್ತು ನುರಿತ ಸಿಬ್ಬಂದಿ, ಅಂತರ್ಜಾಲ, ಎಜುಸ್ಯಾಟ್ ಸೌಲಭ್ಯ, ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕಾಗಿ ಸಹಪಠ್ಯ ಚಟುವಟಿಕೆ, ಕ್ರೀಡೆ ಮತ್ತು ಆಟೋಟ, ಯೋಗ ತರಬೇತಿಗೆ ವಿಶೇಷ ಪ್ರೋತ್ಸಾಹ ನೀಡಲಾಗುವುದು.

ಅರ್ಹತೆ: ಅರ್ಜಿ ತುಂಬುವ ವಿದ್ಯಾರ್ಥಿಗಳು 2025–26ನೇ ಸಾಲಿನಲ್ಲಿ 5 ನೇ ತರಗತಿ ರಾಯಚೂರು ಜಿಲ್ಲೆಯಲ್ಲಿ ಓದುತ್ತಿರಬೇಕು. ಪ್ರವೇಶ ಪಡೆ–ಯ ಬಯಸುವ ಅಭ್ಯರ್ಥಿಯು ದಿನಾಂಕ: 01–05–2014ಕ್ಕಿಂತ ಮೊದಲು ಮತ್ತು ದಿನಾಂಕ 31–07–2016ನಂತರ ಜನಿಸಿರಬಾರದು. ಸರಕಾರದ ಮಾನ್ಯತೆ ಪಡೆದ ಯಾವುದೇ ಶಾಲೆಯಲ್ಲಿ 3, 4ನೇ ತರಗತಿ ಉತ್ತೀರ್ಣನಾಗಿದ್ದು, 5ನೇ ತರಗತಿಯಲ್ಲಿ ಓದುತ್ತಿರಬೇಕು. 2025–26ನೇ ಸಾಲಿನಲ್ಲಿ ದಿನಾಂಕ: 31–07–20025ರ ಒಳಗಾಗಿ ಜಿಲ್ಲೆಯಲ್ಲಿ 5ನೇ ತರಗತಿ ಪ್ರವೇಶ ಪಡೆದಿರಬೇಕು. ಅರ್ಜಿ ಸಲ್ಲಿಸುವುದು: ಜವಾಹರ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆ 2026ರ ಅರ್ಜಿಯನ್ನು ಆನ್ ಲೈನ್ ಮುಖಾಂತರ ಸಲ್ಲಿಸತಕ್ಕದ್ದು. ಮುಖ್ಯೋಪಾಧ್ಯಾಯರು ನೀಡಿದ ಪ್ರಮಾಣ ಪತ್ರ. ಅಭ್ಯರ್ಥಿಯ ಭಾವಚಿತ್ರ ಅಭ್ಯರ್ಥಿಯ ಸಹಿ ಮತ್ತು ಪಾಲಕರ ಸಹಿ, ಅಭ್ಯರ್ಥಿಯ ಆಧಾರ ಸಂಖ್ಯೆ, ಪಾಲಕರ ಮೊಬೈಲ್ ಸಂಖ್ಯೆ, ವಾಸಸ್ಥಳ ಪ್ರಮಾಣ ಪತ್ರದೊಂದಿಗೆ ಆಸಕ್ತರು ವೆಬ್‌ಸೈಟ್ ವಿಳಾಸ: www.navodaya.gov.in CxÀªÁ https://cbseitms.rcil.gov.in/nv ನಲ್ಲಿ ಜುಲೈ 29ರೊಳಗಾಗಿ ಸಲ್ಲಿಸಬಹುದಾಗಿದೆ. ಪ್ರವೇಶ ಪರೀಕ್ಷೆಯನ್ನು ಡಿಸೆಂಬರ್ 13ರ ಬೆಳಿಗ್ಗೆ 11.30ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಮೊಬೈಲ್ ಸಂಖ್ಯೆ: 7204109046 ಅಥವಾ 7899009900ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಿ.ಎಮ್‌ಶ್ರೀ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಿಟಗುಪ್ಪ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಅಪಾರ: ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಚಿಟಗುಪ್ಪ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಕಾಂಗ್ರೆಸ್ ಸರಕಾರ ನೀಡಿದ ಕೊಡುಗೆ ಅಪಾರವಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಪತ್ರಿಕಾ ಹೇಳಿಕೆ ನೀಡಿದ್ದಾರೆ.


ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಜಗದೀಶ ಶೆಟ್ಟರ್ ಹಾಗೂ ಕಂದಾಯ ಸಚಿವರಾಗಿದ್ದ, ಆರ್. ಅಶೋಕಗೆ ಅನೇಕ ಬಾರಿ ಅನುದಾನ ನೀಡಯವಂತೆ ಮನವಿ ಮಾಡಲಾಗಿತ್ತು. ಆದರೆ ಅವರು ನೀಡಿದ ಭರವಸೆ ಕೇವಲ ಭರವಸೆಯಾಗಿಯೇ ಉಳಿಯಿತು. ಇದು ಬಹಳ ಬೇಸರದ ಸಂಗತಿಯಾಗಿದೆ ಎಂದರು.

ಆದರೆ ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಬಂದ ನಂತರ ಚಿಟಗುಪ್ಪ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ನಮ್ಮ ಮನವಿಗೆ ಸ್ಪಂಧಿಸಿದ ಕಂದಾಯ ಸಚಿವ ಕೃಷ್ಣಬೈರೆಗೌಡ ವರು ಚಿಟಗುಪ್ಪ ಪಟ್ಟಣದಲ್ಲಿ ಪ್ರಜಾಸೌಭ ನಿರ್ಮಾಣಕ್ಕೆ 8.60 ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿದ್ದು, ಈ ಭಾಗದ ಜನರ ಪರವಾಗಿ ಸರಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದರು.

# ನಾಳೆ ಬೀದರ್ ಜಿಲ್ಲೆಗೆ ನಿಖಿಲ್ ಕುಮಾರಸ್ವಾಮಿ : ರಮೇಶ್ ಪಾಟೀಲ್ ಸೋಲ್ಪೂರ್

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 01 : ಜೆಡಿಎಸ್ ಪಕ್ಷದಯುವಘಟಕದ ರಾಜ್ಯಾಧ್ಯಕ್ಷರಾಗಿರುವ ನಿಖಿಲ್ ಕುಮಾರಸ್ವಾಮಿರವರು ಜುಲೈ 03ನೇ ತಾರೀಖು ಬೀದರ್ ಜಿಲ್ಲೆಗೆ ಆಗಮಿಸಲಿದ್ದಾರೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷರಾದ ರಮೇಶ್ ಪಾಟೀಲ್ ಸೋಲ್ಪೂರ್ ರವರು ತಿಳಿಸಿದ್ದಾರೆ.



ಜೆಡಿಎಸ್ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರ ಸಭೆಗೆ ಸಂಬಂಧಿಸಿದಂತೆ ಬೀದರ್ ನಗರದ ಜೆಡಿಎಸ್ ಜಿಲ್ಲಾ ಕಛೇರಿಯಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ಜುಲೈ 03ರಂದು ನಿಖಿಲ್ ಕುಮಾರಸ್ವಾಮಿರವರು ಬೀದರ್ ಜಿಲ್ಲಾಪ್ರವಾಸಹಮ್ಮಿಕೊಂಡಿದ್ದಾರೆ ಎಂದರು. ಜುಲೈ 03ರಂದು ಬೆಳಗ್ಗೆ 11:30ಕ್ಕೆ ಬೀದರ್ ಉತ್ತರ ವಿಧಾನಸಭಾ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಬೀದರ್ ನಗರದ ಲಾವಣ್ಯ ಫಂಕ್ಷನ್ ಹಾಲ್ ನಲ್ಲಿ ಹಾಗೂ ಸಂಜೆ 04 ಗಂಟೆಗೆ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಮನ್ನಾಎಖೇಳ್ಳಿಹೊರವಲಯದಲ್ಲಿರುವ (ಮೀನಕೇರಾಕ್ರಾಸ್) ವಿಜಯಲಕ್ಷ್ಮಿ ಫಂಕ್ಷನ್ ಹಾಲ್ ನಲ್ಲಿ 'ಜೆಡಿಎಸ್ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರ ಸಭೆ' ನಡೆಯುತ್ತದೆ.

ಅಂದು ನಡೆಯುವ ಸಭೆಗೆ ನಾವು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರು, ಮುಖಂಡರು ಸೇರಬೇಕು. ಕಾರ್ಯಕ್ರಮದ ಯಶಸ್ವಿಗಾಗಿ ಪಕ್ಷದ ಪ್ರತಿಯೊಬ್ಬ ಮುಖಂಡರು, ಕಾರ್ಯಕರ್ತರು ಶ್ರಮಿಸಬೇಕು ಎಂದು ಸಭೆಯಲ್ಲಿ ಪಾಲ್ಗೊಂಡಿದ್ದ ಪ್ರಮುಖರಿಗೆ ಜೆಡಿಎಸ್ ಜಿಲ್ಲಾಧ್ಯಕ್ಷ ರಮೇಶ್ ಪಾಟೀಲ್ ಸೋಲ್ಪೂರ್ ರವರು ತಿಳಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶೋಕ್ ಕೊಡಗೆ, ಜಿಲ್ಲಾ ಚುನಾವಣಾ ಅಧಿಕಾರಿ ಶಿವಪುತ್ರ ಮಾಳಗೆ, ಪ್ರಮುಖರಾದ ಐಲಿಂಜಾನ್ ಮಠಪತಿ, ರಾಜಶೇಖರ್ ಜವಳೆ, ಸಿದ್ರಾಮಪ್ಪ ವಂಕೆ, ಶಿವರಾಜ್ ಹುಲಿ, ಸುರೇಶ್ ಸಿಗಿ, ಬಸವರಾಜ್ ಪಾಟೀಲ್ ಹಾರೂರಗೇರಿ, ಸಂಜುರೆಡ್ಡಿ ನಿರ್ಣಾ, ಅಭಿ ಕಾಳೆ, ಸಂಗು ಚಿದ್ರಿ, ರಾಜು ಚಿಂತಾಮಣಿ, ಮನೋಹರ್ ದಂಡಿ, ಬೊಮಗೊಂಡ ಚಿಟ್ಟಾವಾಡಿ, ಪ್ರಶಾಂತ್ ವಿಶ್ವಕರ್ಮ, ಬಸವರಾಜ ಯರನಹಳ್ಳಿ, ಜಾನ್ಸನ್ ಕಪಲಾಪೂರ, ಸುಭಾಷ್ ಪಾಟೀಲ್, ವಿಕ್ಕಿ ಕಮಲನಗರ, ಗೌತಮ್ ಸಾಗರ್, ತಾನಾಜಿ ತೋರಣೇಕರ್, ಮಲ್ಲಿಕಾರ್ಜುನ ನೆಳ್ಗೆ, ಲಲಿತಾ ಕರಂಜೆ, ಸುಂದರ್ ರಾಜ್ ಮಾಳೆಗಾಂ, ಸುದರ್ಶನ್ ಸುಂದರರಾಜ್, ಬಸವರಾಜ್ ಶಾಹಪೂರೆ, ರವಿಕುಮಾರ್ ಸಿರ್ಸಿ, ಸೂರ್ಯಕಾಂತ್ ದಂಡಿ, ಪ್ರಲಾದ್ ಚಿಟ್ಟವಾಡಿ, ಶಾಂತಮ್ಮ ಕರಕನಹಳ್ಳಿ, ಮಹಮ್ಮದ್ ಮುಜುಬುದ್ದೀನ್, ಮಹಮ್ಮದ್ ತಾಜುದ್ದೀನ್ ಖಾದ್ರಿ, ಅವಿನಾಶ್ ಸಿಂಧೆ, ಗಂಗಮ್ಮ ಫುಲೆ, ಅಭೀದ್ ಹಲಿ, ಲಕ್ಷ್ಮೀ ದಂಡೆ ಸೇರಿದಂತೆ ಅನೇಕರಿದ್ದರು.

# ದಿಲೀಪ್ ನಿಟ್ಟೂರೆಗೆ ಶ್ರೇಷ್ಠ ಎಂಜಿನಿಯರ್ ಜಿಲ್ಲಾ ಪ್ರಶಸ್ತಿ



ಮಲ್ಲಮ್ಮನುಡಿವಾರ್ತೆ ಬೀದರ. ಜು. 01: ಇಲ್ಲಿಯ ಸಿವಿಲ್ ಎಂಜಿನಿಯರ್ ದಿಲೀಪ್ ನಿಟ್ಟೂರೆ ಅವರಿಗೆ ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಎಂಜಿನಿಯರ್ಸ್ (ಇಂಡಿಯಾ) ವತಿಯಿಂದ ಕೊಡಲಾಗುವ ಪ್ರಸಕ್ತ ಸಾಲಿನ ರಾಷ್ಟ್ರೀಯ ಶ್ರೇಷ್ಠ ಎಂಜಿನಿಯರ್ ಜಿಲ್ಲಾ ಪ್ರಶಸ್ತಿ ಸಂದಿದೆ.

ಪಾಂಡಿಚೇರಿಯಲ್ಲಿ ಈಚೆಗೆ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ರಂಗಸ್ವಾಮಿ ಎನ್. ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಕಟ್ಟಡ ನಿರ್ಮಾಣ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಅವರಿಗೆ ಪ್ರಶಸ್ತಿ ಒಲಿದು ಬಂದಿದೆ.

ದಿಲೀಪ್ ನಿಟ್ಟೂರೆ 28 ವರ್ಷಗಳಿಂದ ಎಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈವರೆಗೆ ಕಡಿಮೆ ವೆಚ್ಚದಲ್ಲಿ ಅತ್ಯಾಧುನಿಕ ಸೌಲಭ್ಯವುಳ್ಳ 1,200ಕ್ಕೂ ಹೆಚ್ಚು ಸುಸಜ್ಜಿತ ಪರಿಸರ ಸ್ನೇಹಿ ಮನೆಗಳನ್ನು ನಿರ್ಮಿಸಿ ಗಮನ ಸೆಳೆದಿದ್ದಾರೆ.

ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಎಂಜಿನಿಯರ್ಸ್ ಬೀದರ್ ಘಟಕದ ಕಾರ್ಯದರ್ಶಿ ಸೇರಿ ವಿವಿಧ ಹುದ್ದೆಗಳಲ್ಲಿ ಸಮರ್ಥವಾಗಿ ಸೇವೆ ಸಲ್ಲಿಸಿದ್ದಾರೆ. ಅತ್ಯುತ್ತಮ ಕಟ್ಟಡ ನಿರ್ಮಾಣಕ್ಕಾಗಿ ಇಂಡಿಯನ್ ಕಾಂಕ್ರೆಟ್ ಇ???ಸ್ಟಿಟ್ಯೂಟ್ ಸೇರಿ ವಿವಿಧ ಸಂಘ ಸಂಸ್ಥೆಗಳ ಪ್ರಶಸ್ತಿಗೆ ಭಾಜನರಾಗಿದ್ದಾರೆ.

# ವಿಜ್ಞಾನ ಮತ್ತು ವೈಜ್ಞಾನಿಕ ಮನೋಭಾವದಲ್ಲಿ ಯುವಕರ ಪಾತ್ರ ಮಹತ್ವದ್ದು

ಬೀದರ :ಜು.1: ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್. ವಾರ್ಷಿಕ ವಿಶೇಷ ಶಿಬಿರವನ್ನು ವಿಶ್ವವಿದ್ಯಾಲಯದ ಕುಲಸಚಿವರು (ಆಡಳಿತ) ಆದರಣೀಯ ಸುರೇಖಾ ಅಮೃತ ಹಸ್ತದಿಂದ ಉದ್ಘಾಟಿಸಲಾಯಿತು.



ಕಾರ್ಯಕ್ರಮವನ್ನು ದಿವ್ಯ ಸಾನಿಧ್ಯವನ್ನು ಷಟಸ್ಥಲ ಶ್ರೋ.ಬ್ರ. ಶ್ರೀ ಗಂಗಾಧರ ಶಿವಾಚಾರ್ಯ ಲಾಡಗೇರಿಮಠ, ಬೀದರ ವಹಿಸಿದ್ದರು ಹಾಗೂ ಷಟಸ್ಥಲ ಶ್ರೋ.ಬ್ರ. ರುದ್ರಮುನಿ ಶಿವಚಾರ್ಯ ಹಿರೇಮಠ ಸಂಸ್ಥಾನ ಚಾಂಬಾಳ ಅವರು ಆರ್ಶೀವಚನ ನೀಡುತ್ತಾ ಇಂದಿನ ಭಾರತ ದೇಶದ ಭವ್ಯ ವಿದ್ಯಾರ್ಥಿಗಳು ಅತ್ಯಂತ ಚಾಣಾಕ್ಷತೆ ಮತ್ತು ಜಾಗ್ರತೆಯಿಂದ ಹಾಗೂ ಏಕಾಗ್ರತೆಯಿಂದ ಅಧ್ಯಯನ ಮಾಡಿದಾಗ ಉನ್ನತ ಹುದ್ದೆಗಳನ್ನು ಪಡೆಯಲು ಸಾಧ್ಯ ಆದರೆ ಇಂದಿನ ವಿದ್ಯಾರ್ಥಿಗಳು ಮೋಬೈಲ್ ಗೀಳಿನಿಂದ ಅದಕ್ಕೆ ದಾಸರಾಗಿ ತಮ್ಮ ಸಮಯ ಮತ್ತು ಪಾಲಕರ ಸದುದ್ದೇಶಗಳನ್ನು ನಿಷ್ಕ್ರಿಯಗೊಳಿಸುತ್ತಿದ್ದಾರೆ. ಪುಸ್ತಕವನ್ನು ತಲೆಬಾಗಿ ಓದಿದಾಗ ತಲೆ ಎತ್ತಿ ನಡೆಯುವಂತೆ ಮಾಡುತ್ತದೆ ವಿದ್ಯಾರ್ಥಿಗಳು ಕನಸು ಕಾಣದೇ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಅಧ್ಯಯನ ಹಾಗೂ ಗ್ರಂಥಾಲಯಗಳ ಸದುಪಯೋಗದಿಂದ ಉನ್ನತ ಹುದ್ದೆ ಪಡೆದು ಸಮಾಜದಲ್ಲಿ ಉನ್ನತಸ್ಥಾನಮಾನಗಳಿಸಬಹುದು ಎಂದು ಮಾರ್ಮಿಕವಾಗಿ ನುಡಿದರು.

ಈ ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಡಾ. ರಜನೀಶ ಎಸ್. ವಾಲಿಯವರು ಶಿಬಿರಾರ್ಥಿಗಳು ನೀರಿನ ಹಾಗೂ ವಿದ್ಯುತ್ ಶಕ್ತಿಯ ಸದುಪಯೋಗದ ಬಗ್ಗೆ ಮಾಹಿತಿ ನೀಡಿದರು ಹಾಗೂ ತಮ್ಮ ಮನೆ ಮತ್ತು ಗ್ರಾಮಗಳಲ್ಲಿ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಬೇಕು ಹಾಗೂ ಮೂಢನಂಬಿಕೆಗಳನ್ನು ತಡೆಹಿಡಿದು ವೈಜ್ಞಾನಿಕ ವಿಚಾರಗಳನ್ನು ಅಳವಡಿಸಿಕೊಂಡು ಉತ್ತಮ ಶಿಕ್ಷಣದ ಜೊತೆಗೆ ಸಮಾಜ ಸೇವೆಯಲ್ಲಿ ತೊಡಗುವಂತೆ ಶಿಬಿರಾರ್ಥಿಗಳಲ್ಲಿ ಮನೋಭಾವ ಬೆಳೆಸಬೇಕು ಇದರಿಂದ ಸುಂದರ ಸಮಾಜ ನಿರ್ಮಾಣವಾಗುತ್ತದೆ ಎಂದು ಮಾರ್ಮಿಕವಾಗಿ ನುಡಿದರು.

ಬೀದರ ವಿಶ್ವವಿದ್ಯಾಲಯ ಬೀದರದ ಕುಲಸಚಿವರು (ಆಡಳಿತ) ಆದರಣೀಯ ಸುರೇಖಾಯವರು ಮಾತನಾಡುತ್ತಾ ಶಿಬಿರಾರ್ಥಿಗಳು ಯಾವುದೇ ಕೆಲಸಕ್ಕೆ ಹಿಂಜರಿಯದೆ ನಾನು ಸದಾ ಸಿದ್ಧ ಸಮಾಜಕ್ಕಾಗಿ ಹಾಗೂ ಸಮಾಜದಲ್ಲಿರುವ ಗುರು ಹಿರಿಯರಿಗೆ ಗೌರವ ಸಲ್ಲಿಸುವುದು ಮತ್ತು ತಮ್ಮ ಗ್ರಾಮದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಿಸಲು ಅನಕ್ಷರಸ್ಥರನ್ನು ಸಾಕ್ಷರರಾಗಿ ಮಾಡಿ ಅಂಚೆ ಇಲಾಖೆಯಿಂದ ಬಂದ ಪತ್ರಗಳನ್ನು ಓದಲು ಕನಿಷ್ಠ ಜ್ಞಾನ ಪಡೆದರು ಅವರ ಜೀವನ ಸಾರ್ಥಕವಾಗುತ್ತದೆ ಪ್ರತಿಯೊಬ್ಬ ಶಿಬಿರಾರ್ಥಿ ಗ್ರಾಮದಲ್ಲಿರುವ ಅಜ್ಞಾನ ಅಂಧಕಾರ ತೊಡೆದು ಹಾಕಲು ಸಕ್ರೀಯರಾಗಬೇಕೆಂದು ಹೇಳಿದರು. ಇನ್ನೋರ್ವ ಅತಿಥಿಗಳಾದ ಬೀದರ ವಿಶ್ವವಿದ್ಯಾಲಯ ಬೀದರದ ಎನ್.ಎಸ್.ಎಸ್. ಯೋಜನಾಧಿಕಾರಿಯಾದ ಡಾ. ರವೀಂದ್ರ ಗಬಾಡೆಯವರು ಮಾತನಾಡುತ್ತಾ ಸರ್ಕಾರ ನಿಮ್ಮ ಮೇಲೆ ಹಣ ತೊಡಗಿಸುವುದರ ಉದ್ದೇಶ ಪ್ರತಿಯೊಬ್ಬ ಗ್ರಾಮದ ನಾಗರೀಕ ತನ್ನ ಮನೆ ಮತ್ತು ಗ್ರಾಮದ ಕೆಲಸಗಳನ್ನು ಸ್ವ-ಯಂ ಮಾಡಿಕೊಳ್ಳುವಂತೆ ಪ್ರೇರೆಪಿಸುವುದು ಶಿಬಿರಾರ್ಥಿಯ ಉದ್ದೇಶ. ಜನರಲ್ಲಿ ವೈಜ್ಞಾನಕ ದೃಷ್ಟಿಕೋನ ಮೂಡಿಸುವುದು, ಸುತ್ತಮುತ್ತಲಿನ ಪರಿಸರ ಹಾಗೂ ಮರಗಿಡಗಳನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬ ಶಿಬಿರಾರ್ಥಿಯ ಪರಮ ಕರ್ತವ್ಯ ಎಂದು ನುಡಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಮಹಾವಿದ್ಯಾಲಯ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿ ಹಾಗೂ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರಅಣದೂರೆಯವರು ಉ ಪ ಸ್ಥಿ ತ ರಿ ದ್ದ ರು ಕಾರ್ಯಕ್ರಮದ ಮೊದಲಿಗೆ ಪ್ರಾರ್ಥನೆ ಗೀತೆಯನ್ನು ಕು: ಅಂಕಿತಾ ಮತ್ತು ಕು: ಭಾಗ್ಯಜ್ಯೋತಿ ಶಿಬಿರಾರ್ಥಿಗಳು ಹಾಡಿದರೆ, ಹಾಗೂ ಕಾರ್ಯಕ್ರಮವನ್ನು ಎನ್.ಎಸ್.ಎಸ್. 'ಅ' ಘಟಕದ ಅಧಿಕಾರಿಯಾದ ಡಾ. ದೀಪಾ ರಾಗಯವರು ಸ್ವಾಗತಿಸಿದರೆ ಎನ್.ಎಸ್.ಎಸ್. 'ಬ' ಘಟಕದ ಅಧಿಕಾರಿಯಾದ ಶ್ರೀ ಬಸವರಾಜ ಬಿರಾದಾರ ನಿರೂಪಿಸಿದರೆ, ಶ್ರೀ ನೂರ ಪಾಶಾ ವಂದಿಸಿದರು. ಕಾರ್ಯಕ್ರಮದಲ್ಲಿ ಬಿ.ವಿ.ಬಿ. ಮಹಾವಿದ್ಯಾಲಯದ ಸಸ್ಯಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಶ್ರೀ ಕುಮಾರ ಸ್ವಾಮಿ ಹಿರೇಮಠ ಎನ್.ಎಸ್.ಎಸ್. ವಿದ್ಯಾರ್ಥಿ/ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

# ಅಕ್ರಮ ಮದ್ಯ ಮಾರಾಟ ತಡೆಗೆ ಆಗ್ರಹ



ಬೀದರ. ಜು. 01 : ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ತಡೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕ ಆಗ್ರಹಿಸಿದೆ.

ಸಂಘಟನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ಸೋಮವಾರ ನಿಯೋಗದಲ್ಲಿ ಈ ಕುರಿತು ಅಬಕಾರಿ ಉಪ ಆಯುಕ್ತ ರವಿಶಂಕರ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಅಂಗಡಿ, ಹೊಟೇಲ್, ಧಾಬಾಗಳಲ್ಲಿ ಅಕ್ರಮವಾಗಿ ಸಾರಾಯಿ ಮಾರಾಟ ಮಾಡಲಾಗುತ್ತಿದೆ ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ದೂರಿದರು.

ಕೆಲ ವೈನ್‌ಶಾಪ್‌ಗಳ ಮಾಲೀಕರು ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಮೋಟಾರ್ ಸೈಕಲ್ ಹಾಗೂ ವಾಹನಗಳಲ್ಲಿ ಹಳ್ಳಿಗಳಿಗೆ ಮದ್ಯ ಪೂರೈಕೆ ಮಾಡುತ್ತಿದ್ದಾರೆ. ಅವರಿಗೆ ಯಾವುದೇ ಭಯ ಇಲ್ಲದಂತಾಗಿದೆ. ಸಂಬಂಧಪಟ್ಟ ಅಧಿಕಾರಿಗಳ ಕುಮ್ಮಕ್ಕಿನಿಂದಲೇ ಈ ಅಕ್ರಮ ನಡೆಯುತ್ತಿದೆ ಎಂದು ಆರೋಪಿಸಿದರು.

ಅನೇಕರು ದಿನವಿಡೀ ದುಡಿದ ಹಣವನ್ನು ಮದ್ಯಕ್ಕೆ ಖರ್ಚು ಮಾಡಿ ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಅನೇಕ ಬಡ ಕುಟುಂಬಗಳು ಬೀದಿಗೆ ಬರುತ್ತಿವೆ ಎಂದು ದೂರಿದರು.

ಅಕ್ರಮ ಮದ್ಯ ಮಾರಾಟ ಹಾಗೂ ಸಾಗಣೆ ಮಾಡುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. 15 ದಿನಗಳಲ್ಲಿ ಕ್ರಮ ಕೈಗೊಳ್ಳದಿದ್ದರೆ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಸೇನೆಯ ಜಿಲ್ಲಾ ಘಟಕದ ಉಪಾಧ್ಯಕ್ಷರಾದ ದತ್ತಾತ್ರಿ ಅಲ್ಲಂಕೆರೆ, ಶಶಿಕುಮಾರ ಅಷ್ಟೂರೆ, ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಸುಧಾಕರ್ ರಾಠೋಡ್, ರಾಜಕುಮಾರ ಸ್ವಾಮಿ, ಗಿರೀಶ್ ಬಿರಾದಾರ, ಸಂತೋಷ್, ಅನಿಲ್ ರಾಜ-ಗೀರಾ, ರವಿ ಪಾಟೀಲ, ಮಹಾಲಿಂಗ ಬೆನಕನಳ್ಳಿ, ಕಿರಣ ಅಯಾಸಪುರೆ, ಕಿರಣ ಗಂದಗೆ, ಕೃಷ್ಣ ಕುಂಬಾರ, ಅಪ್ಪು ಸ್ವಾಮಿ ಮತ್ತಿತರರು ಇದ್ದರು.

# ಎಲ್ಲಾ ಇಲಾಖೆಯ ಮಾತೃ ಇಲಾಖೆ ಕಂದಾಯ ಇಲಾಖೆ :ತಹಸೀಲ್ದಾರ ವಡ್ಡನಕೆರೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.1:ಎಲ್ಲಾ ಇಲಾಖೆಗಳ ಮಾತೃ ಇಲಾಖೆ ಕಂದಾಯ ಇಲಾಖೆಯಾಗಿದೆ. ಸರ್ಕಾರದ ಎಲ್ಲಾ ಯೋಜನಗೆಳು ಜನಮಾನಸಕ್ಕೆ ಮುಟ್ಟಿಸುವ ಕಾರ್ಯ ಕಂದಾಯ ಇಲಾಖೆಯಿಂದಾಗುವುದು ಎಂದು ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೆರೆ ಹೇಳಿದರು.

ಪಟ್ಟಣದ ಪುರಭವನದಲ್ಲಿ ಸೋಮವಾರ ನಡೆದ ಕಂದಾಯ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರ ಎಲ್ಲಾ ಕೆಲಸಗಳಿಗೂ ಕಂದಾಯ ಇಲಾಖೆಯೇ ಪೂರಕವಾಗಿದೆ. ಮನುಷ್ಯ ಹುಟ್ಟಿದಾಗಿನಿಂದ ಕೊನೆಯವರೆಗೆ ಕಂದಾಯ ಇಲಾಖೆಯಲ್ಲಿ ಅವನ ಕೆಲಸ ಇರುತ್ತದೆ. ಹೀಗಾಗಿ ಕಂದಾಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುವ ಎಲ್ಲರೂ ತುಂಬಾ ಕ್ಷಮತೆಯಿಂದ ಕಾರ್ಯನಿರ್ವಹಿಸಬೇಕಾಗಿದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಿರಸ್ತೆದಾರ ಗೋಪಾಲ ಹಿಪ್ಪರಗಿ, ಬ್ರಿಟೀಷರ ಕಾಲದಿಂದಲೂ ಕಂದಾಯ ದಿನಾಚರಣೆ ಆಚರಿಸುತ್ತಾ ಬರಲಾಗುತ್ತಿದೆ. ರೈತಾಪಿ ಜನರ ಚಟುವಟಿಕೆ ಪ್ರಾರಂಭದ ದಿನ ಜೂನ, ಜುಲೈ ತಿಂಗಳಾಗಿದೆ. ಹೀಗಾಗಿ ಅಂದಿನಿಂದಲೂ ಇಂದಿನ ವರೆಗೆ ಜುಲೈ ಒಂದರಂದು ಕಂದಾಯ ದಿನಾಚರಣೆ ಆಚರಿಸುತ್ತಾ ಬರಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಕಂದಾಯ ಇಲಾಖೆಯಲ್ಲಿ ಸಾರ್ವಜನಿಕರ ಎಲ್ಲಾ ಕೆಲಸಗಳು ಸಮಯಕ್ಕೆ ಸರಿಯಾಗಿ ಮಾಡಿಕೊಡಬೇಕಾಗುತ್ತದೆ. ಇದರಿಂದ ಇಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಸಿಬ್ಬಂದಿಗಳು ತುಂಬಾ ಎಚ್ಚರಿಕೆಯಿಂದ ಕೆಲಸಮಾಡಬೇಕಾಗುತ್ತದೆ ಎಂದು ಹೇಳಿದರು.

ತಾಲೂಕು ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ವೈದ್ಯಾಧಿಕಾರಿ ಡಾ। ಅಬ್ದುಲ್ ಖಾದರ ಕಂದಾಯ ದಿನಾಚರಣೆ ಬಗ್ಗೆ ಮಾತನಾಡಿದರು.

ಇದೇವೇಳೆ ಪತ್ರಿಕಾ ದಿನಾಚರಣೆ ಮತ್ತು ವೈದ್ಯರ ದಿನಾಚರಣೆ ಇರುವ ಕಾರಣ ಪತ್ರಕರ್ತರಿಗೆ ಮತ್ತು ವೈದ್ಯರಿಗೆ ಕಂದಾಯ ಇಲಾಖೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸಂತೋಷ ಡಾವರಗಾವ ಅನಿಸಿಕೆ ವ್ಯಕ್ತ ಪಡಿಸಿದರು.

ಕಾರ್ಯಕ್ರಮದಲ್ಲಿ ಉಪ ತಹಸೀಲ್ದಾರ ಪಲ್ಲವಿ ಬೆಳಕೇರೆ, ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಬಸವರಾಜ ಬಂಗಾರೆ, ಅರವಿಂದ, ಅಹಮದ ಸಾಬ, ದಿಲರಾಸ ಪಸರಗಿ, ತಬ್‌ಸುಮ್, ಅವಿನಾಶ, ವಿನೋದ ರಾಠೋಡ ಉಪಸ್ಥಿತರಿದ್ದರು.

ಅವಿನಾಸ ಪ್ರಾರ್ಥನಾಗೀತೆ ಹಾಡಿದರು. ವಿನೋದ ರಾಠೋಡ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ತಬಸುಮ್ ವಂದಿಸಿದರು.

# ರಾಷ್ಟ್ರಮಟ್ಟದಲ್ಲಿ ಜಿಎನ್‌ಡಿ ಇಂಜಿನೀಯರಿಂಗ್ ಕಾಲೇಜ್‌ಗೆ 208ನೇ ರ್‍ಯಾಂಕ್

ಬೀದರ. ಜು. 01 : ಗುರು ನಾನಕ ಶಿಕ್ಷಣ ಸಂಸ್ಥೆಯಡಿ ನಡೆಯುತ್ತಿರುವ ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜ್‌ಗೆ

(ಮಾರ್ಕೆಟಿಂಗ್ ಅಂಡ್ ಡೆವಲಪ್ಮೆಂಟ್ ರಿಸರ್ಚ್ ಅಸೋಶೇರ್ಸ) ಇಂಡಿಯ ಟೂಡೆ ಪ್ರತಿಷ್ಠಿತ ಮಾರ್ಕೆಟಿಂಗ್ ಆಯಿಂಡ್ ಅಭಿವೃದ್ಧಿ ಸಂಶೋಧನಾ ಸಹವರ್ತಿಗಳು ರಾಷ್ಟ್ರಮಟ್ಟದಲ್ಲಿ ನಡೆಸಿದ ಬೆಸ್ಟ್ ಇಂಜಿನೀಯರಿರಿಗ್ ಕಾಲೇಜ್ ಆಫ್ ಇಂಡಿಯಾ ಸಮೀಕ್ಷೆಯಲ್ಲಿ 208ನೇ ರ್‍ಯಾಂಕ್ ಪಡೆದು-ಕೊಂಡು ಉತ್ತರ ಕರ್ನಾಟಕಕ್ಕೆ ಹೆಮ್ಮೆ ತಂದಿದೆ.

ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್



ಅವರು ಮಾತನಾಡುತ್ತ ಈ ಸಂಸ್ಥೆಯು ಉತ್ತರ ಕರ್ನಾಟಕದಲ್ಲಿ ಶ್ರೇಷ್ಠತೆಯ ಕೇಂದ್ರವಾಗಿ ಮುನ್ನಡೆ ಸಾಧಿಸುತ್ತಿದೆ. ಪ್ರದೇಶಾದ್ಯಂತ ವಿದ್ಯಾರ್ಥಿಗಳನ್ನು ಆಕರ್ಷಿಸುತ್ತಿದೆ. ಈ ಪುರಸ್ಕಾರಗಳು ಗುಣಮಟ್ಟದ ಶಿಕ್ಷಣ, ಮೂಲಸೌಕರ್ಯ, ಅಧ್ಯಾಪಕರ ಪರಿಣತಿ ಮತ್ತು ವಿದ್ಯಾರ್ಥಿ ಕೇಂದ್ರಿತ ಉಪಕ್ರಮಗಳಿಗೆ ಕಾಲೇಜಿನ್ ಸ್ಥಿರ ಬದ್ಧತೆಗೆ ಸಾಕ್ಷಿಯಾಗಿ ರಾಷ್ಟ್ರಮಟ್ಟದಲ್ಲಿ 208 ಸ್ಥಾನವನ್ನು ಪಡೆದುಕೊಂಡಿರುವುದು ಗಮನಾರ್ಹ ಸಾಧನೆಯಾಗಿದೆ ಎಂದು ಹೇಳಿದರು.

ಅದೇ ರೀತಿ ಸಿಬ್ಬಂದಿಯ ಕಠಿಣ ಪರಿಶ್ರಮ ಮತ್ತು ವಿದ್ಯಾರ್ಥಿಗಳನ್ನು ಈ ಸಾಧನೆಗಾಗಿ ಅಭಿನಂದಿಸಿದರು ಮತ್ತು ಇಂಜಿನೀಯರಿಂಗ್ ಶಿಕ್ಷಣದಲ್ಲಿ ಹೆಚ್ಚಿನ ಎತ್ತರಕ್ಕೆ ಏರುವುದುದನ್ನು ಮುಂದುವರಿಸುವುದಾಗಿ ತಿಳಿಸುತ್ತ ನಾವು ಕೌಶಲ್ಯಪೂರ್ಣ, ನೈತಿಕ ಮತ್ತು ಉದ್ಯಮಕ್ಕೆ ಸಿದ್ಧವಾಗಿರುವ ಇಂಜಿನೀಯರ್‌ಗಳನ್ನು ಉತ್ಪಾದಿಸುವತ್ತ ಗಮನಹರಿಸುತ್ತೆವೆ ಎಂದು ನುಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಡಾ. ಎಸ್. ಬಲಬೀರ್ ಸಿಂಗ್, ಪ್ರಾಂಶುಪಾಲರಾದ ಡಾ. ಎಂ. ಧನಂಜಯ್ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರಕಾರಿ ಶಾಲೆಗಳಿಗೆ ಶಾಸಕ ಕಂದಕೂರ ರೌಂಡ್ಸ್ । ಶಾಲಾ ಶಿಕ್ಷಣ ಅಧಿಕಾರಿಗಳಿಗೆ ತಾಕೀತು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಸರಕಾರಿ ಶಾಲೆಗಳಿಗೆ ಬೇಕಾದ ಮೂಲ ಸೌಲಭ್ಯ ಕಲಿಸ್ವಲು ನಾನು ಬದ್ಧನಾಗಿದ್ದೇನೆ ಆದರೆ ಅದಕ್ಕೆ ಪೂರಕವಾಗಿ ಶಿಕ್ಷಣದ ಗುಣಮಟ್ಟ ಸುಧಾರಿಸಿ ಎಸ್ಸೆಸ್ಸೆಲ್ಸಿ ಫಲಿತಾಂಶ ಉತ್ತಮವಾಗಿ ಬರಬೇಕು ಎಂದು ಶಾಸಕ ಶರಣಗೌಡ ಕಂದಕೂರ ಅವರು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಮತ್ತು ಶಿಕ್ಷಕರಿಗೆ ತಾಕೀತು ಮಾಡಿದರು.

ಗುರುಮಠಕಲ್ ಮತಕ್ಷೇತ್ರದ ಲಿಂಗೇರಿ ಸ್ಟೇಷನ್, ಬಳಿಚಕ್ರ, ಮಾಧ್ವಾರ, ಕೊಂಕಲ್, ಪುಟ್ ಪಾಕ್ ಪ್ರೌಢ ಶಾಲೆಗಳಿಗೆ ಭೇಟಿ ನೀಡಿದ ಅವರು ಅಲ್ಲಿನ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು. ಶಿಕ್ಷಕರು ಮಕ್ಕಳಿಗೆ ಮಾತ್ರವಲ್ಲದೆ ನಮ್ಮಂತವರಿಗೂ ಮಾದರಿಯಾಗಿಬೇಕು. ನಾವೆಲ್ಲ ಬಡತನ ಹಿನ್ನಲೆಯಿಂದ ಬಂದವರು, ನಮ್ಮಲ್ಲಿ ಬಹುತೇಕ ಪಾಲಕರು ಅನಕ್ಷರಸ್ಥರಾಗಿದ್ದಾರೆ ಅವರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಬೇಕಾದ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಸೂಚಿಸಿದರು.

ಶಿಕ್ಷಣದ ಬುನಾದಿ ಪ್ರಾಥಮಿಕ ಶಿಕ್ಷಣವಾಗಿದ್ದು ಇದನ್ನು ಸುಧಾರಣೆ ಮಾಡಬೇಕಾದ ಮಹತ್ತರ ಜವಾಬ್ದಾರಿ ಪ್ರಾಥಮಿಕ ಶಿಕ್ಷಕರ ಮೇಲಿದೆ. ಎಸ್ಸೆಸ್ಸೆಲ್ಸಿ ಫಲಿತಾಂಶ ಕುಸಿಯುವಲ್ಲಿ ಪ್ರಾಥಮಿಕ ಶಾಲಾ ಶಿಕ್ಷಣದ ವೈಫಲ್ಯ ಪ್ರಮುಖ ಕಾರಣವಾಗಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಹೀಗೆ ಒಬ್ಬರ ಮೇಲೆ ಮತ್ತೊಬ್ಬರು ಆರೋಪ ಮಾಡುವುದು ಬಿಟ್ಟು ಒಗ್ಗಟ್ಟಾಗಿ ಸುಧಾರಣೆ ಮಾಡುವ ಅಗತ್ಯವಿದೆ. ನಮ್ಮ ಭಾಗದಲ್ಲಿ ಶಿಸ್ತು, ಶಿಕ್ಷಣ ಮತ್ತು ಆರೋಗ್ಯ ಸುಧಾರಣೆ ಆಗಬೇಕು ಎಂದು ತಿಳಿಸಿದರು.



**ಬಿಸಿಯೂಟ ಸವಿದ ಶಾಸಕ ಕಂದಕೂರ...!**

ಗುರುಮಠಕಲ್ ಮತಕ್ಷೇತ್ರದ ವಿವಿಧ ಶಾಲೆಗಳಿಗೆ ಭೇಟಿ ನೀಡಿದ ಶಾಸಕ ಶರಣಗೌಡ ಕಂದಕೂರ ಅವರು ಮಾಧ್ವಾರ ಗ್ರಾಮದ ಸರಕಾರಿ ಕುವೆಂಪು ಮಾದರಿ ಶಾಲಾ ಮಕ್ಕಳೊಂದಿಗೆ ಮದ್ಯಾಹ್ನದ ಬಿಸಿಯೂಟ ಸವಿದರು. ಪ್ರತಿನಿತ್ಯ ಊಟದ ಜತೆಗೆ ಮೊಟ್ಟೆ, ಬಾಳೆಹಣ್ಣು ಸರಿಯಾಗಿ ಕೊಡುತ್ತಿರುವ ಬಗ್ಗೆ ವಿದ್ಯಾರ್ಥಿಗಳಿಂದ ಮಾಹಿತಿ ಪಡೆದರು. ಅಡುಗೆ ಸಿಬ್ಬಂದಿಗಳು ಸ್ವಚ್ಛತೆ ಕಾಪಾಡಿಕೊಳ್ಳಬೇಕು, ಇದನ್ನು ಸಮಪರ್ಕವಾಗಿ ನಿರ್ವಹಣೆ ಮಾಡುವಂತೆ ಶಿಕ್ಷಕರಿಗೆ ಸೂಚಿಸಿದರು. ಈ ಮಧ್ಯೆ ವಿದ್ಯಾರ್ಥಿಗಳು ಎದ್ದು ನಿಂತು ನೀವು ಕೊಟ್ಟ ತಟ್ಟೆಯಲ್ಲಿ ಊಟ ಮಾಡುತ್ತಿದ್ದೇವೆ ಸರ್ ಎಂದು ಸ್ಮರಿಸಿದರು. ಶಾಸಕರು ತಮ್ಮ ತಂದೆ ಮಾಜಿ ಶಾಸಕ ದಿ.ನಾಗನಗೌಡ ಕಂದಕೂರ ಅವರ ಪ್ರಥಮ ಪುಣ್ಯ ಸ್ಮರಣೆ ನಿಮಿತ್ತ ಮತಕ್ಷೇತ್ರದ ಎಲ್ಲಾ ಸರಕಾರಿ ಪ್ರೌಢ ಮತ್ತು ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಬಿಸಿಯೂಟದ ತಟ್ಟೆ ಮತ್ತು ಲೋಟ ವಿತರಣೆ ಮಾಡಿದ್ದರು.

## ಪ್ರಾಥಮಿಕ ಶಿಕ್ಷಣ ಕಳಪೆ...?

ಪ್ರಾಥಮಿಕ ಶಿಕ್ಷಣ ಕಳಪೆ ಮಟ್ಟದಿಂದ ಕೂಡಿರುವುದರ ಪರಿಣಾಮವೇ ಎಸ್ಸೆಸ್ಸೆಲ್ಸಿ ಫಲಿತಾಂಶ ಕುಸಿತಕ್ಕೆ ಪ್ರಮುಖ ಕಾರಣವಾಗಿದೆ ಎಂದು ಪ್ರೌಢ ಶಾಲಾ ಮುಖ್ಯಶಿಕ್ಷಕರೊಬ್ಬರು ಶಾಸಕ ಶರ–ಣಗೌಡ ಕಂದಕೂರ ಅವರ ಎದುರು ದೂರಿದರು. ಮಗು ಒಂದರಿಂದ ಏಳನೇ ತರಗತಿ ವರೆಗೆ ಏಳು ವರ್ಷಗಳ ಕಾಲ ಪ್ರಾಥಮಿಕ ಶಾಲೆಯಲ್ಲಿ ಇರುತ್ತೆ ಅಲ್ಲಿ ಕನಿಷ್ಟ ಓದಲು, ಬರೆಯಲು ಕಲಿತಿರುವುದಿಲ್ಲ. ಅಂತವರನ್ನು ದಾಖಲಾತಿ ಪಡೆದು ಎಸ್ಸೆಸ್ಸೆಲ್ಸಿ ಫಲಿತಾಂಶ ಹೆಚ್ಚಿಸುವುದು ಸವಾಲಿನ ಪ್ರಶ್ನೆಯಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ಎಸ್ ಮುಧೋಳ ಅವರು ಪ್ರೌಢ ಶಾಲೆಯವರು ಪ್ರಾಥಮಿಕ, ಕಾಲೇಜಿನಲ್ಲಿ ಪ್ರೌಢ ಶಿಕ್ಷಣವನ್ನು ದೂರುತ್ತಿರುವುದು ಸಾಮಾನ್ಯವಾಗಿದೆ. ಒಬ್ಬನ್ನೊಬ್ಬರು ದೂರುವುದು ಬಿಟ್ಟು ಗುಣಮಟ್ಟದ ಶಿಕ್ಷಣಕ್ಕೆ ಕೈಜೋಡಿಸಬೇಕಿದೆ. ಪ್ರಾಥಮಿಕ ಹಂತದಲ್ಲೂ ಎಫ್ ಎಲ್ ಎನ್ ಮುಖಾಂತರ ಮಕ್ಕಳ ಕಲಿಕೆಗೆ ಉತ್ತೇಜನ ನೀಡಲಾಗುತ್ತಿದೆ ಎಂದು ತಿಳಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಶಾಸಕ ಕಂದಕೂರ ಅವರು ನಾನು ಶಾಲೆಗಳಿಗೆ ಬೇಕಾದ ಪೂರಕವಾದ ಭೌತಿಕ ಸೌಲಭ್ಯ ಕಲ್ಪಿಸಲು ಬದ್ದನಿದ್ದೇನೆ ಆದರೆ ನೀವು ಪ್ರಸಕ್ತ ವರ್ಷದಲ್ಲಿ ಫಲಿತಾಂಶ ಹೆಚ್ಚಳ ಮಾಡಲೇಬೇಕು ಎಂದು ತಾಕೀತು ಮಾಡಿದರು.

ವಿದ್ಯಾರ್ಥಿಗಳ ಹಾಜರಾತಿ ಸರಿಯಾಗಿ ನೋಡಿಕೊಳ್ಳಬೇಕು. ಹೆಣ್ಣುಮಕ್ಕಳು ಯಾವುದೇ ಕಾರಣಕ್ಕೂ ಬಾಲ್ಯ ವಿವಾಹ ಮಾಡಿಕೊಳ್ಳಬಾರದು. ಒಂದು ವೇಳೆ ಯಾರಾದರೂ ಒತ್ತಾಯ ಮಾಡಿದರೆ ಟಾಲ್ ಫ್ರೀ ಸಂಖ್ಯೆಗೆ ಕರೆ ಮಾಡಿ ದೂರು ನೀಡುವಂತೆ ವಿದ್ಯಾರ್ಥಿಗಳಿಗೆ ಸೂಚಿಸಿದರು.

ಪ್ರಥಮವಾಗಿ ಲಿಂಗೇರಿ ಸ್ಟೇಷನ್ ಪ್ರೌಢ ಶಾಲೆಗೆ ಭೇಟಿ ನೀಡಿದ ಶಾಸಕರು ಅಲ್ಲಿ ಮಕ್ಕಳೊಂದಿಗೆ ಬೆಳಗಿನ ಪ್ರಾರ್ಥನೆಯಲ್ಲಿ ಭಾಗವಹಿಸಿದ ಅವರು ತರುವಾಯ ರಾಗಿ ಮಾಲ್ಟ್ ಮತ್ತು ಹಾಲು ಮಕ್ಕಳೊಂದಿಗೆ ಸವಿದರು. ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಶುದ್ಧ ಕುಡಿಯುವ ನೀರು, ಸಾರಿಗೆ ಬಸ್, ಆಟದ ಮೈದಾನ, ಶೌಚಾಲಯ, ದೈಹಿಕ ಶಿಕ್ಷಕರ ನಿಯೋಜನೆ ಇತ್ಯಾದಿ ಸಮಸ್ಯೆಗಳನ್ನು ಹೇಳಿಕೊಂಡರು. ನಿಮ್ಮೆಲ್ಲಾ ಬೇಡಿಕೆಗಳನ್ನು ಕೂಡಲೇ ಇತ್ಯರ್ಥ ಮಾಡಲಾಗುವುದು ಆದರೆ ನೀವು ನನಗೆ ಉತ್ತಮ ಫಲಿತಾಂಶ ಪಡೆಯಬೇಕು ಎಂದು ಶಾಸಕರು ತಿಳಿಸಿದರು.

> ನಾವು ಸರಕಾರದಿಂದ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಶಾಲಾ ಕೊಠಡಿ, ಮಧ್ಯಾಹ್ನದ ಬಿಸಿಯೂಟ, ಸಮವಸ್ತ್ರ, ಮೊಟ್ಟೆ, ಬಾಳೆಹಣ್ಣು, ಶುದ್ಧ ಕುಡಿಯುವ ನೀರು ಎಲ್ಲವನ್ನೂ ಕೊಡುತ್ತಿದ್ದೇವೆ ಆದರೆ ಫಲಿತಾಂಶ ಮಾತ್ರ ತೀರಾ ಕಳಪೆ ಮಟ್ಟದ್ದಾಗಿದ್ದು ಅದಕ್ಕೆ ಕಾರಣ ತಿಳಿದು ಸುಧಾರಣೆ ತರುವ ನಿಟ್ಟಿನಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಶಾಲೆಗಳಿಗೆ ಭೇಟಿ ನೀಡುತ್ತಿದ್ದೇನೆ.
> –ಶರಣಗೌಡ ಕಂದಕೂರ

ಕಳೆದ ವರ್ಷದ ಎಸ್ಸೆಸ್ಸೆಲ್ಸಿಯಲ್ಲಿ ಲಿಂಗೇರಿ ಸ್ಟೇಷನ್ ಶೇ.54, ಬಳಿಚಕ್ರ ಶೇ.43, ಮಾಧ್ವಾರ ಶೇ.43, ಕೊಂಕಲ್ 28 ಫಲಿತಾಂಶ ಪಡೆದಿದೆ ಎಂದು ಮಾಹಿತಿ ಪಡೆದರು. ಶಿಕ್ಷಕರಿಗೆ ಭೋಧನೆಯೇತರ ಕೆಲಸಗಳ ಹೊರೆ ಹೆಚ್ಚಾಗುತ್ತಿದೆ ಇದಕ್ಕಾಗಿ ಮಕ್ಕಳಿಗೆ ಬೋಧನೆ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಸಿಆರ್ ಪಿ ಜಯಪಾಲರೆಡ್ಡಿ ಅವರು ತಿಳಿಸಿದರು. ಈ ವೇಳೆ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ.ಎಸ್ ಮುಧೋಳ, ಬಿಇಒ ಹವಳಪ್ಪ ಜಾನೆ, ಬಿಆರ್ ಸಿ ಮಲ್ಲಿಕಾರ್ಜುನ ಪೂಜಾರಿ, ಶಿಕ್ಷಣ ಸಂಯೋಜಕ ಕಿಶನ್ ಪವಾರ್, ಗುರುಮಠಕಲ್ ಇಒ ಅಮರೇಶ, ಶಿಕ್ಷಣ ಇಲಾಖೆ ಜಿಲ್ಲಾ ತಾಂತ್ರಿಕ ಸಹಾಯಕರಾದ ಶರಣಗೌಡ ಆಶನಾಳ ಸೇರಿದಂತೆ ಆಯಾ ಶಾಲಾ ಮುಖ್ಯಸ್ಥರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರತಿಯೊಬ್ಬರು ವಿಮೆ ಮಾಡಿಸಲು ಜಿಪಂ ಸಿಇಒ ಲವೀಶ್ ಕರೆ.

# ರಾಮಸಮುದ್ರದಲ್ಲಿ ಕಾರ್ಯಕ್ರಮಕ್ಕೆ ಚಾಲನೆ.



ಯಾದಗಿರಿ:ಜು:1–ಪ್ರತಿಯೊಬ್ಬರು ತಪ್ಪದೇ ವಿಮೆ ಮಾಡಿಸಬೇಕು. ಇದು ಸರ್ಕಾರದ ಮಹತ್ವದ ಯೋಜನೆಯಾಗಿದ್ದು, ಇಲ್ಲಿ ಅತಂತ್ಯ ಕಡಿಮೆ ಹಣದಿಂದ ವಿಮೆ ಮಾಡಿಕೊಳ್ಳಲಾಗುತ್ತದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಓರಡಿಯಾ ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ ಯಾದಗಿರಿ, ತಾಲೂಕ ಪಂಚಾಯತ ಯಾದಗಿರಿ ವತಿಯಿಂದ ಗ್ರಾಮ ಪಂಚಾಯತ ಕಾರ್ಯಾಲಯ ರಾಮಸಮುದ್ರ ಗ್ರಾಮದ ಹೊರವಲಯದಲ್ಲಿ ಮಂಗಳವಾರ ನರೇಗಾ ಯೋಜನೆಯ ಕೂಲಿಕಾರ್ಮಿಕರಿಗೆ ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯ ಸಾರ್ವಜನಿಕರಿಗೆ ಪಿಎಂಜೆಜೆವೈ, ಪಿಎಂಎಸ್ ಬಿವೈ, ಎಪಿವೈ ಮತ್ತು ಪಿಎಂಜೆಡಿವೈ ಅಡಿಯಲ್ಲಿ ವಿಮೆ ಮಾಡುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ನೀವು ಮಾಡಿಸುವ ವಿಮೆ ಮುಂದೆ ಬಹಳ ಅನುಕೂಲವಾಗಲಿದೆ. ಖಾಸಗಿ ಕಂಪನಿಗಳಲ್ಲಿ ವಿಮೆಗೆ ಹೆಚ್ಚಿಗೆ ಹಣವಿದ್ದರೇ ಈ ಸರ್ಕಾರದ ವಿವಿಧ ಯೋಜನೆಗಳಲ್ಲಿ ಅತ್ಯಂತ ಕಡಿಮೆ ಹಣದಲ್ಲಿ ವಿಮೆ ಪಾಲಿಸಿ ಮಾಡಿಕೊಳ್ಳಬಹುದು. ವಾರ್ಷಿಕ 20 ರೂ. ಇದೆ. ಕಾರಣ ಎಲ್ಲರೂ ತಪ್ಪದೇ ಮಾಡಿಸಿ ಎಂದರು.

ಇಂದು ಸೈಬರ್ ಅಪರಾಧಗಳು ಹೆಚ್ಚಾಗುತ್ತಿವೆ, ಇದರಿಂದ ಜನರು ಜಾಗೃತರಾಗಿರಬೇಕು. ಎಲ್ಲರ ಮೊಬೈಲ್ ಗಳಿಗೆ ಓಟಿಪಿ ಕೇಳಿ ಬ್ಯಾಂಕುಗಳ ಹೆಸರಲ್ಲಿ ಮೇಸೆಜ್ ಬರುತ್ತಿವೆ. ಅಂತಹಗಳನ್ನು ಓಪನ್ ಮಾಡಿ ಅದಕ್ಕೆ ಬೇಕಾದ ಮಾಹಿತಿ ನೀಡಿದರೇ ಬ್ಯಾಂಕಿನ ಖಾತೆಯಲ್ಲಿ ಇರುವ ಎಲ್ಲ ಹಣ ಕಳೆದುಕೊಳ್ಳಬೇಕಾಗುತ್ತದೆ ಎಂದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕರಾದ ಭೀಮರಾವ ಪಂಚಾಳ ಮಾತನಾಡಿ, ಕೂಲಿಕಾರ್ಮಿಕರಿಗಾಗಿ ಬ್ಯಾಂಕುಗಳಲ್ಲಿ ಸಾಕಷ್ಟು ಸಾಲದ ಸೌಲಭ್ಯವಿದೆ. ಅದನ್ನು ಪಡೆಯಬೇಕೆಂದರು.

ಕಾರ್ಯಕ್ರಮದಲ್ಲಿ ರಾಮಸಮುದ್ರ ಗ್ರಾಮ ಪಂಚಾಯತ ಅಧ್ಯಕ್ಷೆ ಆನಂದಮ್ಮ, ಮಲ್ಲಿಕಾರ್ಜುನ ಜಲ್ಲನೋರ್, ಜಿಲ್ಲಾ ಪಂಚಾಯತಿಯ ಯೋಜನೆ ನಿರ್ದೇಶಕರಾದ ಸಿ.ಬಿ ದೇವರಮನಿ, ಮುಖ್ಯ ಲೆಕ್ಕಾಧಿಕಾರಿಗಳು ವೆಂಕಟೇಶ್ ಚಟ್ನಳ್ಳಿ, ಪ್ರಾದೇಶಿಕ ವ್ಯವಸ್ಥಾಪಕರಾದ ಸಂಜಯ್ಯ ಕುಮಾರ್, ಕೆಜಿಪಿ ಪ್ರಾದೇಶಿಕ ವ್ಯವಸ್ಥಾಪಕರಾದ ಗುರುಪಾದಪ್ಪ ಕಡ್ಡಿ, ಗ್ರಾಮ ಪಂಚಾಯತ್ ಸದಸ್ಯರು, ಕೂಲಿಕಾರ್ಮಿಕರು ಇದ್ದರು.

ಸಿಇಓ ಲವೀಶ್ ಒರಡಿಯಾ ಅವರು ವಿಮೆ ಅರ್ಜಿ ವಿತರಣೆ ಮಾಡಿದರು. ಭರ್ತಿ ಮಾಡಿದ ಅರ್ಜಿಗಳನ್ನು ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸ್ವೀಕಾರ ಮಾಡಿದರು.

# 'ಜಿಲ್ಲೆಯನ್ನು ಪ್ರತಿ ಕ್ಷೇತ್ರದಲ್ಲೂ ಮುಂಚೂಣಿಗೆ ತರಲು ಪ್ರಾಮಾಣಿಕ ಪ್ರಯತ್ನ ಮಾಡಿ' ಜಿಲ್ಲಾಧಿಕಾರಿ ಡಾ.ಸುಶೀಲ.ಬಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು:1–ಪಾರದರ್ಶಕ ಹಾಗೂ ಪ್ರಾಮಾಣಿಕ ಸೇವೆ ಸಲ್ಲಿಸುವ ಮೂಲಕ ಜಿಲ್ಲೆಯನ್ನು ಪ್ರತಿಯೊಂದು ಕ್ಷೇತ್ರದಲ್ಲಿ ಮುಂಚೂಣಿಗೆ ತರಲು ಪ್ರಯತ್ನಿಸುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ .ಬಿ ಅವರು ಕಂದಾಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ಕರೆ ನೀಡಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಇಂದು ಹಮ್ಮಿಕೊಂಡಿದ್ದ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಳ್ಳೆಯ ಕೆಲಸಕ್ಕೆ ಪ್ರೋತ್ಸಾಹವಿದೆ. ಕಂದಾಯ ಇಲಾಖೆಯ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿಗಳು ಪ್ರಾಮಾಣಿಕ ಹಾಗೂ ಪಾರದರ್ಶಕ ಸೇವೆ ಕಲ್ಪಿಸಿ ಜಿಲ್ಲೆಯನ್ನು ಮುಂಚೂಣಿಗೆ ತರಲು ಪ್ರಯತ್ನಿಸುವಂತೆ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ, ಸಹಾಯಕ ಆಯುಕ್ತರ ಕಚೇರಿ, ತಹಸೀಲ್ದಾರರ ಕಚೇರಿಗಳ ವ್ಯಾಪ್ತಿಯಲ್ಲಿ ವಿವಿಧ ಫೈಲ್ ಹಾಗೂ ರಿಜಿಸ್ಟರ್ ಗಳ ಸ್ಕ್ಯಾನ್ ಮಾಡಿ ಅಪ್ಲೋಡ್ ಮಾಡುವ ಕಾರ್ಯದಲ್ಲಿ ಯಾದಗಿರಿ ತಾಲ್ಲೂಕು ಶೇ.100 ರಷ್ಟು ಪ್ರಗತಿ ಸಾಧಿಸಿದೆ. ಶಹಾಪುರ ಟಾಪ್ 10 ದಲ್ಲಿ ಸ್ಥಾನಗಳಿಸಿದೆ. ಕಳೆದ ಎರಡು ವರ್ಷಗಳಿಂದ ನಿರಂತರ ಪ್ರಯತ್ನದಿಂದ ಸಾಧನೆ ಮಾಡಲಾಗುತ್ತಿದೆ ಎಂದು ಹೇಳಿದರು.

ಕಂದಾಯ ಇಲಾಖೆಯಲ್ಲಿ ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಲೆಕ್ಕಿಗರ ಪಾತ್ರ ಅಪಾರವಾಗಿದೆ. ಪ್ರಾಥಮಿಕ ವರದಿ ಸಂಗ್ರಹಣೆ, ಕಂದಾಯ ಆಸ್ತಿ ಒತ್ತುವರಿ ಮಾಹಿತಿ ಸಂಗ್ರಹಣೆ ಸೇರಿದಂತೆ ಇನ್ನಿತರ ಕಾರ್ಯ ಮುಖ್ಯವಾಗಿದೆ. ಕಾರಣ ಇವರಿಗೆ ಇತ್ತೀಚಿನ ಬದಲಾವಣೆಗಳ ಕುರಿತು ವ್ಯಕ್ತಿತ್ವ ವಿಕಸನ, ಕ್ಷಮತೆ ಹೆಚ್ಚಳ ಕಾರ್ಯಾಗಾರಗಳನ್ನು ಆಯಾ ತಹಸೀಲ್ದಾರರು ಹಮ್ಮಿಕೊಂಡು, ತಂಡವಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಿದರು. ಮಂಗಳವಾರ ಕೇಕ್ ಕಟ್ ಮಾಡುವ ಮೂಲಕ ಕಂದಾಯ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ತಹಸೀಲ್ದಾರ ಸುರೇಶ ಅಂಕಲಗಿ, ಶಿರಸ್ತೆದಾರ ಶಬ್ಬೀರ್ ಪಟೇಲ್ ಸೇರಿದಂತೆ ಗ್ರಾಮ ಸಹಾಯಕ ಸಿಬ್ಬಂದಿಗಳ ಜೋತೆ ಇದ್ದರು.

# ಪ್ರಜಾಪ್ರಭುತ್ವದ ಆಧಾರ ಸ್ಥಂಭ ಪತ್ರಿಕಾ ರಂಗ ಬಿಇಒ ಸೋಮಶೇಖರ ಗೌಡ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ: ಜಿಲ್ಲೆಯ ಕುಕನೂರ ತಾಲೂಕಿನ ತಿಪ್ಪರಸನಾಳದಲ್ಲಿರುವ ಮುರಾರ್ಜಿ ಅಲ್ಪಸಂಖ್ಯಾತ ವಸತಿ ಕಾಲೇಜಿನಲ್ಲಿ ಕುಕನೂರು ಕಾರ್ಯನಿರತ ಪತ್ರಕರ್ತ ಧ್ವನಿ ಸಂಘದಿಂದ ಆಯೋಜನೆ ಮಾಡಲಾಗಿದ್ದ ಪತ್ರಿಕಾ ದಿನಾಚರಣೆ–ಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಾ

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಜೊತೆಗೆ ಪತ್ರಿಕಾ ರಂಗ ಇವು ನಾಲ್ಕು ಪ್ರಜಾಪ್ರಭುತ್ವದ ಆಧಾರ ಸ್ಥಂಭಗಳು. ಮುದ್ರಣ ಮತ್ತು ದೃಶ್ಯ ಮಾಧ್ಯಮ ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಉತ್ತಮ ಸಮಾಜದ ನಿರ್ಮಾದಲ್ಲಿ ತಮ್ಮದೇ ಆದ ಜವಾಬ್ದಾರಿ ನಿರ್ವಹಿಸುತ್ತಿವೆ. ಪತ್ರಿಕೆಗಳು ಮತ್ತು ಪತ್ರಕರ್ತರು ದಿನದ 24 ತಾಸು ಕಾರ್ಯಪ್ರವೃತ್ತರಾಗಿ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಪ್ರಗತಿಯಲ್ಲಿ ಪ್ರಮುಖ ಪಾತ್ರ ನಿರ್ವಹಣೆ ಮಾಡುತ್ತಿದ್ದಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ ಗೌಡ ಪಾಟೀಲ್ ಹೇಳಿದರು.

ಇತ್ತೀಚಿನ ದಿನಗಳಲ್ಲಿ ಹೆಚ್ಚು ಬಳಸಲ್ಪಡುತ್ತಿರುವ ಎ. ಐ ತಂತ್ರಜ್ಞಾನ ಬಳಕೆಯ ಮತ್ತು ಅದರ ದುಸ್ಪರಿಣಾಮಗಳ ಬಗ್ಗೆ ಯುವಜನತೆ ಎಚ್ಚರವಹಿಸಬೇಕಿದೆ ಎಂದು ಕುಕನೂರು ಠಾಣೆಯ ಪಿಎಸ್ಐ ಗುರುರಾಜ್ ಟಿ ಸಲಹೆ ನೀಡಿದರು.

ಕಾರ್ಯಕ್ರಮ ಉದ್ಘಾಟನೆ ಮಾಡಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್ ಬಿರಾದಾರ್ ಮಾತನಾಡಿ, ಸ್ವಾಸ್ಥ್ಯ ಸಮಾಜ ಕಟ್ಟುವಲ್ಲಿ ಪತ್ರಿ–ಕೆ ಮತ್ತು ಪತ್ರಕರ್ತರ ಪಾತ್ರ ದೊಡ್ಡದು. ಸದೃಢ ಸಮಾಜ ನಿರ್ಮಾಣದಲ್ಲಿ ಮಾಧ್ಯಮ ರಂಗವು ಮುಂಚೂಣಿಯಾಗಿ ಕಾರ್ಯನಿರ್ವಹಿಸುತ್ತಿದೆ. ಯುವತಿಯರು ಓದುವ ಅಭಿರುಚಿ ಬೆಳಸಿಕೊಂಡು ಸ್ಪರ್ಧಾತ್ಮಕ ಜಗತ್ತಿನಲ್ಲಿ ಹೆಚ್ಚು ಜ್ಞಾನ ಸಂಪಾದಿಸಿ ದೇಶ ಸೇವೆಯ ಕಾರ್ಯಕ್ಕೆ ಅಣಿಗೊಳ್ಳಬೇಕು ಎಂದು ಹೇಳಿದರು.

ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ನರಸಿಂಹ ಗುಂಜನಹಳ್ಳಿ ಇವರಿಂದ ಪತ್ರಿಕೋದ್ಯಮದಲ್ಲಿ ಮಹಿಳೆಯರ ಪಾತ್ರ ಮತ್ತು ಅವಕಾಶಗಳು ಕುರಿತು ಉಪನ್ಯಾಸ ನಡೆಯಿತು.

ವಿದ್ಯಾರ್ಥಿಗಳಿಗೆ ಲೇಖನಿ ನೀಡುವ ಮೂಲಕ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಕೃಷ್ಣಮೂರ್ತಿ ಗಡಾರಿ, ಜಿಲ್ಲಾಧ್ಯಕ್ಷ ಸುನಿಲಕುಮಾರ ಮಠದ, ತಾಲೂಕು ಅಧ್ಯಕ್ಷ ಚಂದ್ರು ಬಾನಾಪುರ, ತಾಲೂಕು ಪ್ರಧಾನ ಕಾರ್ಯದರ್ಶಿ ವೀರಯ್ಯ ವಿ ಹಿರೇಮಠ, ಮಹೇಶ್ ಕಲ್ಮಠ, ವೀರಯ್ಯ ಕುರ್ತುಕೋಟಿ, ಮುತ್ತಯ್ಯ ತೋಂಟದಾರ್ಯಮಠ, ಮಲ್ಲಯ್ಯ ಗದಗಿನ, ವಿಶ್ವನಾಥ್ ಪಟ್ಟಣಶೆಟ್ಟಿ, ಸೇರಿದಂತೆ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

(CITATION)

**IN THE COURT OF THE HON'BLE (Prl) J.M.F.C. AT: YADGIRI**

**Crl. Misc. No. 1497/2025**

1. MOHAMMEDALI S/o Late, ABDUL HAMEED, aged about: 41, years, Occ: Private Work, R/o: H. NO, 5-2-157, Madanpura Area Yadgir Tq: &, Dist: Yadgiri.
2. SAYIDA BEGUM W/o Late, ABDUL HAMEED, aged about: 77 years, Occ: household, R/o: H. NO, 5-2-157, Madanpura Area Yadgir Tq:&Dist: Yadgiri.
3. KHALEEL AHMED S/o Late, ABDUL HA-MEED, aged about: 55, years, Occ: Private Work, R/o: H. NO, 5-2-157, Madanpura Area Yadgir Tq: &, Dist: Yadgiri.
4. Md. SALEEM S/o Late, ABDUL HAMEED, aged about: 54, years, Occ: Private Work, R/o: H. NO, 5-2-157, Madanpura Area Yadgir Tq: &, Dist: Yadgiri.
5. MASARATH BEGUM D/o Late, ABDUL HA-MEED, (W/o IMAM KHAN) aged about: 45, years, Occ: House Hold, R/o: H. NO, 4-14-26, Near Jamiya Masjid Chattan Area Yadgir Tq: &, Dist: Yadgiri.
6. AZMATH BEGUM D/o Late, ABDUL HAMEED, (W/o MOHAMMED ZAKIR) aged about: 44, years, Occ: House Hold, R/o: H. NO, 7-920/35, Near Hajj Committee Naya Mohalla Kalaburagi Tq: &, Dist: Kalaburagi

Petitioners...

**V/s**

1. THE COMMISSIONER CMC YADGIRI
2. ALL CONCERNED

...Respondents.

Claim: Petition for a direction to record the name of petitioner's Father in the Death Register.

**PETITION UNDER SECTION 13 (3) OF R.B.D. ACT, 1969**

**To, All concerned**

Whereas, the above named petitioners have filed an application for entry of date of death of the father of petitioners no 1, & 3 to 6, and husband of petitioner No. 2, by name ABDUL HAMEED S/O MOHD. QABULA SAB, was died naturally on 29-04-1998, at, Yadgiri Tq & Dist: Yadgiri. Whereas If anybody has got any interest in the matter he/she shall appear before this Court on 28-07-2025, at 11-00 A.m., either in persons or through an advocate duly instructed enable to answer in the matter failing which the matter will be determined in merit basis.

Given under my hand and seal of the court on this the 30th day of June .2025 at: Yadgiri.

//By Order of the Court//

Chief Ministerial Officer Civil Judg & JMFC Court Yadgir.

# ಶಕ್ತಿನಗರದ ಕೆಪಿಸಿಯ ಟೇಕ್ನಿಷಿಯನ್ ಕಾಣೆ; ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಜುಲೈ 01–ತಾಲೂಕಿನ ಶಕ್ತಿನಗರ ಪೊಲೀಸ ಠಾಣೆಯ ವ್ಯಾಪ್ತಿಯ ಪಾರ್ವತಿ ನಗರದ ನಿವಾಸಿ ಜಮಶೇರ್ ಅಲಿ ತಂದೆ ಅಕ್ಬರ್ ಸಾಬ್ (35) ಎಂಬ ಯುವಕ ಜೂನ್ 20ರಂದು ಕೆಪಿಸಿ ಕಾಲೋನಿಯಲ್ಲಿರುವ ತನ್ನ ತಾಯಿಯನ್ನು ಮಾತನಾಡಿಸಿಕೊಂಡು, ಮನೆಗೆ ನೀರು ತರುದಾಗಿ ಹೇಳಿ ಹೋದವರು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಶಕ್ತಿನಗರ ಠಾಣೆಯಲ್ಲಿ ಗುನ್ನೆ ಸಂಖ್ಯೆ:38/2025 ಕಲಂರಡಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯು ಶಕ್ತಿನಗರದ ಕೆಪಿಸಿಯಲ್ಲಿ ಟೇಕ್ನಿಷಿಯನ್ ಆಗಿ ಕಾರ್ಯನಿ ವರ್ಹಿಸುತ್ತಿದ್ದೇನೆ. ಕಾಣೆಯಾದ ವ್ಯಕ್ತಿಯ ಚಹರೆ: 35 ವರ್ಷ, 5.8ಫೀಟ್ ಎತ್ತರ, ಕೆಂಪು ಬಣ್ಣದ ಟೀ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದು, ಹಿಂದಿ, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾನೆ.

ಈ ವ್ಯಕ್ತಿಯ ಬಗ್ಗೆ ಯಾವುದೇ ಮಾಹಿತಿ ಲಭ್ಯವಾದಲ್ಲಿ ಶಕ್ತಿನಗರ ಪೊಲೀಸ್ ಠಾಣೆ ಪಿಎಸ್ಐ ಮೊಬೈಲ್ ಸಂಖ್ಯೆ: 9480803868, ಸಿಪಿಐ ಗ್ರಾಮೀಣ ವೃತ್ತ ಮೊಬೈಲ್ ಸಂ–ಖ್ಯೆ: 9480803832, ಡಿಎಸ್ಪಿ ಮೊಬೈಲ್ ಸಂಖ್ಯೆ:9480803820, ರಾಯಚೂರು ಕಂಟ್ರೋಲ್ ರೂಮ್ ಸಂಖ್ಯೆ: 08532–235635ಗೆ ಸಂಪರ್ಕಿಸುವಂತೆ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ದಾಖಲಾಗಿದ್ದ ಬಾಲಕ ಕಾಣೆ;ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 01–ಗರದ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಿನಾಂಕ:17.06.2025 ರಂದು ರಿಮ್ಸ್ ಆಸ್ಪತ್ರೆಯ 5 ನೇ ಮಹಡಿಯ ರೂಮ್ ನಂ–503ರ ಜನರಲ್ ವಾರ್ಡ್ನಲ್ಲಿ ಚಿಕಿತ್ಸೆಗಾಗಿ ವಿಷ್ಣು ನಾಯ್ಕ ತಂದೆ ನರಸಿಂಹ ನಾಯ್ಕ (09) ಎಂಬ ಬಾಲಕನ್ನು ದಾಖಲು ಮಾಡಿದ ಯುವಕ ಕಾಣೆಯಾಗಿದ್ದು, ಈ ಕುರಿತು ಠಾಣೆಯಲ್ಲಿ ಗುನ್ನೆ ಸಂಖ್ಯೆ: 66/2025 ಕಲಂ 137 (2) ಬಿಎನ್ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಜೂನ್ 21ರ ರಾತ್ರಿ ಮಂಚದ ಮೇಲೆ ಮಲಗಿಕೊಂಡಾಗ ಜೂನ್ 22ರ ಬೆಳಗಿನ ಜಾವ 03ಗಂಟೆಗೆ ಎದ್ದು ನೋಡಿದಾಗ ವಿಷ್ಣು ನಾಯ್ಕ ಕಾಣಲಿಲ್ಲ, ಗಾಬರಿಯಾಗಿ ಆಸ್ಪತ್ರೆಯ ತುಂಬಾ ಎಲ್ಲಾ ಕಡೆ ಹುಡುಕಾಡಲಾಗಿ ತನ್ನ ಮಗನ ಸುಳಿವು ಸಿಗಲಿಲ್ಲ. ತನ್ನ ಮಗನನ್ನು ಯಾರೋ ಅಪರಿಚಿತರು ಯಾವುದೋ ಕಾರಣಕ್ಕಾಗಿ ಅಪಹರಣ ಮಾಡಿಕೊಂಡು ಹೋಗಿರುವ ಸಾದ್ಯತೆ ಇರುತ್ತದೆ ಎಂದು ತಾಯಿ ನಾಗಲಕ್ಷ್ಮೀ ಅವರು ದೂರಿನ ಸಾರಾಂಶದಲ್ಲಿ ವಿವರಿಸಿದ್ದಾರೆ.

ಬಾಲಕನ ಚಹರೆ ಪಟ್ಟಿ: 4 ಫೀಟ 2 ಇಂಚು ಎತ್ತರ, ಸಾದಾ ಕಪ್ಪು ಮೈ ಬಣ್ಣ, ಕೋಲು ಮುಖ, ತೆಳ್ಳನೆಯ ಮೈಕಟ್ಟು, ತಲೆಯಲ್ಲಿ ಕಪ್ಪು ಕೂದಲು, ಬಿಳಿ ಬಣ್ಣದ ಶರ್ಟ, ಬಿಳಿ ಬಣ್ಣದ ಪ್ಯಾಂಟ್ ಧರಿಸಿದ್ದು, ಎಡ ಕೈ ಮಣಿಕಟ್ಟು ಮತ್ತು ಬಲಗೈ ಮುಂದಿನ ಮೂರು ಬೆರಳುಗಳಿಗೆ ಸುಟ್ಟಿದ್ದರಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಕಾಲಕ್ಕೆ ಸುತ್ತಿದ್ದ ಸರ್ಜಿಕಲ್ ಕ್ಲಾಥ್ (ಬ್ಯಾಂಡೇಜ್) ಹಾಗೇ ಇರುತ್ತದೆ.

ಈ ಬಾಲಕನ ಬಗ್ಗೆ ಯಾವುದೇ ಮಾಹಿತಿ ಲಭ್ಯವಾದಲ್ಲಿ ಪಿ.ಎಸ್.ಐ ಮಾರ್ಕೆಟ್ ಯಾರ್ಡ ಠಾಣೆ ದೂರವಾಣಿ ಸಂಖ್ಯೆ: 08532–235600, ಪಿಎಸ್ಐ ಮೊಬೈಲ್ ಸಂಖ್ಯೆ: 9480803849, ಸಿಪಿಐ ಪಶ್ಚಿಮ ವೃತ್ತ ದೂರವಾಣಿ ಸಂಖ್ಯೆ: 08532–226856, ಮೊಬೈಲ್ ಸಂಖ್ಯೆ:9480803831ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ: ಜಿಲ್ಲೆಯಲ್ಲಿ ನೋಂದಣಿಯಾಗಿ ಚಾಲನೆಯಲ್ಲಿರದ ರಾಜಕೀಯ ಪಕ್ಷದ ವಿಚಾರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಬಳ್ಳಾರಿಜಿಲ್ಲೆಯಲ್ಲಿ ನೋಂದಣಿಯಾಗಿಚಾಲನೆಯಲ್ಲಿರದ ರಾಜಕೀಯ ಪಕ್ಷದ ವಿಚಾರಣೆ ನಡೆಸಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲೆಯಲ್ಲಿ ನೋಂದಾಯಿತ, ಮಾನ್ಯತೆ ಪಡೆಯದ ರಾಜಕೀಯ ಪಕ್ಷವಾದ 'ಜನ ಸ್ವರಾಜ್ಯ ಪಾರ್ಟಿ'ಯ ಅಧಿಕೃತ ಪ್ರತಿನಿಧಿಯು ಇಚ್ಛಿಸಿದಲ್ಲಿ ಮುಖ್ಯಚುನಾವಣಾಧಿಕಾರಿಗಳು, ಕರ್ನಾಟಕ, ಬೆಂಗಳೂರು ಇವರಿಗೆ 2025ರ ಜುಲೈ 18 ರೊಳಗಾಗಿ ತಮ್ಮ ಲಿಖಿತ ಮನವಿಯನ್ನುಸಲ್ಲಿಸಬಹುದು.

ಪಕ್ಷದಪರವಾಗಿಮನವಿಯನ್ನು ಸಲ್ಲಿಸುವವರು ಪಕ್ಷದ ಅಧ್ಯಕ್ಷರು/ ಪ್ರಧಾನ ಕಾರ್ಯದರ್ಶಿಗಳ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳೊಂದಿಗೆ ಮನವಿಯನ್ನುಸಲ್ಲಿಸಬೇಕು.

ಈ ರಾಜಕೀಯ ಪಕ್ಷದ ವಿಚಾರಣೆಯನ್ನುಜುಲೈ18ರಂದು ನಿಗದಿಪಡಿಸಲಾಗಿದ್ದು,ವಿಚಾರಣೆಗೆ ಪಕ್ಷದಮುಖ್ಯಸ್ಥರು/ಅಧ್ಯಕ್ಷರು/ ಪ್ರಧಾನ ಕಾರ್ಯದರ್ಶಿಗಳು ಕಡ್ಡಾಯವಾಗಿ ಹಾಜರಿರಬೇಕು.

ಒಂದು ವೇಳೆ ನಿಗದಿತ ಸಮಯದೊಳಗೆ ಪಕ್ಷದಿಂದ ಯಾವುದೇ ಲಿಖಿತ ಮನವಿ ಸ್ವೀಕೃತವಾಗದೇ ಇದ್ದಲ್ಲಿ ಪಕ್ಷದ ಯಾವುದೇ ಹೇಳಿಕೆ ಇರುವುದಿಲ್ಲವೆಂದು ಪರಿಗಣಿಸಿ, ಪಕ್ಷವನ್ನು ಸಂಪರ್ಕಿಸದೇ ಚುನಾವಣಾ ಆಯೋಗದಿಂದ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದುಎಂದುಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 88ನೇಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಚರಿತ್ರೆ ಸೃಷ್ಟಿಸಲಿದೆ: ಜಿಲ್ಲಾ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಬಳ್ಳಾರಿಯಲ್ಲಿ ಜರುಗಲಿರುವ 88 ನೇಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಹೊಣೆಗಾರಿಕೆನಮಗೆ ದೊರೆತಿರುವುದು ಅದೃಷ್ಟವಾಗಿದ್ದು, ಇದನ್ನುಚಾರಿತ್ರಿಕವಾಗಿಸಲು ಕನ್ನಡ ಸಾಹಿತ್ಯಪರಿಷತ್ತಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಹೇಳಿದರು.

ಮಂಗಳವಾರದಂದು,ಬೆಂಗಳೂರಿನ ಕೇಂದ್ರ ಕನ್ನಡ ಸಾಹಿತ್ಯಪರಿಷತ್ತಿನ ಕಚೇರಿಯಲ್ಲಿ ಏರ್ಪಡಿಸಿದ್ದ 88 ನೇಯ ಅಖಿಲ ಭಾರತ ಕನ್ನಡ ಸಾಹಿತ್ಯಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡಿಗರ ಹೆಮ್ಮೆಯ ಉತ್ಸವವನ್ನು ಚಾರಿತ್ರಿಕವಾಗಿ ನಡೆಸಲು ಎಲ್ಲಾ ರೀತಿಯಸಹಕಾರನೀಡಲಾಗುವುದು. ಇದಕ್ಕೆಜಿಲ್ಲಾಡಳಿತವು ಸಂಪೂರ್ಣ ಸಜ್ಜುಗೊಳಿಸಿ ಸರ್ಕಾರದಿಂದ ಬೇಕಾದ ಎಲ್ಲಾ ಸೌಲಭ್ಯ, ನೆರವು ದೊರಕಿಸಿ ಕೊಡಲಾಗುವುದು. ಮುಂದಿನ ದಿನಗಳಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಸರ್ಕಾರ ಇನ್ನಷ್ಟು ನಿಕಟವಾಗಿ ಕೆಲಸ ಮಾಡಲಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿ ಅವರು ಮಾತನಾಡಿ, ಇಲ್ಲಿಯವರೆಗೆ ಅವಿಭಜಿತ ಬಳ್ಳಾರಿ ಜಿಲ್ಲೆಯಲ್ಲಿ ಐದು ಸಮ್ಮೇಳನಗಳು ನಡೆದಿದ್ದು, ಇದು ಆರನೆಯದು ಮತ್ತು ಸ್ವಾತಂತ್ರ ನಂತರ ಎರಡನೆಯದಾಗಿದೆ. 68 ವರ್ಷಗಳ ನಂತರ ಬಳ್ಳಾರಿಯಲ್ಲಿ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯಸಮ್ಮೇಳನ ನಡೆಯುತ್ತಿದೆ ಎಂದು ವಿವರಿಸಿದರು.

ಈಗಾಗಲೇ ಬಳ್ಳಾರಿಯಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಸಭೆಯಲ್ಲಿ 88 ನೇಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಬೂಕರ್ ಪುರಸ್ಕಾರದ ಮೂಲಕ ಜಾಗತಿಕ ಮನ್ನಣೆ ಪಡೆದಿರುವ ಬಾನು ಮುಷ್ತಾಕ್ ಅವರನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಇದಕ್ಕೆಸಚಿವಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಪ್ರತಿಕ್ರಿಯಿಸಿ, ಈ ಆಯ್ಕೆಯನ್ನುಮುಕ್ತಕಂಠದಿಂದ ಶ್ಲಾಘಿಸಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಲಿರುವ ಐದನೇಯ ಮಹಿಳೆ ಮತ್ತು ಮೊದಲ ಅಲ್ಪಸಂಖ್ಯಾತ ಮಹಿಳೆ ಆಗಲಿದ್ದಾರೆ ಎಂಬ ಸಂಗತಿ ಸಂತೋಷ ತರುವಂತಹದ್ದಾಗಿದೆ. ಹೆಚ್ಚಿನದಾಗಿ ಬಳ್ಳಾರಿಯಲ್ಲಿ ಸಮ್ಮೇಳನ ನಡೆಸುವ ಅವಕಾಶ ಸಿಕ್ಕಿರುವುದು ನನ್ನ ಅದೃಷ್ಟ ಎಂದು ಬಣ್ಣಿಸಿದರು.

ಬಳಿಕ ಕನ್ನಡ ಸಾಹಿತ್ಯ ಪರಿಷತ್ತಿನ ಇತಿಹಾಸ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳ ಇತಿಹಾಸ ವಿವರಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿ ಅವರು, ಸಮ್ಮೇಳನಗಳಿರುವ ಚಾರಿತ್ರಿಕ ಪರಂಪರೆಗೆ ಒತ್ತು ನೀಡಬೇಕಿದೆ ಎಂದರು.


ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, 88 ನೇಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಬಳ್ಳಾರಿಯಲ್ಲಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದ್ದು, ಇದಕ್ಕೆ ಜಿಲ್ಲಾಡಳಿತ ಸಂಪೂರ್ಣ ಸಹಕಾರ ನೀಡಿ ಯಶಸ್ವಿಗೊಳಿಸಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ 2012ರಲ್ಲಿಯೇ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರಾಗಿದ್ದ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರಿಗೆ ಸಾಂಕೇತಿಕವಾಗಿ ವಿಶೇಷ ಗುರುತಿನ ಚೀಟಿ ನೀಡಲಾಯಿತು.

ಬಳಿಕ ಸಚಿವರು ಮತ್ತು ಬಳ್ಳಾರಿ ಜಿಲ್ಲಾಡಳಿತದ ಅಧಿಕಾರಿಗಳು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಹೊರ ಮತ್ತು ಒಳ ಆವರಣ ವೀಕ್ಷಿಸಿ ಪರಂಪರೆ ಮತ್ತು ಆಧುನಿಕತೆ ಬೆಸೆದಿರುವ ಬಗ್ಗೆ ತಮ್ಮ ಮೆಚ್ಚುಗೆ ವ್ಯಕ್ತಪಡಿಸಿದರು.

ಸಭೆಯಲ್ಲಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಬಿ.ಎಂ. ಪಟೇಲ್ ಪಾಂಡು,ಮಾಧ್ಯಮ ಸಂಚಾಲಕರಾದ ಎನ್.ಎಸ್.ಶ್ರೀಧರಮೂರ್ತಿ,ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ.,ಸಚಿವರ ಆಪ್ತ ಕಾರ್ಯದರ್ಶಿ ಹಾಗೂ ಸಿಬ್ಬಂದಿ ಇದ್ದರು.

## ಇಟಗಿ ಗ್ರಾಮ ಪಂಚಾಯತಿಗೆ ಜಿಲ್ಲಾ ಪಂಚಾಯತ ಸಿಇಓ ವರ್ಣಿತ ನೇಗಿ ಭೇಟಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮುಖ್ಯ ಕಾರ್ಯನಿರ್ವಾಹಕಅಧಿಕಾರಿಗಳು ಜಿಲ್ಲಾ ಪಂಚಾಯತ್ ಕೊಪ್ಪಳ ರವರು ಕುಕನೂರ ತಾಲೂಕಿನ ಇಟಗಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ,ಗ್ರಾಮ ಪಂಚಾಯತಿ ಜನಪ್ರತಿನಿಧಿಗಳೊಂದಿಗೆ ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಖಕಂಂಕ ಸಮಗ್ರಸಹಭಾಗಿತ್ವದ ಯೋಜನೆಯನ್ನುಶೀರ್ಘವಾಗಿ ಮುಕ್ತಾಯ ಮಾಡಿದಲ್ಲಿ ಕೇಂದ್ರ ಸರ್ಕಾರದಿಂದ ಅನುದಾನ ಶೀರ್ಘವಾಗಿ ಬರುತ್ತದೆ.

ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಸ್ವಚ್ಛ ವಾಹಿನಿ ಡ್ರೈವರ್ ಗಳು ಮಹಿಳೆಯರೆ ಆಗಿರುವಂತೆ ಆದೇಶ ಇದೆ ಅದರಂತೆ ಮಹಿಳಾ ಡ್ರೈವರ್ ನಿಯೋಜನೆ ಮಾಡಬೇಕು.

ಕುಡಿಯುವ ನೀರು ಸರಬರಾಜು ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು, ಅದಕ್ಕೆ ಜನ ಪ್ರತಿನಿಧಿಗಳು ಪೈಪ್ ಲೈನ್ ಸಮಸ್ಯೆ, ಎಎಒ ನಲ್ಲಿಯ ಮೂಲಕ ಪ್ರತಿ ಮನೆಗೂ ನೀರು ಸರಬರಾಜು ಆಗಬೇಕು ಎಂದರು. ವಸತಿ ರಹಿತ ಕುಟುಂಬಗಳಿಗೆ ಶ್ಯಾಶ್ವತ ಸೂರು ಕಲ್ಪಿಸಲು ವಸತಿ ರಹಿತ ಕುಟುಂಬಗಳ ಮಾಹಿತಿಯನ್ನು ಖಉಖಉೂಅಐ ಸೈಟ್ ನಲ್ಲಿ ಮಾಹಿತಿ ಕೇಂದ್ರೀಕರಿಸಿ ನಂತರ ಗ್ರಾಮ ಪಂಚಾಯತ ಲೈಬ್ರರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಹಿಂದುಳಿದ ವರ್ಗದ ವಸತಿ ನಿಲಯಕ್ಕೆ ಭೇಟಿ ನೀಡಿದರು.

ಸ್ಥಳದಲ್ಲಿ ಮಾನ್ಯ ಸಹಾಯಕ ನಿರ್ದೇಶಕರಾದ ಶರಣಪ್ಪ ಕೆಳಗಿನಮನಿ ,ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ, ಗ್ರಾಮ ಪಂಚಾಯತ ಸದಸ್ಯರು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಸಂಚಾರಿ ಜಾಗೃತಿ ವಾಹನಕ್ಕೆ ಎಸ್‌ಪಿ ಡಾ.ಶೋಭಾರಾಣಿ.ವಿ.ಜೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಜಿಲ್ಲಾ ಪೊಲೀಸ್ ಮತ್ತು ಮಿನೆರಾ ಸ್ಟೀಲ್ ಆಂಡ್ ಪವರ್ ಪ್ರೈವೇಟ್ ಲಿಮಿಟೆಡ್ ಇವರ ಸಹಯೋಗದೊಂದಿಗೆ ಸಿಎಸ್‌ಆರ್ ಯೋಜನೆಯಡಿ ಜಿಲ್ಲೆಯಾದ್ಯಂತ ಜನಸಂದಣಿ ಇರುವ ಸ್ಥಳಗಳಲ್ಲಿ ಸಂಚರಿಸಿ ಅಪರಾಧಗಳಬಗ್ಗೆ ಸಾರ್ವಜನಿಕರಲ್ಲಿ ಸುರಕ್ಷತಾ ಕ್ರಮಗಳ ಕುರಿತು ಜಾಗೃತಿ ಮೂಡಿಸುವ ಸಂಚಾರಿ ಜಾಗೃತಿ ವಾಹನಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಜಿಲ್ಲಾ ಪೊಲೀಸ್ ಕಚೇರಿ ಆವರಣದಲ್ಲಿ ಸೋಮವಾರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಅಪರಾಧಗಳ ನಿಯಂತ್ರಣ ಮತ್ತು ಮಹಿಳಾ ಹಾಗೂ ಮಕ್ಕಳ, ಹಿರಿಯ ನಾಗರಿಕರ ಸುರಕ್ಷತೆ, ರಸ್ತೆಸುರಕ್ಷತೆ, ಸ್ವತ್ತಿನ ಅಪರಾಧಗಳ ನಿಯಂತ್ರಣ, ಮಾದಕ ದ್ರವ್ಯ ಸೇವನೆ ದುಷ್ಪರಿಣಾಮ, ಸೈಬರ್ ವಂಚನೆ, ಜಾತಿ ನಿಂದನೆ ಸೇರಿದಂತೆ ಮುಂತಾದ ಅಪರಾಧಗಳ ಬಗ್ಗೆ ಸಾರ್ವಜನಿಕರಲ್ಲಿ ಸುರಕ್ಷತಾ ಕ್ರಮಗಳ ಕುರಿತು ಸಂಚಾರಿ ಜಾಗೃತಿ ವಾಹನವು ಜಾಗೃತಿ ಮೂಡಿಸಲಿದೆ ಎಂದರು.

ಇದೇ ವೇಳೆ ವಾಹನ ಸವಾರರ ಸುರಕ್ಷತೆಗಾಗಿ ಪೊಲೀಸ್ ಸಿಬ್ಬಂದಿಯವರಿಗೆ ಉಚಿತ ಹೆಲ್ಮೆಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರವಿಕುಮಾರ್, ನವೀನ್ ಕುಮಾರ್, ಮಿನೆರಾ ಸ್ಟೀಲ್ಸ್ ಅಂಡ್ ಪವರ್ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ಟಿ.ಹನುಮಂತರೆಡ್ಡಿ ಸೇರಿದಂತೆ ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಕುರೇಕುಪ್ಪ ಪುರಸಭೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಕುರೇಕುಪ್ಪ ಪುರಸಭೆ ಕಾರ್ಯಾಲಯ ವತಿಯಿಂದ 2025–26 ನೇ ಸಾಲಿನ ಎಸ್‌ಎಫ್‌ಸಿ ಅನುದಾನದ ಮುಕ್ತ ನಿಧಿ ಯೋಜನೆಯಡಿ ಶೇ.24.10 ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಬ್ಯಾಂಕ್‌ನಿಂದ ಪಡೆಯುವ ಸಾಲಕ್ಕೆ ಬ್ಯಾಕ್ ಎಂಡ್ ಸಬ್ಸಿಡಿ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಜುಲೈ 07 ರ ವರೆಗೆ ವಿಸ್ತರಿಸಲಾಗಿದೆ.

ಸೂಚನೆ: ಅನುದಾನ ಅಗತ್ಯ ಅನುಗುಣವಾಗಿ ಸಹಾಯಧನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಪುರಸಭೆಯ ಮುಖ್ಯಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಬಕೊವಿ ಜಿಲ್ಲಾ ಹಾಲು ಉತ್ಪಾದಕರ ಸಂಘದ ಆಡಳಿತ
## ಮಂಡಳಿಯ ನಿರ್ದೇಶಕರ ಚುನಾವಣೆಗೆ ಇಬ್ಬರು ನಾಮಪತ್ರ ಸಲ್ಲಿಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಗೆ ನಾಮಪತ್ರ ಸಲ್ಲಿಕೆಯ ಎರಡನೇಯ ದಿನವಾದ ಮಂಗಳವಾರದಂದು ಎರಡು ನಾಮಪತ್ರ ಸಲ್ಲಿಕೆಯಾಗಿವೆ.

ವಿಜಯನಗರ ಜಿಲ್ಲೆಯ ಜಿ.ನಾಗಮಣಿ ಅವರು ಎರಡು ಉಮೇದುವಾರಿಕೆ ಸಲ್ಲಿಸಿದ್ದಾರೆ.

ನಾಮಪತ್ರ ಸಲ್ಲಿಸಲು ಜುಲೈ 02 ಕೊನೆಯ ದಿನವಾಗಿದೆ. ಜುಲೈ 03 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅದೇ ದಿನ ಕ್ರಮಬದ್ಧ ನಾಮಪತ್ರಗಳ ಘೋಷಣೆ ಮಾಡಲಾಗುತ್ತದೆ.

ನಾಮಪತ್ರಗಳನ್ನುಹಿಂಪಡೆಯಲು ಜುಲೈ 04 ಕೊನೆಯ ದಿನವಾಗಿದೆ. ಜುಲೈ 10 ರಂದು ಮತದಾನ ನಡೆಯಲಿದೆ. ಅದೇ ದಿನ ಫಲಿತಾಂಶ ಪ್ರಕಟವಾಗಲಿದೆ ಎಂದು ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಚುನಾವಣಾಧಿಕಾರಿಯೂ ಆದ ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ತಿಳಿಸಿದ್ದಾರೆ.

## ಎರಡನೇ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಕೆ.ಎಚ್.ಮೌನಿಕ ಗೆ ಬಹುಮಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಗೋಜಿ–ರಿಯೋ ಕರಾಟೆ ಡು ಕೆನ್ರೋ ಖಾನ್ ಕರಾಟೆ ಸಂಸ್ಥೆಯಿಂದ ಹುಬ್ಬಳ್ಳಿ ತಾಲ್ಲೂಕಿನ ಗುಂಚಿ ಗ್ರಾಮದ ಬಸವೇಶ್ವರ ಭವನದಲ್ಲಿ ಇತ್ತೀಚಿಗೆ ನಡೆದ ಎರಡನೇ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ನಗರದ ಸರ್ಕಾರಿ ಆದರ್ಶ ವಿದ್ಯಾಲಯದ 6ನೇ ತರಗತಿಯ ವಿದ್ಯಾರ್ಥಿನಿಯಾದ ಕೆ.ಎಚ್.ಮೌನಿಕ ಗೆ ಬಹುಮಾನ ಲಭಿಸಿದೆ.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಮತ್ತು ಶಾಲಾ ಮುಖ್ಯ ಗುರುಗಳು, ಶಾಲಾ ಶಿಕ್ಷಕರು ಹಾಗೂ ಸಿಬ್ಬಂದಿ ಶುಭ ಹಾರೈಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಕರಾಟೆ ಕಟಾಸ ಸ್ಪರ್ಧೆಯಲ್ಲಿ ಜಯಶ್ರೀ.ಕೆ ಗೆಲುವು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ನಗರದ ಸರ್ಕಾರಿ ಆದರ್ಶ ವಿದ್ಯಾಲಯದ 6ನೇ ತರಗತಿಯ ವಿದ್ಯಾರ್ಥಿನಿ ಜಯಶ್ರೀ.ಕೆ ಅವರು, ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಟ್ರೆಡಿಷನಲ್ ಶೋಟೊಕಾನ್ ಕರಾಟೆ ಅಕಾಡೆಮಿ ಮತ್ತು ಕರ್ನಾಟಕ ದಿ ಗ್ಲೋಬಲ್ ಅಕಾಡೆಮಿಯ ಕರಾಟೆ ಕಟಾಸ ಸ್ಪರ್ಧೆಯಲ್ಲಿ ಭಾಗವಹಿಸಿ "ದಿ ಗ್ಲೋಬಲ್ ವರ್ಲ್ಡ್ ರೆಕಾರ್ಡ್" ಗೆಲುವು ಸಾಧಿಸಿದ್ದಾಳೆ.

ಗ್ಲೋಬಲ್ ವರ್ಲ್ಡ್ ರೆಕಾರ್ಡ್‌ನ ಅಧ್ಯಕ್ಷ ಶಾಂತ.ಎಸ್, ಡಬ್ಲ್ಯೂ ಎಸ್.ಎಸ್ ಸ್ಪೋರ್ಟ್ಸ್ ಅಂಡ್ ಎಂಟರ್ಟೈನ್ಮೆಂಟ್ ಪ್ರೈ.ಲಿ ನ ನಿರ್ದೇಶಕ ಎಂ.ವಲ್ಲಿ ಮತ್ತು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಮತ್ತು ಶಾಲಾ ಮುಖ್ಯ ಗುರುಗಳು, ಶಾಲಾ ಶಿಕ್ಷಕರು ಹಾಗೂ ಸಿಬ್ಬಂದಿ ಶುಭ ಹಾರೈಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## 124ನೇ ನೀರಾವರಿ ಸಲಹಾ ಸಮಿತಿ ಸಭೆ: ನೀರಿನ ಪ್ರಮಾಣ ಅಂದಾಜಿಸಿ ವಿವಿಧ ಕಾಲುವೆಗಳಿಗೆ ನೀರು ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.01–ಪ್ರಸ್ತಕ ಸಾಲಿನ 124ನೇ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಿದಂತೆ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ಮುಂಗಾರು ಹಂಗಾಮಿಗೆ ಜಲಾಶಯದಲ್ಲಿ ಲಭ್ಯವಾಗಬಹುದಾದ ನೀರಿನ ಪ್ರಮಾಣ ಅಂದಾಜಿಸಿ ವಿವಿಧ ಕಾಲುವೆಗಳಿಗೆ ನೀರು ಹರಿಸಲಾಗುವುದು ಕರ್ನಾಟಕ ನೀರಾವರಿ ನಿಗಮ ನಿಯಮಿತ ತುಂಗಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರಾದ ಎಲ್.ಬಸವರಾಜ ಅವರು ತಿಳಿಸಿದ್ದಾರೆ.

**ನೀರು ಒದಗಿಸುವ ಕಾಲಾವಧಿ:**

**ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ:**

ಜುಲೈ 02 ರಿಂದ 15 ರವರೆಗೆ ಸರಾಸರಿ 2000 ಕ್ಯೂಸೆಕ್ ನಂತೆ, ಜುಲೈ 16 ರಿಂದ 31 ರವರೆಗೆ 3000 ಕ್ಯೂಸೆಕ್ ನಂತೆ ಮತ್ತು ಆಗಸ್ಟ್ 01 ರಿಂದ 30 ರವರೆಗೆ 4100 ಕ್ಯೂಸೆಕ್ ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆ ಇರುವವರೆಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

**ತುಂಗಭದ್ರಾ ಬಲದಂಡೆ ಮೇಲ್ಮಟ್ಟದ ಕಾಲುವೆ:**

ಜುಲೈ 10 ರಿಂದ 31 ರವರೆಗೆ ಸರಾಸರಿ 700 ಕ್ಯೂಸೆಕ್ ನಂತೆ ಮತ್ತು ಆಗಸ್ಟ್ 01 ರಿಂದ 30 ರ ವರೆಗೆ 1300 ಕ್ಯೂಸೆಕ್ ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆ ಇರುವವರೆಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

**ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆ:**

ಜುಲೈ 10 ರಿಂದ 31 ರವರೆಗೆ ಸರಾಸರಿ 500 ಕ್ಯೂಸೆಕ್ ನಂತೆ ಮತ್ತು ಆಗಸ್ಟ್ 01 ರಿಂದ ನವೆಂಬರ್ 30 ರ ವರೆಗೆ 650 ಕ್ಯೂಸೆಕ್ ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆ ಇರುವವರೆಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

**ರಾಯ ಬಸವಣ್ಣ ಕಾಲುವೆ:**

ಈಗಾಗಲೇ ಹರಿಸಲಾಗಿದ್ದು, ನವೆಂಬರ್ 30 ರವರೆಗೆ ಸರಾಸರಿ 220 ಕ್ಯೂಸೆಕ್ ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆ ಇರುವವರೆಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

**ತುಂಗಭದ್ರಾ ಎಡದಂಡೆ ಮೇಲ್ಮಟ್ಟದ ಕಾಲುವೆ:**

ಜುಲೈ 01 ರಿಂದ 25 ಕ್ಯೂಸೆಕ್ ನಂತೆ ಅಥವಾ ಜಲಾಶಯದ ನೀರಿನ ಮಟ್ಟ 1585 ಅಡಿಗಳವರೆಗೆ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

**ನದಿಗೆ ಪೂರಕ:** ಸುಮಾರು 150 ಕ್ಯೂಸೆಕ್ ನಂತೆ ನದಿ ಪೂರಕ ಕಾರ್ಖಾನೆ ಒಳಗೊಂಡಂತೆ ನೀರು ಹರಿಸಲಾಗುವುದು.

ಪ್ರಸಕ್ತ ಸಾಲಿನ 223ನೇ ತುಂಗಭದ್ರಾ ಮಂಡಳಿ ಸಭೆಯಲ್ಲಿ ಜಲಾಶ ಯದಲ್ಲಿ 80 ಟಿ.ಎಂ.ಸಿ ಯಷ್ಟು ನೀರನ್ನು ಮಾತ್ರ ಸಂಗ್ರಹಣೆ ಮಾಡಲು ನಿರ್ಧರಿಸಿರುವುದರಿಂದ ಹಾಗೂ ಪ್ರಸ್ತುತ ತುಂಗಭದ್ರಾ ಜಲಾಶಯಕ್ಕೆ ಮುಂಬರುವ ದಿನಗಳಲ್ಲಿ ಹರಿದು ಬರುವ ಒಳಹರಿವಿನ ಪ್ರಮಾಣದ ಮೇಲೆ ಆವಲಂಬಿತವಾಗಿದ್ದು, ಮುಂದೆ ಒಳ ಹರಿವಿನ ಪ್ರಮಾಣದಲ್ಲಿ ಕೊರತೆಉಂಟಾದಲ್ಲಿ ಪರಿಷ್ಕೃತವಾಗಿ ಪ್ರಕಟಣೆ ಹೊರಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

**ರೈತ ಭಾಂದವರಲ್ಲಿ ಮನವಿ:**

ತುಂಗಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಮಿತವ್ಯಯವಾಗಿ ಬಳಸಿ ಅಧಿಕೃತ ಅಚ್ಚುಕಟ್ಟು ಪ್ರದೇಶದಲ್ಲಿ ನಿಗಧಿತ ಬೆಳೆಗಳನ್ನು ಮಾತ್ರ ಬೆಳೆಯಬೇಕು. ಸಮರ್ಪಕ ನೀರು ನಿರ್ವಹಣೆಗೆ ಇಲಾಖೆಯೊಡನೆ ಸಹಕರಿಸಬೇಕು. ರೈತರು ಅನಧಿಕೃತವಾಗಿ ನೀರು ಪಡೆದು ಭತ್ತ ಮತ್ತು ಇತರೆ ಬೆಳೆಗಳನ್ನು ಬೆಳೆದಲ್ಲಿ ನೀರಾವರಿ ಕಾಯ್ದೆಯನ್ವಯ ಕಾನೂನು ಕ್ರಮ ಜರುಗಿ ಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.06 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಜು.01–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಬ್ಯಾಂಕ್–1, 2 ರ ಫೀಡರ್‌ಗಳಾದ ಎಫ್–34 ಹಾಗು ಎಫ್–72 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜು.06 ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ನಗರದ ಮೊದಲನೇ ರೈಲ್ವೇ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟ್ರೀಟ್, ನಂದಿ ಕಾಲೋನಿ, ಸೂರ್ಯ ಕಾಲೋನಿ, ರೆಹಮಬಾದ್ ಲೇಔಟ್, ವಡ್ಡೆ ನಾಗಪ್ಪ ಕಾಲೋನಿ, ಎಚ್. ಆರ್.ಜಿ. ಕಾಲೋನಿ, ತಿಲಕ್ ನಗರ್, ಕಾಂಟೋನ್‌ಮೆಂಟ್, ಸುಧಾ ಕ್ರಾಸ್, ಜಯ ನಗರ, ರಹಿಮಬಾದ್ ಕಾಲೋನಿ, ನಳಂದ ಕಾಲೇಜ್, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನ್ನಾಥ ಮಂದಿರ, ಭಾಸ್ಕರ ನಾಯ್ಡು, ಸೆಂಟ್ ಜೋಸೆಫ್ ಸ್ಕೂಲ್, ರೇಡಿಯೋ ಪಾರ್ಕ್, ತಿಲಕ್ ನಗರ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹಾಗಾಗಿ ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :–ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಬಾಲಚಂದ್ರನ್ ಎಸ್ ರವರ ಅಧ್ಯಕ್ಷತೆಯಲ್ಲಿ ಭಾಗ್ಯನಗರ ಪಟ್ಟಣ ಪಂಚಾಯತಿಯ ಸಭಾಂಗಣದಲ್ಲಿ ಜರುಗಿತು.

ಕೇಂದ್ರ&ರಾಜ್ಯಸರ್ಕಾರದಿಂದ ಬಿಡುಗಡೆಯಾಗುವ ಆಹಾರ ಧ್ಯಾನ್ಯದ ಮಾಹಿತಿಯನ್ನು ಪಡಿತರ ಚೀಟಿದಾರರಿಗೆ ಹಾಗು ಗ್ಯಾರಂಟಿ ಸಮಿತಿ ಸದಸ್ಯರಿಗೆ ಮಾಹಿತಿ ನೀಡಬೇಕೆಂದು ಸದಸ್ಯರು ವ್ಯಕ್ತಪಡಿಸಿದರು. ಸದಸ್ಯೆ ಜ್ಯೋತಿ ಗೊಂಡಬಾಳ ಮಾತನಾಡಿ ಸಾರ್ವಜನಿಕರಿಗೆ ಆಹಾರ ಧಾನ್ಯದ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಲು ಇಲಾಖಾಧಿಕಾರಿಗಳು ಹೆಚ್ಚಿನ ಕ್ರಮವಹಿಸಬೇಕೆಂದರು.ಗ್ರಾಮೀಣ ಮಟ್ಟದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಆಹಾರ ಧಾನ್ಯ ವಿತರಣೆಯಾಗಬೇಕು. ವಿನಾ: ಕಾರಣ ಆಹಾರ ಧಾನ್ಯ ವಿತರಣಾ ಕೇಂದ್ರ ಬಂದ್ ಮಾಡಿ ಸಾರ್ವಜನಿಕರಿಗೆ ತೊಂದರೆ ಮಾಡುತ್ತಿರುವ ಪ್ರಕರಣಗಳು ಕಂಡು ಬಂದಲ್ಲಿ ನಿರ್ದಾಕ್ಷಣ್ಯ ಕ್ರಮ ಜರುಗಿಸಬೇಕೆಂದು ಅಧ್ಯಕ್ಷರು ಸೂಚಿಸಿದರು. ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಹಾರ ಸಂಗ್ರಹಣೆ, ವಿತರಣೆ ಮತ್ತು ಆಹಾರ ಧಾನ್ಯ ಉಳಿದಿರುವ ಮಾಹಿತಿಯುಳ್ಳ ನಾಮಫಲಕಗಳನ್ನು ಅಳವಡಿಸಿರುವದಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದಾಗ ಅಧ್ಯಕ್ಷರು ಕೂಡಲೇ ಅಳವಡಿಸಲು ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಗೃಹಲಕ್ಷ್ಮೀ ಯೋಜನೆಯ ಕುರಿತು ಜವಳಿ ಇಲಾಖೆಯಲ್ಲಿ ಉದ್ದಿಮೆ ಪರವಾನಿಗೆ ಪಡೆಯಲು ಜಿಎಸ್‌ಟಿ ಹೊಂದಿದ ಬಡ ನೇಕಾರರಿಗೆ ಗೃಹಲಕ್ಷ್ಮಿ ಸೌಲಭ್ಯ ಕಲ್ಪಿಸಲು ಅವಕಾಶ ಇರುವದಿಲ್ಲವೆಂದು ಭಾಗ್ಯನಗರ ಪಟ್ಟಣ ಪಂಚಾಯತ ಉಪಾಧ್ಯಕ್ಷರಾದ ಹೊನ್ನೂರಸಾಬ ಬೈರಾಪುರ ಸಭೆಗೆ ವಿವರಿಸಿದರು. ಜಿಎಸ್ಟಿ ಹೊಂದಿರುವವರಿಗೆ ಗೃಹಲಕ್ಷ್ಮಿ ಸೌಲಭ್ಯ ಪಡೆಯಲು ಅರ್ಹರಲ್ಲವೆಂದು ಇಲಾಖಾಧಿಕಾರಿಗಳು ವಿವರಿಸಿದರು. ತಾಂತ್ರಿಕ ಸಮಸ್ಯೆಯಿಂದ ಫೆಬ್ರುವರಿ, ಮಾರ್ಚ ಮಾಹೆಯ ಗೃಹಲಕ್ಷ್ಮಿ ಹಣ ಜಮೆಯಾಗಿರುವದಿಲ್ಲವೆಂದು ಇಲಾಖಾಧಿಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು. ಅನಧಿಕೃತವಾಗಿ ಅಕ್ಕಿ ಖರೀದಿದಾರರ ಮೇಲೆ ಎಫ್‌ಐಆರ್ ದಾಖಲಿಸಲು ಸಭೆಯಲ್ಲಿ ಅಧ್ಯಕ್ಷರು ಆಹಾರ ಇಲಾಖಾಧಿರಿಗಳಿಗೆ ನಿರ್ದೇಶಿಸಿದರು.

ಯುವನಿಧಿ ಫಲಾನುಭವಿಗಳು ಪ್ರತಿ ತಿಂಗಳಿಕೊಮ್ಮೆ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿತ್ತು. ಸ್ವಲ್ಪ ಬದಲಾವಣೆ ಮಾಡಿ ಪ್ರತಿ 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಮಾಡಿಕೊಳ್ಳುವುದು ಕಡ್ಡಾಯ ವಾಗಿರುತ್ತದೆಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ತಾಲೂಕ ಪಂಚಾಯತಿಯ *ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಭಾಗ್ಯನಗರ ಪಟ್ಟಣ ಪಂಚಾಯತಿ ಅಧ್ಯಕ್ಷರಾದ ತುಕರಾಮಪ್ಪ ಗಡಾದ, ಉಪಾಧ್ಯಕ್ಷರಾದ ಹೊನ್ನೂರಸಾಬ ಬೈರಾಪುರ, ಸ್ಥಾಯಿ ಸಮಿತಿ ಅಧ್ಯಕ್ಷರಾದ ಶಿವರಾಮ, ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ರಾಮಣ್ಣ ಚೌಡ್ಕಿ, ರಮೇಶ ಹ್ಯಾಟಿ, ಜ್ಯೋತಿ ಗೊಂಡಬಾಳ, ಸವಿತಾ ಗೊರಂಟ್ಲಿ, ಅನ್ನದಾನಯ್ಯಸ್ವಾಮಿ, ಮೆಹಬೂಬಪಾಷಾ ಮಾನ್ವಿ, ಅನ್ವರ್ ಹುಸೇನ್ ಗಡಾದ, ಪರಶುರಾಮ ಕೊರವರ, ಧರ್ಮರಾಜರಾವ್, ಲಕ್ಷ್ಮಣ ಡೊಳ್ಳಿನ, ಪಟ್ಟಣ ಪಂಚಾಯತ ಸರ್ವ ಸದಸ್ಯರು, ಸೇರಿದಂತೆ ಪಂಚಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಪತ್ರಕರ್ತರ ಮಕ್ಕಳಿಗೆ ಪತ್ರಿಭಾ ಪುರಸ್ಕಾರ ಜು.10ರೊಳಗೆ ದಾಖಲೆ ಸಲ್ಲಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆಯನ್ನು ಜುಲೈ 31 ರಂದು ಆಚರಣೆ ಮಾಡಲು ನಿರ್ಧರಿಸಲಾಗಿದ್ದು, ಈ ಸಂದರ್ಭದಲ್ಲಿ ಪತ್ರಕರ್ತರ ಮಕ್ಕಳಿಗೆ ಪತ್ರಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವ ಹೊಂದಿದ ಪತ್ರಕರ್ತರ ಮಕ್ಕಳು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ದ್ವಿತೀಯ ವರ್ಷ ಪ್ರತಿಶತ 60 ರಷ್ಟು ಅಂಕಗಳನ್ನು ಪಡೆದಿರುವವರಿಗೆ ಪುರಸ್ಕಾರ ನೀಡಲಾಗುವುದು.

ಈ ಹಿನ್ನೆಲೆಯಲ್ಲಿ ಅರ್ಹ ವಿದ್ಯಾರ್ಥಿಗಳು ಜುಲೈ 10 ರೊಳಗಾಗಿ ಪಾಲಕರು ತಮ್ಮ ಕಾನಿಪ ಸದಸ್ಯತ್ವದ ಗುರುತಿನ ಚೀಟಿ, ಮಕ್ಕಳ ಅಂಕಪಟ್ಟಿ, ಆಧಾರ ಕಾರ್ಡ ಹಾಗೂ ಎರಡು ಭಾವ ಚಿತ್ರಗಳೊಂದಿಗೆ ಆಯಾ ತಾಲೂಕಿನ ಕಾನಿಪ ಘಟಕಗಳ ಮೂಲಕ ಜಿಲ್ಲಾ ಪತ್ರಿಕಾ ಭವನದ ವ್ಯವಸ್ಥಾಪಕ ಶಿವು ಗಾಣಿಗೇರ ಅವರಿಗೆ ತಲುಪಿಸಬೇಕು ಎಂದು ಪ್ರಕಟಣೆ ಮೂಲಕ ತಿಳಿಸಲಾಗಿದೆ.

## ಹುನಗುಂದ ಕಾನಿಪ ಅಧ್ಯಕ್ಷರಾಗಿ ನಾಗೂರ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ಜಿಲ್ಲೆಯ ಹುನಗುಂದ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಅಮರೇಶ ನಾಗೂರ, ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ಹೊಸಮನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹುನಗುಂದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ನಡೆದ ಪದಾಧಿಕಾರಿಗಳ ಸಭೆಯಲ್ಲಿ ನಾಗೂರ ಹಾಗೂ ಹೊಸಮನಿ ಅವರನ್ನು ಆಯ್ಕೆ ಮಾಡಲಾಯಿತು.

ಉಪಾಧ್ಯಕ್ಷರಾಗಿ ಹರ್ಷಕುಮಾರ ದೇಸಾಯಿ ಹಾಗೂ ಬಸವರಾಜ ನಿಡಗುಂದಿ, ಖಜಾಂಚಿಯಾಗಿ ದೇವೇಂದ್ರಪ್ಪ ಕುರಿ, ಸಹ ಕಾರ್ಯದರ್ಶಿಯಾಗಿ ಮಲ್ಲಿಕಾರ್ಜುನ ಬಂಡರಗಲ್ ಅವರನ್ನು ಆಯ್ಕೆ ಮಾಡಲಾಯಿತು.

ನಿಕಟಪೂರ್ವ ಅಧ್ಯಕ್ಷ ಮಹಾಂತೇಶ ಪಾಟೀಲ, ಬಸವರಾಜ ಕಮ್ಮಾರ, ಮಹಾಂತೇಶ ತೋಪಲಕಟ್ಟಿ, ರವಿ ದೇಶಪಾಂಡೆ, ಎಚ್.ಎಚ್.ಬೇಪಾರಿ, ಅಶೋಕ ಹಂದ್ರಾಳ, ಅಂದಾನೆಪ್ಪ ಸುಂಕದ, ಅಶೋಕ ಸಿಂಗದ, ಎಫ್.ಎಂ.ಪಿಂಜಾರ, ಜಗದೀಶ ಹದ್ಲಿ, ಸುರೇಶ ಪತ್ತಾರ ಇದ್ದರು.

## ಎಂಎ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳ ಸಾಧನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ನಗರದ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ, ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಇತಿಹಾಸ ಹಾಗೂ ಪ್ರಾಚ್ಯಶಾಸ್ತ್ರ ಸ್ನಾತಕೋತ್ತರ ಅಧ್ಯಯನ ವಿಭಾಗದ ವಿದ್ಯಾರ್ಥಿಗಳು ಜಮಖಂಡಿಯ ಬಾಗಲಕೋಟ ವಿಶ್ವವಿದ್ಯಾಲಯ ಮಾರ್ಚ್ 2025 ರಲ್ಲಿ ನಡೆಸಿದ ಎಂಎ ಪ್ರಥಮ ಹಾಗೂ ತೃತೀಯ ಸೆಮೆಸ್ಟರ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.

ಪ್ರಥಮ ಸೆಮೆಸ್ಟರನಲ್ಲಿ ಒಟ್ಟಾರೆ ಫಲಿತಾಂಶ ಶೇ.92.31 ರಷ್ಟಾಗಿದ್ದು, 8 ವಿದ್ಯಾರ್ಥಿಗಳು ಡಿಸ್ಟಿಂಕಶನ್‌ದಲ್ಲಿ ಹಾಗೂ 4 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ. ಜ್ಯೋತಿ ಬಿಳಿಜಾಡರ ಶೇ.75.66 ಅಂಕ ಗಳಿಸಿ ಪ್ರಥಮ, ಹನಮವ್ವ ಮುದ್ದಾಪುರ ಶೇ.72.83 ಅಂಕ ಪಡೆದು ದ್ವಿತೀಯ ಹಾಗೂ ಮಹಾದೇವ ದಾಸರ ಶೇ.72.33 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ತೃತೀಯ ಸೆಮೆಸ್ಟರನಲ್ಲಿ ಒಟ್ಟಾರೆ ಫಲಿತಾಂಶ ಶೇ.100 ರಷ್ಟಾಗಿದ್ದು, 9 ವಿದ್ಯಾರ್ಥಿಗಳು ಡಿಸ್ಟಿಂಕಶನ್‌ದಲ್ಲಿ ಹಾಗೂ 8 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ, 2 ವಿದ್ಯಾರ್ಥಿಗಳು ದ್ವಿತೀಯ ವರ್ಗದಲ್ಲಿ ತೇರ್ಗಡೆಯಾಗಿದ್ದಾರೆ. ಶ್ರುತಿ ನಾಯಕ ಶೇ.76.33 ಅಂಕ ಗಳಿಸಿ ಪ್ರಥಮ, ಕಾವೇರಿ ಬಡಿಗೇರ ಶೇ.73.66 ಅಂಕ ಪಡೆದು ದ್ವಿತೀಯ ಹಾಗೂ ಸಯ್ಯದಾ ಇಫ್ತೆಸಾಮ ಖಾಜಿ ಶೇ.73 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ್, ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಕಾಲೇಜು ಉಪವಿಭಾಗ ಅಧ್ಯಕ್ಷ ಡಾ.ಪಿ.ಆರ್.ಜೋಶಿ, ಸಂಯೋಜಕ ಎಂ.ಡಿ.ಕೋರವಾರ ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

## ವ್ಯಕ್ತಿ ಕಾಣೆ ಪತ್ತೆಗೆ ನೇತಾಜಿ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 01– ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ನಿವಾಸಿ ಆಂಜನೇಯ ತಂ ಆದೆಪ್ಪ (26) ಎಂಬ ವ್ಯಕ್ತಿಯು ದಿನಾಂಕ 01–11–0224 ರಂದು ಮಧ್ಯಾಹ್ನ 2 ಗಂಟೆಗೆ ಮನೆಯಿಂದ ಮರಳಿ ಕೆಲಸಕ್ಕೆ ಗುಲ್ಬರ್ಗಾಕ್ಕೆ ಹೋಗುತ್ತೇನೆ ಅಂತಾ ಹೇಳಿ ಹೋದವರು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 28/2025 ಕಲಂ ರಡಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಗೆ ಹೆಂಡತಿ ಮತ್ತು ಮಕ್ಕಳಾದ ಅಖಿಲಾ (07) ಸುಪ್ರಿಯಾ (06) ಮಗ ಅಶೋಕ (03) ಸೇರಿದಂತೆ ಒಟ್ಟು 3 ಜನ ಮಕ್ಕಳು ಇದ್ದು ಅವರನ್ನು ಬಿಟ್ಟು ಹೋಗಿರುತ್ತಾನೆ. ವ್ಯಕ್ತಿಯ ಚಹರೆ ಪಟ್ಟಿ: ಎತ್ತರ 5.6 ಫೀಟ್, ದುಂಡು ಮುಖ, ಸಾದರಣ ಮೈ ಕಟ್ಟು, ಸಾದ ಕೆಂಪು ಬಣ್ಣ, ಕಪ್ಪು ಬಣ್ಣದ ಕೂದಲು, ಹಾಗೂ 7ನೇ ತರಗತಿ ವಿದ್ಯಾಭ್ಯಾಸ ಓದಿದ್ದು, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾನೆ. ಈ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ: 08532–235635, 08532–235100, 9480803800 ಅಥವಾ ಪಿ.ಎಸ್.ಐ (ಕಾ.ಸು) 9480803846 ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು 9480803831ಗೆ ಸಂಪರ್ಕಿಸಬಹುದಾಗಿದೆ.

ಮಾಹಿತಿ ನೀಡಿದವರಿಗೆ ಪೊಲೀಸ್ ಇಲಾಖೆಯಿಂದ ಸೂಕ್ತ ಬಹುಮಾನ ನೀಡಲಾಗುವುದು ಎಂದು ನೇತಾಜಿ ನಗರ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ತವ್ಯ ಲೋಪ–ಸಿಡಿಪಿಓ ವಿರುದ್ಧ ಶಿಸ್ತು ಕ್ರಮಕ್ಕೆ ಸಿಇಓ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ಅಂಗನವಾಡಿ ಕಟ್ಟಡಕ್ಕೆ ಗುರುತಿಸಲಾಗುತ್ತಿರುವ ನಿವೇಶನದ ಮಾಹಿತಿಯನ್ನು ಜಿಲ್ಲಾ ಕಚೇರಿಗೆ ಕಳುಹಿಸದೇ ತಮ್ಮ ಹಂತದಲ್ಲೇ ಇಟ್ಟು–ಕೊಂಡು ಕರ್ತವ್ಯದಲ್ಲಿ ಲೋಪ ಎಸಗಿದ ಬೀಳಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮೇಲೆ ಶಿಸ್ತು ಕ್ರಮಕೈಗೊಳ್ಳುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಮಂಗಳವಾರ ಜಿಲ್ಲೆಯ ಅಂಗನವಾಡಿ ಮೇಲ್ವಿಚಾರಕರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಅಂಗನವಾಡಿಗೆ ಸ್ವ–ಂತ ನಿವೇಶನ ಗುರುತಿಸಿ ಖರೀದಿಸುವ ಸಲುವಾಗಿ ಬೀಳಗಿ ಪುರಸಭೆಯಿಂದ ಪಡೆಯಲಾದ ನಿವೇಶನದ ಅಂದಾಜು ವೆಚ್ಚದ ಮಾಹಿತಿಯನ್ನು ಜಿಲ್ಲಾ ಕಚೇರಿಗೆ ಕಳುಹಿಸದೇ ವಿಳಂಬ ಧೋರಣೆ ಅನುಸರಿಸಿದ್ದಲ್ಲದೇ ಹಾರಿಕೆ ಉತ್ತರ ನೀಡಿ, ಕರ್ತವ್ಯದಲ್ಲಿ ಬೇಜವಾಬ್ದಾರಿ ತೋರಿದ ಹಿನ್ನೆಲೆಯಲ್ಲಿ ಶಿಸ್ತು ಕ್ರಮಕೈಗೊಳ್ಳಲು ಸೂಚಿಸಿದರು.

ಒಂದು ವರ್ಷದಿಂದ ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳ ಪಟ್ಟಿ ಮಾಡಿ ನಿವೇಶನ ಗುರುತಿಸಲು ಸೂಚನೆ ನೀಡಲಾಗಿತ್ತು. ಆದರೆ ಇನ್ನು ಕೆಲವು ಮೇಲ್ವಿಚಾರಕರು ನಿವೇಶನ ಗುರುತಿಸುವ ಕಾರ್ಯದಲ್ಲಿ ಬೇಜವಾಬ್ದಾರಿ ತೋರುತ್ತಿದ್ದು, ಆಯಾ ತಾಲೂಕಾ ಮೇಲ್ವಿಚಾರಕರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳು ಸ್ವ–ಂತ ಕಟ್ಟಡ, ಬಾಡಿಗೆ ಕಟ್ಟಡ ಎಷ್ಟು ಇವೆ. ಸ್ವಂತ ಕಟ್ಟಡಕ್ಕೆ ಗುರುತಿಸಿದ ನಿವೇಶನ ಎಷ್ಟು, ನಿವೇಶನ ಗುರುತಿಸಿರುವ ಬಗ್ಗೆ ದೃಢೀಕರಣ ಸಹಿತ ಮಾಹಿತಿ ನೀಡುವಂತೆ ಒಂದು ತಿಂಗಳ ಗಡುವು ನೀಡುವುದಾಗಿ ಸಿಇಓ ಕುರೇರ ತಿಳಿಸಿದರು.

ಆಸಕ್ತಿಯಿಂದ ಕೆಲಸ ಮಾಡಿದರೆ ಎಲ್ಲವೂ ಸಾಧ್ಯವಾಗುತ್ತದೆ. ನಿವೇಶನ ಹುಡುಕಿ ಮಾಹಿತಿ ಪಡೆದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಖರೀದಿ ಕುರಿತು ಮೇಲಾಧಿಕಾರಿಗಳೊಂದಿಗೆ ಚರ್ಚೆ ಮಾಡಬೇಕು. ನಿಮ್ಮ ಜವಾಬ್ದಾರಿ ಹೆಚ್ಚಿಗೆ ಇದೆ. ತುಂಬಾ ಮುತುವರ್ಜಿ ವಹಿಸಿ ಕೆಲಸ ಮಾಡಲು ತಿಳಿಸಿದ ಸಿಇಓ ಅವರು, ಆಯಾ ತಾಲೂಕಿನಲ್ಲಿರುವ ನಿವೇಶನ ರಹಿತಿ ನಗರ ಹಾಗೂ ಗ್ರಾಮೀಣ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳ ಮಾಹಿತಿಯನ್ನು ಪಡೆದುಕೊಂಡರು.

ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿ ತಿಂಗಳ ಹಾಜರಾತಿ ಸರಿಯಾಗಿ ಹಾಕುತ್ತಿಲ್ಲ. ಅಂದಾಜು ಲೆಕ್ಕದ ಮೇಲೆ ಹಾಜರಾತಿ ಇದ್ದು, ವಾಸ್ತವವಾಗಿ ನೋಡಿದಾಗ ಬಹಳಷ್ಟು ಕಡಿಮೆ ಇದೆ. ಅಲ್ಲದೇ ಪೋಷನ್ ಟ್ರ್ಯಾಕ್‌ನಲ್ಲಿ ಸಹ ವ್ಯತ್ಯಾಸ ಕಂಡುಬರುತ್ತಿದೆ. ಈ ರೀತಿಯ ವ್ಯತ್ಯಾಸ ಆಗಬಾರದು. ಮುಂದಿನ ಮಾಹೆಯಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅನಿರೀಕ್ಷಿತವಾಗಿ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳ ಹಾಜರಾತಿ ಪರಿಶೀಲಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಸರಕಾರ ಅಪೌಷ್ಠಿಕ ಮಕ್ಕಳಿಗೆ ಪೌಷ್ಠಿಕಾಂಶವುಳ್ಳ ಆಹಾರ ನೀಡುತ್ತಿದೆ. ಆದರೂ ಸಹ ಅಪೌಷ್ಠಿಕ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿಲ್ಲ. ಅಂತಹ ಮಕ್ಕಳ ಬಗ್ಗೆ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಗಮನ ಹರಿಸಬೇಕು. ಕಾಲ ಕಾಲಕ್ಕೆ ಮಕ್ಕಳ ತೂಕ, ಎತ್ತರ ಪರೀಕ್ಷೆ ಮಾಡಬೇಕು. ಕಡಿಮೆ ಪ್ರಗತಿ ಸಾಧಿಸಿದ ಮೇಲ್ವಿಚಾರಕರ ಮೇಲೆ ನೋಟಿಸ್ ಜಾರಿ ಮಾಡಲು ತಿಳಿಸಿದರು.


ಶಿಶುಅಭಿವೃದ್ಧಿ ಯೋಜನಾಧಿಕಾರಿಗಳು ಕೇವಲ ಅಂಗನವಾಡಿಗಳಿಗೆ ಭೇಟಿ ನೀಡಿದರೆ ಸಾಲದು. ಭೇಟಿ ನೀಡಿದ ಸಂದರ್ಭದಲ್ಲಿ ಅಲ್ಲಿರುವ ಮೂಲಭೂತ ಸೌಲಭ್ಯ, ಹಾಜರಾತಿ ಪರಿಶೀಲಿಸಿ ಮುಂದಿನ ಭೇಟಿ ಸಮಯದಲ್ಲಿ ಸುಧಾರಣೆ ಆಗಿರುವ ಬಗ್ಗೆ ಗಮನ ಹರಿಸುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸೇರಿದಂತೆ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಅಂಗನವಾಡಿ ಕೇಂದ್ರಗಳ ಮೇಲ್ವಿಚಾರಕರು ಉಪಸ್ಥಿತರಿದ್ದರು.

## ಜು.3 ರಿಂದ ಅಮರನಾಥ ಯಾತ್ರೆ, ಭದ್ರತೆ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಜಮು,ಜೂ.30(ಪಿಟಿಐ)–ಇದೇ ಜು. 3 ರಿಂದ ಆರಂಭವಾಗಲಿರುವ ಅಮರನಾಥ ಯಾತೆ–ಗೆ ಮುಂಚಿತವಾಗಿ, ಭದ್ರತಾ ವ್ಯವಸ್ಥೆಗಳನ್ನು ಬಲಪಡಿಸಲು ಮತ್ತು ದೈನಂದಿನ ವಿಧ್ವಂಸಕ ಕೃತ್ಯಗಳ ವಿರುದ್ಧ ತಪಾಸಣೆ ನಡೆಸಲು ಜಮ್ಮು ಪೊಲೀಸರು ನಗರದಾದ್ಯಂತ ಹಲವಾರು ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. 38 ದಿನಗಳ ವಾರ್ಷಿಕ ತೀರ್ಥಯಾತ್ರೆಯು ಅವಳಿ ಮಾರ್ಗಗಳಾದ ಅನಂತನಾಗ್ ಜಿಲ್ಲೆಯ ಸಾಂಪ್ರದಾಯಿಕ 48 ಕಿಮೀ ಪಹಲ್ಗಾಮ್ ಮಾರ್ಗ ಮತ್ತು ಗಂಡೇರ್‌ಬಾಲ್ ಜಿಲ್ಲೆಯ 14 ಕಿಮೀ ಬಾಲ್ಟಾಲ್ ಮಾರ್ಗದಿಂದ ಪ್ರಾರಂಭವಾಗಲಿದ್ದು, ಇದು 3,880 ಮೀಟರ್ ಎತ್ತರದ ಅಮರನಾಥ ಗುಹಾ ದೇಗುಲಕ್ಕೆ ಕಾರಣವಾಗುತ್ತದೆ.



ಯಾತ್ರೆ ಪ್ರಾರಂಭವಾಗುವ ಒಂದು ದಿನ ಮೊದಲು ಜಮ್ಮು ಮೂಲದ ಭಗವತಿ ನಗರ ಮೂಲ ಶಿಬಿರದಿಂದ ಯಾತ್ರಿಕರ ಮೊದಲ ತಂಡ ಕಾಶ್ಮೀರಕ್ಕೆ ಹೊರಡಲಿದೆ. ಮುಂಬರುವ ಅಮರನಾಥ ಯಾತ್ರೆಯನ್ನು ಗಮನದಲ್ಲಿಟ್ಟುಕೊಂಡು, ಜಿಲ್ಲೆಯಾದ್ಯಂತ ಅನೇಕ ಆಯಕಟ್ಟಿನ ಸ್ಥಳಗಳಲ್ಲಿ ಜಂಟಿ ನಾಕಾಗಳನ್ನು (ಚೆಕ್‌ಪೋಸ್ಟ್‌ಗಳು) ಸ್ಥಾಪಿಸುವ ಮೂಲಕ ಜಮ್ಮು ಪೊಲೀಸರು ಭದ್ರತಾ ವ್ಯವಸ್ಥೆಗಳನ್ನು ಗಮನಾರ್ಹವಾಗಿ ಬಲಪಡಿಸಿದ್ದಾರೆ ಎಂದು ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

ಸುಗಮ ಮತ್ತು ಸುರಕ್ಷಿತ ತೀರ್ಥಯಾತ್ರೆ ಅನುಭವವನ್ನು ಖಚಿತಪಡಿಸಿಕೊಳ್ಳಲು ಅರೆಸೈನಿಕ ಪಡೆಗಳ ಸಮನ್ವಯದೊಂದಿಗೆ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು. ರಾಷ್ಟ್ರೀಯ ಹೆದ್ದಾರಿಗಳು, ನಗರದ ಪರಿಧಿಗಳು ಮತ್ತು ಭಗವತಿ ನಗರ ಮೂಲ ಶಿಬಿರಕ್ಕೆ ಹೋಗುವ ಮಾರ್ಗಗಳು ಸೇರಿದಂತೆ ಹೆಚ್ಚಿನ ಸೂಕ್ಷ್ಮತೆ ಮತ್ತು ಹೆಚ್ಚಿನ ಚಲನಶೀಲತೆ ವಲಯಗಳಲ್ಲಿ ಚೆಕ್‌ಪೋಸ್ಟ್‌ಗಳು ದಿನದ 24 ಗಂಟೆಗಳೂ ಕಾರ್ಯನಿರ್ವಹಿಸಲಿವೆ ಎಂದು ವಕ್ತಾರರು ತಿಳಿಸಿದ್ದಾರೆ.

ಪೊಲೀಸ್, ಕೇಂದ್ರ ಕೈಗಾರಿಕಾ ಭದ್ರತಾ ಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ, ಇಂಡೋ–ಟಿಬೆಟಿಯನ್ ಗಡಿ ಪೊಲೀಸ್ ಮತ್ತು ಇತರ ಸಂಸ್ಥೆಗಳ ಸಿಬ್ಬಂದಿಯನ್ನು ತೀವ್ರ ತಪಾಸಣೆ, ಕಣ್ಗಾವಲು ಮತ್ತು ಪರಿಶೀಲನಾ ಕಾರ್ಯಾಚರಣೆಗಳಿಗಾಗಿ ನಿಯೋಜಿಸಲಾಗಿದೆ.

ಜಾಗರೂಕತೆ, ವೃತ್ತಿಪರತೆ ಮತ್ತು ಸಾರ್ವಜನಿಕ ಅನುಕೂಲತೆಯನ್ನು ಖಚಿತಪ

'ಡಿಸಿಕೊಳ್ಳಲು ಹಿರಿಯ ಪೊಲೀಸ್ ಅಧಿಕಾರಿಗಳು ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯಾಚರಣೆಗಳನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ವಕ್ತಾರರು ಹೇಳಿದರು. ಯಾತ್ರಿಕರು ಮತ್ತು ನಾಗರಿಕರ ಬಗ್ಗೆ ಕಠಿಣ ತಪಾಸಣೆ ಮತ್ತು ಗೌರವಾನ್ವಿತ ನಡವಳಿಕೆಯ ನಡುವೆ ಸಮತೋಲನವನ್ನು ಕಾಯ್ದುಕೊಳ್ಳಲು ನಾಕಾ ತಂಡಗಳಿಗೆ ನಿರ್ದೇಶಿಸಲಾಗಿದೆ ಎಂದು ಅವರು ಹೇಳಿದರು. ತೂಕವಿಲ್ಲದ ಮತ್ತು ಜನದಟ್ಟಣೆಯ ಸ್ಥಳಗಳಲ್ಲಿ ತಾಂತ್ರಿಕ ಇನ್‌ಪುಟ್‌ಗಳು ಮತ್ತು ಮುಖ ಗುರುತಿಸುವಿಕೆ ವ್ಯವಸ್ಥೆಗಳು ಬೆಂಬಲದೊಂದಿಗೆ ವಾಹನ ತಪಾಸಣೆ, ಗುರುತಿನ ಪರಿಶೀಲನೆ ಮತ್ತು ಅನುಮಾನಾಸ್ಪದ ಚಲನೆಯನ್ನು ಪತ್ತೆಹಚ್ಚಲು ವಿಶೇಷ ಗಮನ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಹೋಟೆಲ್‌ಗಳು, ಅತಿಥಿಗೃಹಗಳು ಮತ್ತು ವಸತಿಗೃಹಗಳಲ್ಲಿ ಯಾದೃಚ್ಛಿಕ ತಪಾಸಣೆ ನಡೆಸಲು ಸೂಚನೆಗಳನ್ನು ಸಹ ನೀಡಲಾಗಿದೆ ಎಂದು ವಕ್ತಾರರು ಹೇಳಿದರು. ನಾಗರಿಕರು ಮತ್ತು ಯಾತ್ರಿಕರು ನಾಕಾ ತಂಡಗಳೊಂದಿಗೆ ಸಹಕರಿಸಬೇಕು, ಮಾನ್ಯ ಗುರುತಿನ ಚೀಟಿಗಳನ್ನು ಇಟ್ಟುಕೊಳ್ಳಬೇಕು ಮತ್ತು ಯಾವುದೇ ಅನುಮಾನಾಸ್ಪದ ಚಟುವಟಿಕೆಯನ್ನು ತಕ್ಷಣ ವರದಿ ಮಾಡಬೇಕು ಎಂದು ಪೊಲೀಸರು ಕೋರಿದ್ದಾರೆ. ಪವಿತ್ರ ಯಾತ್ರೆಯ ಸಮಯದಲ್ಲಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವಲ್ಲಿ ಸಾರ್ವಜನಿಕರ ಬೆಂಬಲ ನಿರ್ಣಾಯಕವಾಗಿದೆ ಎಂದು ವಕ್ತಾರರು ಹೇಳಿದರು.

ಏತನ್ಮಧ್ಯೆ, ಜಮ್ಮುವಿನ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ಜೋಗಿಂದರ್ ಸಿಂಗ್, ಎಸ್‌ಪಿಜಿಯ ಗ್ರೂಪ್ ಕಮಾಂಡರ್ ಮತ್ತು ಇತರ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ, ಜಮ್ಮು–ಶ್ರೀನಗರ ರಾಷ್ಟ್ರೀಯ ಹೆದ್ದಾರಿಯ ನಾಗ್ರೋಟಾದ ಸಂಚಾರ ಚೆಕ್‌ಪೋಸ್ಟ್‌ನಿಂದ ಸಲೂರಾವರೆಗೆ ಯಾತ್ರೆಯ ಮಾರ್ಗದಲ್ಲಿ ಸಮಗ್ರ ಭದ್ರತಾ ಪರಿಶೀಲನೆ ನಡೆಸಿದರು. ಉನ್ನತ ಮಟ್ಟದ ತಂಡವು ನಿಯೋಜನಾ ಸ್ಥಳಗಳನ್ನು ಪರಿಶೀಲಿಸಿತು ಮತ್ತು ಮಾರ್ಗದಲ್ಲಿ ನಿಯೋಜಿಸಲಾದ ಅಧಿಕಾರಿಗಳೊಂದಿಗೆ ಸಂವಹನ ನಡೆಸಿತು ಎಂದು ವಕ್ತಾರರು ಹೇಳಿದರು. ಪ್ರಸ್ತುತ ಬೆದರಿಕೆ ಸನ್ನಿವೇಶ ಮತ್ತು ಕರ್ತವ್ಯಗಳನ್ನು ನಿರ್ವಹಿಸುವಾಗ ಅನುಸರಿಸಬೇಕಾದ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳ ಬಗ್ಗೆ ಅಧಿಕಾರಿಗಳಿಗೆ ತಿಳಿಸಲು ವಿವರವಾದ ಬ್ರಿಫಿಂಗ್ ಅಧಿವೇಶನವನ್ನು ನಡೆಸಲಾಯಿತು ಎಂದು ಅವರು ಹೇಳಿದರು. ವಿಶೇಷವಾಗಿ ಎಕ್ಸ್‌ಪ್ರೆಸ್‌ವೇ ನಿರ್ಮಾಣ ನಡೆಯುತ್ತಿರುವ ಪ್ರದೇಶಗಳಲ್ಲಿ, ವಿಶೇಷವಾಗಿ ದುರ್ಬಲ ವಲಯಗಳೆಂದು ಗುರುತಿಸಲಾಗಿರುವ ಪ್ರದೇಶಗಳಲ್ಲಿ, ದೈನಂದಿನ ವಿಧ್ವಂಸಕ–ವಿರೋಧಿ ತಪಾಸಣೆಗಳನ್ನು ನಡೆಸಲು ಅಧಿಕಾರಿಗಳಿಗೆ ನಿರ್ದೇಶಿಸಲಾಯಿತು ಎಂದು ಅವರು ಹೇಳಿದರು, ಎಲ್ಲಾ ಭದ್ರತಾ ಸಂಸ್ಥೆಗಳಲ್ಲಿ ಹೆಚ್ಚಿನ ಜಾಗರೂಕತೆಯನ್ನು ಕಾಯ್ದುಕೊಳ್ಳುವುದು ಮತ್ತು ಸಂಘಟಿತ ಪ್ರಯತ್ನಗಳನ್ನು ಖಚಿತಪಡಿಸಿಕೊಳ್ಳುವುದರ ಮೇಲೆಯೂ ಒತ್ತು ನೀಡಲಾಗಿದೆ ಎಂದು ಅವರು ಹೇಳಿದರು.

## ಬೇವೂರ ಕಾಲೇಜಿಗೆ ಸಂಗೀತಾ ಮಾಗನೂರ ಪ್ರಥಮ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ತಾಲೂಕಿನ ಬೇವೂರ ಗ್ರಾಮದ ಆದರ್ಶ ವಿದ್ಯಾವರ್ಧಕ ಸಂಘದ ಪರಪ್ಪ ಸಜ್ಜನ ಕಲಾ ಮಹಾವಿದ್ಯಾಲಯದ ಬಿ.ಎ ಆರನೇ ಸೆಮಿಸ್ಟರ್ ಪರೀ–ಕ್ಷೆಯ ಫಲಿತಾಂಶ ಶೇ.97.43 ರಷ್ಟು ಆಗಿದೆ. ಪರೀಕ್ಷೆ ಬರೆದ 39 ವಿದ್ಯಾರ್ಥಿಗಳಲ್ಲಿ 38 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಕಾಲೇಜಿನ ಸಂಗೀತಾ ಎಸ್. ಮಾಗನೂರ ಒಟ್ಟು 650 ಅಂಕಗಳಿಗೆ 625(ಶೇ.96.15) ಅಂಕ ಗಳಿಸಿ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಲಕ್ಷ್ಮೀ. ಎಂ.ಮಾಗನೂರ 618 (ಶೇ.95.07) ಅಂಕ ಪಡೆದು ದ್ವಿತೀಯ ಹಾಗೂ ಯಶೋಧಾ ಕಡೂರ 604 (ಶೇ.92.92) ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ನ್ಯಾಯವಾದಿ ಜಿ.ಜಿ.ಮಾಗನೂರ ಹಾಗೂ ಪ್ರಾಚಾರ್ಯ ಜಗದೀಶ ಭೈರಮಟ್ಟಿ ತಿಳಿಸಿದ್ದಾರೆ.

## ಗಿರಿಯಾಚಾರ ಸೇವೆ ಅವಿಸ್ಮರಣೀಯ :ಶಶಿಧರ ಕುರೇರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.1–ಬಾಗಲಕೋಟೆಯಲ್ಲಿ ಕಳೆದ 22 ವರ್ಷಗಳ ಕಾಲ ನಿರಂತರ ಸೇವೆ ಸಲ್ಲಿಸಿ, ಎಲ್ಲ ಅಧಿಕಾರಿಗಳ ಮನಗೆದ್ದ ವಿ.ಗಿರಿಯಾಚಾರರ ಸೇವೆ ಅವಿಸ್ಮರಣೀಯವಾದುದು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಸೋಮವಾರ ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ (ಎನ್.ಐ.ಸಿ)ದ ಹಿರಿಯ ತಾಂತ್ರಿಕ ನಿರ್ದೇಶಕ ವಿ. ಗಿರಿಯಾಚಾರ ಅವರು ವಯೋನಿವೃತ್ತಿ ಹೊಂದಿದ ನಿಮಿತ್ಯ ಹಮ್ಮಿಕೊಂಡ ಬೀಳ್ಕೊಡುವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗಿರಯಾಚಾರ ಅಧಿಕಾರ ಅವಧಿಯಲ್ಲಿ ಹಲವಾರು ಚುನಾವಣಾ ಕಾರ್ಯಗಳಲ್ಲಿ ಪಾಲ್ಗೊಂಡಿದ್ದು, ಯಾವುದೇ ಚುನಾವಣಾ ಕಾರ್ಯದಲ್ಲಿ ದೋಷವಾಗದಂತೆ, ತಾಂತ್ರಿಕ ಸಮಸ್ಯೆಯಾಗದಂತೆ ಕಾರ್ಯನಿರ್ವಹಿಸಿ ಯಶಸ್ಸು ಪಡೆದವರು ಎಂದರು.

ಗಿರಿಯಾಚಾರ ಸೇವಾವಧಿಯಲ್ಲಿ ಅನೇಕ ಐ.ಎ.ಎಸ್ ಅಧಿಕಾರಿಗಳು ಆಗಿ ಹೋಗಿದ್ದು, ಆ ಎಲ್ಲ ಅಧಿಕಾರಿಗಳು ಗಿರಿಯಾಚಾರವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಆರೋಗ್ಯ ಇಲಾಖೆಯಲ್ಲಿನ ವರ್ಗಾವಣೆಗೆ ಸಂಬಂಧಿಸಿದ ಸಮಸ್ಯೆಯಲ್ಲಿ ಯಾವುದೇ ತೆ–ೂಂದರೆಯಾಗದಂತೆ ತಾಂತ್ರಿಕ ಸಲಹೆ ನೀಡಿದ್ದಾರೆ. ಅಧಿಕಾರಿಗಳಿಗಾಗಲಿ ಇಲ್ಲವೇ ಸಿಬ್ಬಂದಿಗಳಾಗಲಿ ಕೀಳರಿಮೆ ಇರಬಾರದು. ತಮಗೆ ಒದಗಿ ಬಂದ ಅಧಿಕಾರವನ್ನು ಜವಾಬ್ದಾರಿಯಿಂದ ನಿರ್ವಹಿಸಿದಾಗ ಯಶಸ್ಸು ಸಿಗಲು ಸಾಧ್ಯ. ಈ ನಿಟ್ಟಿನಲ್ಲಿ ಗಿರಿಯಾಚಾರ ವಯೋನಿವೃತ್ತಿ ಹೊಂದಿದ್ದರು ಕೂಡಾ ಸದೃಡವಾಗಿದ್ದು, ಮುಂಬರುವ ದಿನಗಳಲ್ಲೂ ಕೂಡಾ ಜಿಲ್ಲಾಡಳಿತಕ್ಕೆ ತಮ್ಮ ಸಲಹೆಗಳನ್ನು ನೀಡಬೇಕೆಂದು ಆಶಿಸುತ್ತೇವೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ವಿ.ಗಿರಿಯಾಚಾರ, ಗದಗದಲ್ಲಿ ಭೂಮಿ ಕೇಂದ್ರದ ಸಿಇಓ ಆಗಿ, ತದನಂತರ ಬಾಗಲಕೋಟೆಗೆ ಬಂದಾಗ ಯುವಕನಾಗಿದ್ದೆ. ಆ ಸಮಯದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ ಸಿಇಓ ಅವರ ಮಾರ್ಗದರ್ಶನದಲ್ಲಿ ಉತ್ತಮ ಕಾರ್ಯನಿರ್ವಹಿಸಲು ಸಾಧ್ಯವಾಯಿತು. ಒಟ್ಟಿನಲ್ಲಿ ಧನಾತ್ಮಕ ಚಿಂತನೆಯಿಂದ ಕಾರ್ಯ ನಿರ್ವಹಿಸಿದಲ್ಲಿ ಎಲ್ಲವೂ ಒಳಿತಾಗುತ್ತವೆ ಎಂಬುದನ್ನು ನನ್ನ ಅಧಿಕಾರ ಅವಧಿಯಲ್ಲಿ ಕಂಡುಕೊಂಡಿದ್ದೇನೆ ಎಂದರು.

ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಮಾತನಾಡಿ, ಗಿರಿಯಾಚಾರ ನಿವೃತ್ತಿಯಾದರು ಕೂಡಾ ಯುವಕರನ್ನು ಮೀರಿಸುವಂತ ಉತ್ಸಾಹ ಹೊಂದಿದ್ದು, ಅವರು ನಮಗೆಲ್ಲ ಮಾದರಿಯಾಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ, ಜಿ.ಪಂ ಮುಖ್ಯಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ನೂತನ ಎನ್.ಐಸಿಯ ಅಧಿಕಾರಿ ಪಿ.ಜೈಕುಮಾರ, ಆಧಾರ ಜಿಲ್ಲಾ ಸಂಯೋಜಕ ಸಿದ್ದಪ್ಪ ಅನಿಸಿಕೆ ವ್ಯಕ್ತಪಡಿಸಿದರು. ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಗಿರಿಯಾಚಾರ ಪತ್ನಿ ಪರಿಮಳಾ ಗಿರಿಯಾಚಾರ, ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಅಫಜಲಪುರದಲ್ಲಿ ಜಾಥಾಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,–ಪ್ಯಾನ್ ಇಂಡಿ–ಯಾ ಬಾಲಕಾರ್ಮಿಕ ಮಕ್ಕಳ ರಕ್ಷಣೆ ಮತ್ತು ಪುನರ್ವಸತಿ ಕಾರ್ಯಾಚರಣೆ ಅಡಿಯಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಅಂಗವಾಗಿ ಅಫಜಲಪೂರ ತಾಲೂಕು ನ್ಯಾಯಾಲಯ ಆವರಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ಕಾರ್ಯಕ್ರಮದ ಕಾಲ್ನಡಿಗೆ ಜಾಥಾಕ್ಕೆ ಅಫಜಲಪುರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ ವಿನಾಯಕ ಮಾಯಣ್ಣವರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಅಫಜಲಪುರ ತಾಲೂಕಾಡಳಿತ, ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಸಂಸ್ಕಾರ ಪ್ರತಿಷ್ಠಾನ, ಮಾರ್ಗದರ್ಶಿ ಸಂಸ್ಥೆ, ಡಾನ ಬಾಸ್ಕೊ ಸಂಸ್ಥೆ ಹಾಗೂ ಮಕ್ಕಳ ಸಹಾಯವಾಣಿ–1098/112 ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಅಫಜಲಪುರ ಸರಕಾರಿ ಸಹಾಯಕ ಅಭಿಯೋಜಕರು ಹಾಗೂ ತಾಲೂಕ ಕಾನೂನು ಸೇವಾ ಸಮಿತಿಯ ಕಾರ್ಯನಿರ್ವಾಹಕ ಕಾರ್ಯದರ್ಶಿ ಜಯಶ್ರೀ ಪಿ., ತಾಲೂಕಾ ನ್ಯಾಯಾವಾದಿಗಳ ಸಂಘದ ಅಧ್ಯಕ್ಷ ಎಸ್. ಎಸ್. ಪಾಟೀಲ್, ಕಲಬುರಗಿ ಕಾರ್ಮಿಕ ಇಲಾಖೆಯ ಹಿರಿಯ ಕಾರ್ಮಿಕ ನಿರೀಕ್ಷಕ ರವೀಂದ್ರ ಕುಮಾರ್ ಬಲ್ಲೂರ್, ಮಾರ್ಗದರ್ಶಿ ಸಂಸ್ಥೆಯ ಸಂಯೋಜಕ ಶೀತಲ, ಸಂಸ್ಕಾರ ಪ್ರತಿಷ್ಠಾನ ಸಂಸ್ಥೆಯ ನಿರ್ದೇಶಕ ವಿಠ್ಠಲ್ ಚಿಕಣಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ, ಡಾನ ಬಾಸ್ಕೊ ಸಂಸ್ಥೆಯ ಮಲ್ಲಿಕಾರ್ಜುನ, ಮುಖೋಪಾಧ್ಯಯರಾದ ಹೆಚ್. ಎಸ್. ಪಾಟೀಲ್, ಅಫಜಲಪುರದ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಶಿಕ್ಷಕರು ಪೊಲೀಸ್ ಸಿಬ್ಬಂದಿಗಳು, ವಕೀಲರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಈ ಜಾಥಾ ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಮಕ್ಕಳ ಸಹಾಯವಾಣಿ–1098/112ರ ಕಾರ್ಯಕ್ರಮ ಸಂಯೋಜಕ ಬಸವರಾಜ್ ತೆಂಗಳಿ ಅವರು ಮಕ್ಕಳ ಸಹಾಯವಾಣಿ ಯೋಜನೆ ಕುರಿತು ಮಾಹಿತಿ ನೀಡಿದರು.

ಈ ಜಾಥಾ ಕಾರ್ಯಕ್ರಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಮಕ್ಕಳು ಭಾಗವಹಿಸಿ "ದುಡಿಮೆ ಬೇಡ ಶಿಕ್ಷಣ ಬೇಕು" ಎಂಬ ಘೋಷಣೆಯೊಂದಿಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

# ಜು. 5ಕ್ಕೆ "ಹಸಿರು ಪಥಕ್ಕೆ" ಚಾಲನೆ: ಕಾರ್ಯಕ್ರಮ ಅಚ್ಚುಕಟ್ಟಾಗಿ ಏರ್ಪಡಿಸುವಂತೆ ಅಧಿಕಾರಿಗಳಿಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.1:ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಸಿರೀಕರಣ ಹೆಚ್ಚಿಸುವ ಮಹತ್ವಾಕಾಂಕ್ಷೆಯೊಂದಿಗೆ ಇದೇ ಜುಲೈ 5ಕ್ಕೆ ಆಯವ್ಯಯ ಘೋಷಣೆಯ ಸಸಿ ನೆಡೆಯುವ ಅಭಿಯಾನದ "ಹಸಿರು ಪಥ" ಯೋಜನೆಗೆ ಕಲಬುರಗಿಯಲ್ಲಿ ಚಾಲನೆ ನೀಡಲಾಗುತ್ತಿದ್ದು, ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಲು ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಸೂಚಿಸಿದರು. ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ಇದೇ ದಿನದಂದು ರಾಜ್ಯ ಮಟ್ಟದ ವನಮಹೋತ್ಸವ ಕಾರ್ಯಕ್ರಮಕ್ಕೆ ಮತ್ತು ಕಲಬುರಗಿ ನಗರದಾದ್ಯಂತ ಹ ಕೆರೆ, ಉದ್ಯಾನವನ, ಪ್ರಮುಖ ವೃತ್ತ, ರಸ್ತೆ ಬದಿ ಸಸಿ ನೆಡೆಯುವ "ಹಸಿರು ಕಲಬುರಗಿ" ಅಭಿಯಾನಕ್ಕೂ ಚಾಲನೆ ನೀಡಲಾಗುತ್ತದೆ ಎಂದರು. ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ, ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಎಅಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ ಸೇರಿದಂತೆ ಪ್ರದೇಶದ ಸಚಿವರು, ಶಾಸಕರುವಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಆಗಮಿಸುವುದರಿಂದ, ಎಲ್ಲಿಯೂ ಶಿಷ್ಟಾಚಾರದಲ್ಲಿ ಉಲ್ಲಂಘನೆಯಾಗದಂತೆ ಎಚ್ಚರ ವಹಿಸಬೇಕು. ಕಾರ್ಯಕ್ರಮ ಯಶಸ್ಸಿಗೆ ವಿವಿಧ ಸಮಿತಿಗಳನ್ನು ರಚಿಸಿದ್ದು, ಅದರಂತೆ ಅಧಿಕಾರಿಗಳು ಪರಸ್ಪರ ಸಮನ್ವಯತೆ ಸಾಧಿಸಿ ತಮಗೆ ನೀಡಿದ ಜವಾಬ್ದಾರಿಯಂತೆ ಕಾರ್ಯನಿರ್ವಹಿಸಬೇಕು ಎಂದರು.



ಕಲಬುರಗಿ ನಗರದ ಪಿ.ಡಿ.ಎ. ಕಾಲೇಜಿನ ಅವರಣದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅಲ್ಲಿಯೆ ಬೃಹತ್ ಸಸಿ ನೆಡೆಯುವ ಅಭಿಯಾನ ಸಹ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮಕ್ಕೆ 6–7 ಸಾವಿರ ಜನರು ಸೇರುವ ನಿರೀಕ್ಷೆ ಇರುವುದರಿಂದ ಜನಸಂದಣಿ ನಿಯಂತ್ರಣಕ್ಕೆ ರಾಜ್ಯ ಪೊಲೀಸ್ ಇಲಾಖೆಯಿಂದ ಇತ್ತೀಚೆಗೆ ಎಸ್.ಓ.ಪಿ ಹೊರಡಿಸಿದ್ದು, ಅದರಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ಕಾರ್ಯಕ್ರಮಕ್ಕೆ ಸೂಕ್ತ ಭದ್ರತೆ, ಸ್ವಚ್ಛತೆ, ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು ಎಂದರು.ಡಿ.ಸಿ.ಎಫ್ ಸುಮಿತ್ ಪಾಟೀಲ ಮಾತನಾಡಿ ಹಸಿರು ಪಥ ಯೋಜನೆಯಡಿ ರಾಜ್ಯದಾದ್ಯಂತ 5,000 ಕಿ.ಮೀ ರಸ್ತೆ ಬದಿ ಗಿಡ ನೆಡಲಾಗುತ್ತಿದೆ. ಇನ್ನು ಮನೆಗೊಂದು ಮರ ಯೋಜನೆಯಡಿ ಅರಣ್ಯ ಇಲಾಖೆ, ಕಲಬುರಗಿ ಮಹಾನಗರ ಪಾಲಿಕೆ ಹಾಗೂ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ಸಹಭಾಗಿತ್ವದಲ್ಲಿ ಅನುಷ್ಠಾನ ಮಾಡಲಾಗುತ್ತಿರುವ "ಹಸಿರು ಕಲಬುರಗಿ"ಗಾಗಿ 37,100 ಎತ್ತರದ ಗಿಡಗಳನ್ನು ಸಾರ್ವಜನಿಕರಿಗೆ ವಿತರಿಸುವ ಯೋಜನೆ ಹೊಂದಲಾಗಿದೆ ಎಂದು ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದರು.ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ, ಎ.ಸಿ.ಪಿ. ಪ್ರವೀಣ ನಾಯಕ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ ಸೇರಿದಂತೆ ಪೊಲೀಸ್, ಅರಣ್ಯ, ಮಹಾನಗರ ಪಾಲಿಕೆಯ ಅಧಿಕಾರಿಗಳು ಇದ್ದರು.

ಕಾರ್ಯಕ್ರಮ ಸ್ಥಳ ಪರಿಶೀಲನೆ: ಸಭೆಯ ನಂತರ ಜುಲೈ 5 ರಂದು ನಗರದಲ್ಲಿ ಅರಣ್ಯ ಇಲಾಖೆಯ ಕಾರ್ಯಕ್ರಮ ನಡೆಯುವ ಪಿ.ಡಿ.ಎ. ಕಾಲೇಜು ಹಿಂಭಾಗದ ಮೈದಾನ ಸ್ಥಳವನ್ನು ಶಾಸಕ ಅಲ್ಲಮಪ್ರಭು ಪಾಟೀಲ ಅವರೊಂದಿಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಭೇಟಿ ನೀಡಿ ಪರಿಶೀಲಿದರು.

# ಸಸ್ಯ ಸಂತೆ ಸಪ್ತಾಹ ಕಾರ್ಯಕ್ರಮಕ್ಕೆ ಡಾ.ಎಸ್.ವಿ.ಪಾಟೀಲ್ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.01 : ನಾವು ಪರಿಸರದಿಂದ ಬಂದವರು, ಪರಿಸರವು ಪ್ರತಿಯೊಬ್ಬರ ಜೀವನಕ್ಕೂ ಬಹಳ ಮುಖ್ಯ, ಏಕೆಂದರೆ ಭೂಮಿಯ ಮೇಲಿನ ಜೀವನವು ಪರಿಸರದಿಂದ ಮಾತ್ರ ಸಾಧ್ಯ. ಎಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್.ವಿ. ಪಾಟೀಲ ಹೇಳಿದರು. ಅವರು ಮಂಗಳವಾರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟ, ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ ಬೀದರ ಹಾಗೂ ತೋಟಗಾರಿಕೆ ಮಹಾವಿದ್ಯಾಲಯ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ತೋಟಗಾರಿಕೆ ಮಹಾವಿದ್ಯಾಲಯದ ಮುಖ್ಯದ್ವಾ–ರದ ಮುಂಭಾಗದಲ್ಲಿ ಜು.1 ರಿಂದ 5 ರವರೆಗೆ ಜರುಗಲಿರುವ "ಸಸ್ಯ ಸಂತೆ ಸಪ್ತಾಹ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಾನವರು, ಪ್ರಾಣಿಗಳು, ನೈಸರ್ಗಿಕ ಸಸ್ಯಗಳು, ಮರಗಳು ಮತ್ತು ಸಸ್ಯಗಳು, ಹವಾಮಾನ, ಹವಾಮಾನ ಎಲ್ಲವೂ ಪರಿಸರದಲ್ಲಿದೆ. ಪರಿಸರವು ಹವಾಮಾನದಲ್ಲಿ ಸಮತೋಲನವನ್ನು ಕಾಯ್ದುಕೊಳ್ಳಲು ಕೆಲಸ ಮಾಡುವುದಲ್ಲದೆ ಜೀವನಕ್ಕೆ ಅಗತ್ಯವಾದ ಎಲ್ಲವನ್ನೂ ಒದಗಿಸುತ್ತದೆ. ಮತ್ತೊಂದೆಡೆ, ತಂತ್ರಜ್ಞಾನವನ್ನು



ವಿಜ್ಞಾನವು ಪ್ರೋತ್ಸಾಹಿಸಿದೆ ಮತ್ತು ಜಗತ್ತಿನಲ್ಲಿ ಸಾಕಷ್ಟು ಅಭಿವೃದ್ಧಿಯಾಗಿದೆ, ಮತ್ತೊಂದೆಡೆ ಅವು ಪರಿಸರ ಮಾಲಿನ್ಯವನ್ನು ಹೆಚ್ಚಿಸಲು ಕಾರಣವಾಗಿವೆಂದರು.

ಆಧುನೀಕರಣ, ಕೈಗಾರಿಕೀಕರಣ ಮತ್ತು ತಂತ್ರಜ್ಞಾನದ ಹೆಚ್ಚುತ್ತಿರುವ ಬಳಕೆಯಿಂದಾಗಿ, ಪರಿಸರದ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ರೈತರು ಹಾಗೂ ಪರಿಸರ ಸ್ನೇಹಿಗಳ ಸಲುವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಎಲ್ಲರು ನಮ್ಮಲ್ಲಿ ಲಭ್ಯವಿರುವಂತಹ ವಿವಿಧ ಉತ್ತಮ ಗುಣಮಟ್ಟದ ಗಿಡಗಳು ಪಡೆದು ತಮ್ಮ ತಮ್ಮ ಹೊಲ ಮತ್ತು ಮನೆಗಳಲ್ಲಿ ಗಿಡಗಳನ್ನು ಹಚ್ಚಿ ಪರಿಸರವನ್ನು ಕಾಪಾಡುವಲ್ಲಿ ಕೊಡುಗೆ ನೀಡುವುದರ ಜೊತೆ ರೈತರಿಗಾಗಿ ಆಯೋಜಿಸಲಾದ ಅತ್ಯಂತ ಉಪಯುಕ್ತವಾದ "ಸಸ್ಯ ಸಂತೆ ಸಪ್ತಾಹ" ಕಾರ್ಯಕ್ರಮದ ಸದುಯೋಗವನ್ನು ಪಡೆದುಕೊಳ್ಳಬೇಕೆಂದು ಕರೆ ನೀಡುವುದರ ಜೊತೆಗೆ ಪರಿಸರದ ಮಹತ್ವವನ್ನು ಅರ್ಥಮಾಡಿಕೊಂಡು, ನಾವೆಲ್ಲರೂ ನಮ್ಮ ಪರಿಸರವನ್ನು ಉಳಿಸುವಲ್ಲಿ ಸಹಕರಿಸಬೇಕೆಂದು ಹೇಳಿದರು. ಕಮಲನಗರ ತಾಲ್ಲೂಕಿನ ಪ್ರಗತಿಪರ ರೈತ ರಾಜೇಶ ಬಸನಾಳೆ ಮಾತನಾಡಿ, ಮಾನವರು ತಮ್ಮ ಸ್ವಾರ್ಥಕ್ಕಾಗಿ ಮರಗಳು ಮತ್ತು ಸಸ್ಯಗಳನ್ನು ಕಡಿಯುತ್ತಿದ್ದಾರೆ ಮತ್ತು ನೈಸರ್ಗಿಕ ಸಂಪನ್ಮೂಲಗಳೊಂದಿಗೆ ಆಟವಾಡುತ್ತಿದ್ದಾರೆ, ಇದರಿಂದಾಗಿ ಪರಿಸರಕ್ಕೆ ಬಹಳಷ್ಟು ಹಾನಿಯಾಗುತ್ತಿದೆ. ಇದಲ್ಲದೆ, ಕೆಲವು ಮಾನವ ನಿರ್ಮಿತ ಕಾರಣಗಳಿಂದಾಗಿ, ವಾತಾವರಣ, ಜಲಗೋಳ ಇತ್ಯಾದಿಗಳು ಪರಿಣಾಮ ಬೀರುತ್ತಿವೆ, ಭೂಮಿಯ ಉಷ್ಣತೆ ಹೆಚ್ಚುತ್ತಿದೆ ಮತ್ತು ಜಾಗತಿಕ ತಾಪಮಾನ ಏರಿಕೆಯ ಸಮಸ್ಯೆ ಉದ್ಭವಿಸುತ್ತಿದೆ, ಇದು ಮಾನವನ ಆರೋಗ್ಯಕ್ಕೆ ತುಂಬಾ ಅಪಾಯಕಾರಿ ಎಂದು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಡಾ. ಅಬ್ದುಲ್ ಕರೀಮ್ ಎಂ., ಸಹಾಯಕ ಪ್ರಾಧ್ಯಾಪಕರು, ಇವರು ಬೋರ್ಡೋ ಮಿಶ್ರಣ ದ್ರಾವಣ ತಯಾರಿಸುವ ವಿಧಾನದ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ಸಮಗ್ರವಾದಂತಹ ಮಾಹಿತಿಯನ್ನು ಒದಗಿಸಿದರು.

ಈ ಸಂಧರ್ಭದಲ್ಲಿ ಸ್ಥಳೀಯ ರೈತರು, ಮಹಾವಿದ್ಯಾಲಯದ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು. ಡಾ. ವಿ.ಪಿ. ಸಿಂಗ್, ವಿಸ್ತರಣಾ ಮುಂದಾಳು, ತೋ.ವಿ.ಶಿ.ಘ., ಇವರು "ಸಸ್ಯ ಸಂತೆ ಸಪ್ತಾಹ" ಕಾರ್ಯಕ್ರಮವನ್ನು ಆಯೋಜಿಸಿ ಎಲ್ಲಾ ಗಣ್ಯರಿಗೆ ಸ್ವಾಗತಿಸಿದರು. ಡಾ. ಹರೀಶ ಟಿ., ಸಹಾಯಕ ಪ್ರಾಧ್ಯಾಪಕರು ಇವರು ಕಾರ್ಯಕ್ರಮ ನಿರೂಪಿಸಿದರು. ಡಾ. ಜಾನ್ಹವಿ ಡಿ. ಆರ್., ಸಹಾಯಕ ಪ್ರಾಧ್ಯಾಪಕರು ಇವರು ವಂದಿಸಿದರು.

# ವಿದ್ಯುತ್ ಅವಘಡ ಮನೆ ಭಸ್ಮ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್ :ಜು.1:ದಕ್ಷಿಣ ಕ್ಷೇತ್ರದ ಕೋಳಾರ ಬಿ ಗ್ರಾಮದಲ್ಲಿ ವಿದ್ಯುತ್ ಶಾರ್ಟ್ ಸರ್ಕಿಟ್‌ನಿಂದ ಮನೆಯೊಂದಕ್ಕೆ ಬೆಂಕಿ ತಗುಲಿ ಅಪಾರ ನಷ್ಟ ಸಂಭವಿಸಿದೆ ಈ ನಿಮಿತ್ತ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಅಧಿಕಾರಿಗಳೊಂದಿಗೆ ಸಂತ್ರಸ್ತ ಮನೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ತಿಳಿಸಿ ವ್ಯಯಕ್ತಿಯ ಸಹಾಯಧನ ನೀಡಿ ಸರ್ಕಾರದಿಂದ ಪರಿಹಾರ ಒದಗಿಸುವದಾಗಿ ಭರವಸೆ ನೀಡಿದರು.

ಭಾನುವಾರ ಸಂಜೆ ಹೊತ್ತಿಗೆ ಕೋಳಾರ ಬಿ ಗ್ರಾಮದ ಮಮತಾ ಗಂಡ ಶ್ರೀನಿವಾಸ ಹಲಗೆ ಅವರ ಮನೆಯೇ ಬೆಂಕಿಗೆ ಆಹುತಿಯಾಗಿರುವುದು ಕುಟುಂಬಸ್ಥರು ಮನೆಯ ಹೊರಗೆ ಇದ್ದಾಗ ಈ ದುರ್ಘಟನೆ ನಡೆದಿದೆ. ಮನೆಯಲ್ಲಿ ಶೇಖರಿಸಿಟ್ಟಿದ ಅಪಾರ ಪ್ರಮಾಣದ ಜೋಳ, ಕಡಲೆ, ದವಸ ಧಾನ್ಯಗಳು ಮನೆಯಲ್ಲಿದ್ದ ವಸ್ತುಗಳು ಬೆಂಕಿಯಿಂದ ಸುಟ್ಟುಹೋಗಿವೆ. ಈ ಕುರಿತು ಸ್ಥಳೀಯ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಅವಘಡ ಸಂಭವಿಸಿದ ವೇಳೆ ಸಾರ್ವಜನಿಕರು , ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ.ಬೆಂಕಿಗೆ ಆಹುತಿಯಾದ ಮನೆ ನೋಡಲು ನೂರಾರು ಸಂಖ್ಯೆಯಲ್ಲಿ ಜನರು ಸೇರಿದ್ದರು. ಲಕ್ಷಾಂತರ ರೂ. ಮೌಲ್ಯದ ದವಸ, ಧಾನ್ಯ ಸುಟ್ಟಿದೆ ಪರಿಹಾರ ನೀಡಬೇಕು ಎಂದು ಸಂತ್ರಸ್ತ ಮಹಿಳೆ ಶಾಸಕರೆದುರು ಅಳಲು ತೋಡಿ–ಕೊಂಡರು. ಶಾಸಕರು ಪರಿಶೀಲನೆ ನಡೆಸಿ ಹಾನಿಯಾದ ವಸ್ತುಗಳಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸುವಂತೆ ಸ್ಥಳದಲ್ಲಿದ್ದ ಜೆಸ್ಕಾಂ ಎಇಇ ಅವರಿಗೆ ಸೂಚಿಸಿದರು.ಈ ಸಂದರ್ಭದಲ್ಲಿ ಜೆಸ್ಕಾಂ ಎಇಇ ವಿಜಯಕುಮಾರ ಪಾಂಚಾಳ, ಮುಖಂಡರಾದ ಹಣಮಂತರಾವ ಮೈಲಾರೆ, ಶಿವಶಂಕರ ಬುಳ್ಳಾ, ಗ್ರಾಪಂ ಉಪಾಧ್ಯಕ್ಷ ಶಿವಕುಮಾರ ಕೊಳಾರೆ, ಕಾಶಿನಾಥ ಮೇತ್ರೆ, ರೇವಣ್ಣಪ್ಪ ಚಿಲ್ಲರ್ಗಿ, ರಾಜಶೇಖರ ನೌಬಾದೆ, ಸಂತೋಷರೆಡ್ಡಿ, ಸಂತೋಷ ಸೋರಳ್ಳಿ, ಬಸವರಾಜ ಪಟೋದಿ, ಸತೀಶ ಹೊಕ್ರಾಣೆ, ಅಮರ ಚಾಂಬಳೆ, ರುಕ್ಮೋದಿನ್ನ, ಲಕ್ಷ್ಮಿಬಾಯಿ ಮತ್ತಿತರರು ಉಪಸ್ಥಿತರಿದ್ದರು.

# ಮಾನವೀಯ ಮೌಲ್ಯ ಮೈಗೂಡಿಸಿಕೊಳ್ಳದಿದ್ದಲ್ಲಿ ಯಾವ ಪದವಿ ಗಳಿಸಿದರೂ ವ್ಯರ್ಥ:ಪ್ರೊ.ಜಗನ್ನಾಥ ಹೆಬ್ಬಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.01 : ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳದಿದ್ದಲ್ಲಿ ಯಾವ ಪದವಿ ಗಳಿಸಿದರೂ ವ್ಯರ್ಥ ಬೀದರ ವಿಶ್ವವಿದ್ಯಾಲಯದ ನಿವೃತ್ತ ಡೀನ್ ಪ್ರೊ. ಜಗನ್ನಾಥ ಹೆಬ್ಬಾಳೆ ಅಭಿಪ್ರಾಯ ವ್ಯಕ್ತಪಡಿಸಿದರು. ಅವರು ಇತ್ತೀಚಿಗೆ ತೋಟಗಾರಿಕೆ ಮಹಾವಿದ್ಯಾಲಯ ಬೀದರನಲ್ಲಿ ಹಮ್ಮಿಕೊಂಡಿದ್ದ 15ನೇ ತೋಟಗಾರಿಕೆ ಮಹಾವಿದ್ಯಾಲಯ ಮತ್ತು ವಸತಿ ನಿಲಯಗಳ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ತೋಟಗಾರಿಕಾ ಪದವಿಯು ಯಾವುದೇ ಪದವಿಗಿಂತ ಕಡಿಮೆ ಇಲ್ಲ, ಇದರಲ್ಲಿ ವಿಪುಲ ಉದ್ಯೋಗಾವಕಾಶಗಳಿದ್ದು, ವಿದ್ಯಾರ್ಥಿಗಳು ತೋಟಗಾರಿಕಾ ಪದವಿಯಲ್ಲಿ ಪಡೆದ ಜ್ಞಾನಾರ್ಜನೆಯು ರೈತರ ಸಹಾಯಕ್ಕಾಗಿ ಸದ್ಬಳಕೆಯಾಗಿ ಹೊರಹೊಮ್ಮಿದಲ್ಲಿ ತಂದೆ–ತಾಯಿ ಮತ್ತು ಗುರುಗಳ ಋಣ ತೀರಿಸಿದಂತಾಗುತ್ತದೆ. ವಿದ್ಯಾರ್ಥಿಗಳು ಜಾಗೃತೆಯಿಂದ ಸರಿಯಾದ ರೀತಿಯಲ್ಲಿ ಅಭ್ಯಾಸ ಮಾಡಿದಾಗ ಯಶಸ್ಸು ಸಾಧ್ಯವೆಂದು ಹಾಗೂ ಪಠ್ಯಕ್ರಮದ ಜೊತೆಗೆ ಮಾನವೀಯ ಮೌಲ್ಯಗಳ ಕಡೆಕೂಡ ಹೆಚ್ಚು ಗಮನಕೊಡಬೇಕೆಂದರು.ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಬರಿ ಪಠ್ಯಕ್ರಮಕ್ಕೆ ಸೀಮಿತರಾಗದೆ ಸಮಾಜ ಮುಖಿಯಾಗಿ ಕಾರ್ಯನಿರ್ವಹಿಸಿದಲ್ಲಿ ಸಮಾಜ ಮನ್ನಣೆ ನೀಡುತ್ತದೆ. ಶಿಕ್ಷಣ ಅಂದರೆ ಕೇವಲ ಪದವಿ ಪಡೆಯುವುದಷ್ಟೇ ಅಲ್ಲ. ಓದು, ಬರಹ ನಿರಂತರವಾಗಿ ಅಳವಡಿಸಿಕೊಂಡಲ್ಲಿ ಪರಿಪಕತ್ವ ಬರುತ್ತದೆ. ಸರಿಯಾದ ಕೆಲಸವನ್ನು, ಸರಿಯಾದ ಸಮಯದಲ್ಲಿ, ಸರಿಯಾದ ರೀತಿಯಲ್ಲಿ ಮಾಡಿ ಮುಗಿಸಿದ್ದಲ್ಲಿ ಅದು ಯಶಸ್ವಿನ ಭಾಗವೆಂದು ಹೇಳಿದರು.ಶಿಕ್ಷಣವನ್ನು ಪಡೆಯುವುದು ಬರಿ ಸರ್ಕಾರಿ ನೌಕರಿಗಾಗಿ ಅಲ್ಲ ಅದೊಂದು ಜೀವನವನ್ನು ರೂಪಿಸುತ್ತದೆ. ಪದವಿ ಪಡೆಯುವುದು ಅಂದರೆ ಕೇವಲ ಗೇಟ ಪಾಸ್ ಅಂತ ತಿಳಿದುಕೊಳ್ಳಬೇಕು, ಯಶಸ್ವಿಗಾಗಿ ಮುಂದೆ ಬಹಳ ಪ್ರಯತ್ನ ಮಾಡಬೇಕಾಗುತ್ತದೆ. ವಿದ್ಯಾರ್ಥಿಗಳು ಕೇವಲ ತೋಟಗಾರಿಕೆ ಕ್ಷೇತ್ರಕ್ಕೆ ಮಾತ್ರ ಸೀಮಿತರಾಗದೇ, ಐ.ಎ.ಎಸ್. ನಂತಹ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುವ ಮುಖಾಂತರ ಉನ್ನತ ಹುದ್ದೆಯನ್ನು ಪಡೆದು ಯಶಸ್ವಿಯಾಗಿ ಈ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಿ ಮಾದರಿ ವ್ಯಕ್ತಿಗಳಾಗಬೇಕೆಂದು ಹೇಳಿದರು.ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್. ವಿ. ಪಾಟೀಲ ಮಾತನಾಡಿ, ಮಹಾವಿದ್ಯಾಲಯ ಹಾಗೂ ವಸತಿ ನಿಲಯಗಳ ವಾರ್ಷಿಕೋತ್ಸವ ಕಾರ್ಯಕ್ರಮವು ಅತ್ಯಂತ ಮಹತ್ವವುಳ್ಳದೆಂದು ಸ್ನಾತಕ ಪದವಿಧರಾಗುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ತಿಳಿಸಿದರು. ತಮ್ಮಲ್ಲಿರುವ ಶಕ್ತಿ ಸಾಮರ್ಥ್ಯವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡು ದೇಶಕ್ಕೆ ಮತ್ತು ಸಮಾಜಕ್ಕೆ ಒಂದು ಉತ್ತಮ ಕೊಡುಗೆಯನ್ನು ನೀಡಬೇಕು. ಇನ್ನು ಹೆಚ್ಚು ಹೆಚ್ಚಿನ ವಿದ್ಯಾರ್ಥಿಗಳು ಎಸ್.ಆರ್.ಎಫ್., ಜೆ.ಆರ್.ಎಫ್. ಪದಕಗಳನ್ನು ಪಡೆದುಕೊಳ್ಳುವುದು ಮಾತ್ರವಲ್ಲದೇ, ಸ್ವಾವಲಂಬಿ ಉದ್ಯಮಿಗಳಾಗಬೇಕೆಂದು ಹಾಗೂ ರೈತರಿಗೆ ಅತ್ಯುತ್ತಮ ಸಲಹೆ ಸೂಚನೆಗಳನ್ನು ನೀಡಿ ಈ ನಾಡಿಗೆ ಮತ್ತು ವಿಶ್ವವಿದ್ಯಾಲಯಕ್ಕೆ ಒಳ್ಳೆಯ ಕೀರ್ತಿ ತರಬೇಕೆಂದು ಸಲಹೆ ನೀಡಿದರು.ವಾರ್ಷಿಕೋತ್ಸವ ನಿಮಿತ್ತ ಹಮ್ಮಿಕೊಂಡಿರುವ ಕ್ರೀಡಾಕೂಟಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ಗಣ್ಯರಿಂದ ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ.ಪ್ರಸನ್ನ ಎಸ್.ಎಮ್., ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು, ವಿದ್ಯಾರ್ಥಿ ಸಂಘದ ಪ್ರತಿನಿಧಿಗಳಾದ ಮಧು ಸ್ಮೇತಾ, ಅಧ್ಯಕ್ಷರು, ದಿವ್ಯಾ, ಪ್ರಧಾನ ಕಾರ್ಯದರ್ಶಿ, ಪಲ್ಲವಿ, ಕ್ರೀಡಾ ಕಾರ್ಯದರ್ಶಿ, ಸಾಗರ ಪಿ., ಸಾಂಸ್ಕೃತಿಕ ಕಾರ್ಯದರ್ಶಿ, ವಸತಿ ನಿಲಯಗಳ ನಿರ್ವಹಣಾ ಪದಾಧಿಕಾರಿಗಳಾದ ನಿತಿನ್‌ಗೌಡ, ಪ್ರಧಾನ ಕಾರ್ಯದರ್ಶಿ, ಮನೋಜ ಪಾಟೀಲ, ಸಹ ಕಾರ್ಯದರ್ಶಿ, ಭಗವಂತರಾಯ, ಭೋಜನ ಕಾರ್ಯದರ್ಶಿ, ಅಲೋಕ್ ಪಾಟೀಲ್, ಕ್ರೀಡಾ ಕಾರ್ಯದರ್ಶಿ ಹರ್ಷ, ಆರೋಗ್ಯ ಕಾರ್ಯದರ್ಶಿ ಆಯುಷ್, ಸಾಂಸ್ಕೃತಿಕ ಕಾರ್ಯದರ್ಶಿ ಸಿಮ್ರಾನ್, ಪ್ರಧಾನ ಕಾರ್ಯದರ್ಶಿ .ದಿವ್ಯಾ ಉಪ್ಪೆ, ಸಹ ಕಾರ್ಯದರ್ಶಿ ಐಶ್ವರ್ಯ, ಭೋಜನ ಕಾರ್ಯದರ್ಶಿ ಶಿವಬಸಮ್ಮ, ಕ್ರೀಡಾ ಕಾರ್ಯದರ್ಶಿ ಕೀರ್ತಿ., ಆರೋಗ್ಯ ಕಾರ್ಯದರ್ಶಿ ರಂಜಿತಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಚನಗಳು ಬದುಕಿಗೆ ದಾರಿದೀಪ: ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.1: ಸುಂದರ ಬದುಕಿಗೆ ದಾರಿ ದೀಪವಾಗಿರುವ ವಚನಗಳನ್ನು ಪ್ರತಿಯೊಬ್ಬರು ಅರ್ಥೈಸಿಕೊಳ್ಳಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್‌ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಬ್ಯಾಲಹಳ್ಳಿ(ಡಬ್ಲ್ಯೂ) ಗ್ರಾಮದಲ್ಲಿ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ಮಹಿಳಾ ವೇದಿಕೆ ಬೀದರ್ ಸಹಯೋಗದಲ್ಲಿ ಮಂಗಳವಾರ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಂಪಾದಿಸಿದ ವಚನಾಮೃತ ಗ್ರಂಥ ಬಿಡುಗಡೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ವಚನಗಳಲ್ಲಿ ಬದುಕಿನ ಸಾರ ಅಡಗಿದೆ. ಪ್ರತಿಯೊಬ್ಬರು ಪ್ರತಿದಿನ ನಾಲ್ಕೈದು ವಚನ ಪಠಣ ಮಾಡಿದರೆ ಬದುಕು ಸುಂದರವಾಗಿ ರೂಪಗೊಳ್ಳಲಿದೆ ಎಂದು ತಿಳಿಸಿದರು.ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಗ್ರಂಥ ಪರಿಚಯ ಮಾಡಿಕೊಟ್ಟರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ವಚನಾಮೃತ ಗ್ರಂಥ ಬಿಡುಗಡೆಗೊಳಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಂಥ ದಾಸೋಹಿಗಳಾದ ಸೋಮನಾಥ ಪಾಟೀಲ್, ಹಿರಿಯ ಸಾಹಿತಿ ವೀರಣ್ಣ ಕುಂಬಾರ ಸೇರಿದಂತೆ ಹಲವರು ಇದ್ದರು. ಮಂಗಲಾ ಸೋಮನಾಥ ಪಾಟೀಲ್ ಸ್ವಾಗತಿಸಿದರು.

ರಾಜು ಜುಬರೆ ನಿರೂಪಿಸಿ ವಂದಿಸಿದರು.

# 'ಐ ಲವ್ ಯು' ಅನ್ನೋದ್ರಲ್ಲಿ ಲೈಂಗಿಕ ಉದ್ದೇಶವಿಲ್ಲ : ಬಾಂಬೆ ಹೈಕೋರ್ಟ್

ಮುಂಬೈ:ಜು.1: ನಾನು ನಿನ್ನನ್ನು ಪ್ರೀತಿಸುತ್ತೇನೆ ಎನ್ನುವುದು ಭಾವನೆಗಳ ಅಭಿವ್ಯಕ್ತಿಯೇ ಹೊರತು ಅದರಲ್ಲಿ ಲೈಂಗಿಕ ಉದ್ದೇಶ ಇರುವುದಿಲ್ಲ' ಎಂದು ಬಾಂಬೆ ಹೈಕೋರ್ಟ್‌ನ ನಾಗ್ಪುರ ಪೀಠ ಅಭಿಪ್ರಾಯಪಟ್ಟಿದೆ.

2015ರಲ್ಲಿ ವ್ಯಕ್ತಿಯೊಬ್ಬ 17 ವರ್ಷದ ಬಾಲಕಿಯೊಬ್ಬಳ ಕೈಹಿಡಿದು 'ಐ ಲವ್ ಯು' ಎಂದು ಹೇಳಿದ್ದಕ್ಕೆ ಲೈಂಗಿಕ ಕಿರುಕುಳ ಆರೋಪದಡಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ವಿಚಾರಣೆ ನಡೆಸಿದ ಸೆಷನ್ ನ್ಯಾಯಾಲಯವು, ತಪ್ಪಿತಸ್ಥ ಎಂದು ಪರಿಗಣಿಸಿ ಪೋಕ್ಸೋ ಕಾಯ್ದೆಯಡಿ 2017ರಲ್ಲಿ ಮೂರು ವರ್ಷಗಳ ಜೈಲು ಶಿಕ್ಷೆ ಪ್ರಕಟಿಸಿತ್ತು. ಕೆಳಹಂತದ ನ್ಯಾಯಾಲಯದ ಆದೇಶವನ್ನು ವ್ಯಕ್ತಿಯು



ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು.ಸೆಷನ್ ನ್ಯಾಯಾಲಯದ ಆದೇಶವನ್ನು ರದ್ದುಗೊಳಿಸಿದ ಹೈಕೋರ್ಟ್, ವ್ಯಕ್ತಿಯ ವಿರುದ್ಧದ ಆರೋಪದಲ್ಲಿ ಯಾವುದೇ ಲೈಂಗಿಕ ಉದ್ದೇಶ ಕಂಡುಬಂದಿಲ್ಲ. 'ನಾನು ನಿನ್ನನ್ನು ಪ್ರೀತಿಸುತ್ತೇನೆ' ಎಂದು ಪದಗಳಲ್ಲಿ ಹೇಳಿದರೆ ಅದರಲ್ಲಿ ಯಾವುದೇ ಲೈಂಗಿಕ ಉದ್ದೇಶ ಇರುವುದಿಲ್ಲ ಎಂದು ನ್ಯಾ. ಊರ್ಮಿಳಾ ಜೋಶಿ ಫಾಲ್ಕೆ ಅವರಿದ್ದ ಪೀಠ ತನ್ನ ಆದೇಶದಲ್ಲಿ ಹೇಳಿದೆ. 'ಅನುಚಿತ ಸ್ಪರ್ಶ, ಬಲವಂತದಿಂದ ಬಟ್ಟೆ ತೆಗೆಯುವುದು, ಅಸಭ್ಯ ಸನ್ನೆಗಳು ಲೈಂಗಿಕ ಉದ್ದೇಶವಾಗಿದ್ದು, ಇವುಗಳು ಮಹಿಳೆಯ ಘನತೆಗೆ ಅವಮಾನ ಮಾಡಿದಂತೆ ಆಗುತ್ತದೆ. ?ಐ ಲವ್ ಯು' ಎಂದರೆ ಅದು ಲೈಂಗಿಕ ಉದ್ದೇಶ ಎಂದು ಹೇಳಲು ಬೇರೆಯದೇ 'ವ್ಯಾಖ್ಯಾನದ ಅಗತ್ಯವಿದೆ' ಎಂದು ಪೀಠ ಹೇಳಿದೆ. ಬಾಲಕಿಯೊಬ್ಬಳು ಕಾಲೇಜಿನಿಂದ ಮನೆಗೆ ವಾಪಸ್ ಆಗುವಾಗ, ಆರೋಪಿ ಕೈಹಿಡಿದು ಹೆಸರು ಕೇಳಿದ್ದಾನೆ. ನಂತರ 'ಐ ಲವ್ ಯು' ಎಂದಿದ್ದಾನೆ. ಆತನಿಂದ ತಪ್ಪಿಸಿಕೊಂಡು ಮನೆಗೆ ಹೋಗಿದ್ದ ಬಾಲಕಿ, ತನ್ನ ತಂದೆಗೆ ಮಾಹಿತಿ ನೀಡಿದ್ದಳು. ಬಳಿಕ ಈ ಸಂಬಂಧ ದೂರು ದಾಖಲಾಗಿತ್ತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.